ಸಂಪುಟ: 04 ಸಂಚಿಕೆ: 84 ಪುಟಗಳು: 08 ಶುಕ್ರವಾರ 07 ಜೂನ್ 2024

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ಪ್ರತಿ ದಿನವನ್ನು ಹೊಸ ದಿನವೆಂದು ಪ್ರಾರಂಭಿಸಿ. ಹಳೆಯ ಕೆಟ್ಟ ಘಟನೆಗೆ ಕೊರಗದೆ, ಒಳ್ಳೆಯ ಘಟನೆಗೆ ಅಹಂಕಾರ ಪಡದೆ ಪ್ರತಿ ದಿನವನ್ನು ಹೊಸ ದಿನವಾಗಿ ಪ್ರಾರಂಭಿಸಿ.

ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಸಿದ್ದು ಸರ್ಕಾರದ ಮೊದಲ ವಿಕೆಟ್ ಪತನ, ಸಚಿವ ರಾಜೀನಾಮೆ

• ಉದಯವಾಹಿನಿ, ಬೆಂಗಳೂರು

ಸಿದ್ದರಾಮಯ್ಯ ಸರ್ಕಾರದ ಮೊದಲ ವಿಕೆಟ್ ಪತನ ವಾಗಿದ್ದು, ಸಚಿವ ನಾಗೇಂದ್ರ ಅವರು ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೇ ನೀಡಿದ್ದಾರೆ. ಅವರು ಇಂದು ಸಿಎಂ ಸಿದ್ದರಾಮಯ್ಯ ಅವರ ಕಾವೇರಿ ನಿವಾಸಕ್ಕೆ ಭೇಟಿ ನೀಡಿ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಬಹುಕೋಟಿ ರೂ. ವರ್ಗಾವಣೆ ಪ್ರಕರಣ ಸಂಬಂಧ ಅವರು ರಾಜೀನಾಮೆ ನೀಡಿದ್ದಾರೆ.

ಏನಿದು ಪ್ರಕರಣ: ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಬಹುಕೋಟಿ ರೂಪಾಯಿ ವರ್ಗಾವಣೆ ಪ್ರಕರಣದ ತನಿಖೆ ಸಂಬಂಧ ಬ್ಯಾಂಕ್ ಆಫ್ ಇಂಡಿಯಾದ ಮೂವರು ಉದ್ಯೋಗಿಗಳು ಹಾಗೂ ಇಬ್ಬರು ಖಾಸಗಿ ವ್ಯಕ್ತಿಗಳ ವಿರುದ್ಧ ಸಿಬಿಐ ಎಫ್ಐಆರ್ ದಾಖಲಿಸಿಕೊಂಡಿದೆ. ಇನ್ನೊಂದೆಡೆ ಕ್ಷಿಪ್ರ ತನಿಖೆ ಮುಂದುವರಿಸಿರುವ ಎಸ್ಐಟಿ ಅಧಿಕಾರಿಗಳು ಸಚಿವ ನಾಗೇಂದ್ರ ಆಪ್ತರು ಎನ್ನಲಾದ ನಾಗರಾಜು ನೆಕ್ಕಂಟಿ ಹಾಗೂ ನಾಗೇಶ್ವರ್ ರಾವ್ ಎಂಬುವವರನ್ನು ಬಂಧಿಸಿದೆ.

## ನೀಡಿದ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸುವೆ

• ಉದಯವಾಹಿನಿ, ಹುಬ್ಬಳ್ಳಿ

ಯಾವುದೇ ಸ್ಥಾನಮಾನ ನೀಡುವಂತೆ ಒತ್ತಡ ಹೇರಿಲ್ಲ. ಹೇರುವುದಿಲ್ಲ. ಆದರೆ ನೀಡಿದ ಜವಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸುತ್ತೇನೆ ಎಂದು ನೂತನವಾಗಿ ಬೆಳಗಾವಿ ಸಂಸದರಾಗಿ ಆಯ್ಕೆಯಾದ ಜಗದೀಶ ಶೆಟ್ಟರ ತಿಳಿಸಿದರು. ಲೋಕಸಭೆ ಚುನಾವಣೆಯಲ್ಲಿ ಜಯಗಳಿಸಿದ ನಂತರ ಬುಧವಾರ ಮೊದಲ ಬಾರಿಗೆ ನಗರಕ್ಕೆ ಆಗಮಿಸಿದ ನಂತರ ಇಲ್ಲಿನ ಶ್ರೀ ಸಿದ್ಧಾರೂಢ ಮಠಕ್ಕೆ ಆಗಮಿಸಿ ಉಭಯ ಶ್ರೀಗಳ ಗದ್ದುಗೆ ಪೂಜೆ ನೆರವೇರಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಕೇಂದ್ರದಲ್ಲಿ ನರೇಂದ್ರ ಮೋದಿ ನಾಯಕತ್ವದಲ್ಲಿ ಎನ್‌ಡಿಎ ಸರಕಾರ ಅಧಿಕಾರಕ್ಕೆ ಬರುವುದರಲ್ಲಿ ಸಂಶಯವಿಲ್ಲ. ಬೆಳಗಾವಿಯನ್ನು ಮಾದರಿ ಲೋಕಸಭಾ ಕ್ಷೇತ್ರವನ್ನಾಗಿ ಮಾಡಿ, ಸ್ವಚ್ಛ ಸುಂದರ ನಗರವನ್ನಾಗಿಸುವುದಲ್ಲದೆ, ಗ್ರಾಮೀಣ ಭಾಗದಲ್ಲಿ ಹಲವು ಉದ್ಯಮ ತೆರೆದು ನಿರುದ್ಯೋಗಿಗಳ ಕೈಗೆ ಉದ್ಯೋಗ ಒದಗಿಸುವುದು ಸೇರಿದಂತೆ ಚುನಾವಣಾ ಪೂರ್ವದಲ್ಲಿ ನೀಡಿದ್ದ ಎಲ್ಲಾ ಭರವಸೆಗಳನ್ನು ಈಡೇರಿಸುವುದಾಗಿ ತಿಳಿಸಿದರು.

## ಭವಾನಿ ರೇವಣ್ಣ ಬಂಧನಕ್ಕೆ ಕೋರ್ಟ್ ವಾರಂಟ್ ಜಾರಿ


• ಉದಯವಾಹಿನಿ, ಬೆಂಗಳೂರು

ಕಿಡ್ನ್ಯಾಪ್ ಕೇಸ್‌ನಲ್ಲಿ ತಲೆಮರೆಸಿಕೊಂಡಿರುವ ಭವಾನಿ ರೇವಣ್ಣ ಬಂಧನಕ್ಕೆ ಕೋರ್ಟ್ ವಾರಂಟ್ ಜಾರಿ ಮಾಡಿದೆ. ವಿಚಾರಣೆಗೆ ಆಗಮಿಸುವಂತೆ ಎಸ್ಐಟಿ ನೋಟಿಸ್ ನೀಡಿತ್ತು. ವಿಚಾರಣೆಗೆ ಹಾಜರಾಗದ ಹಿನ್ನೆಲೆಯಲ್ಲಿ ನಿರೀಕ್ಷಣಾ ಜಾಮೀನು ಅರ್ಜಿ ವಜಾಗೊಂಡಿತ್ತು. ಇದರ ಬೆನ್ನಲ್ಲೇ ಭವಾನಿ ರೇವಣ್ಣ ವಿರುದ್ಧ 42ನೇ ಎಸಿಎಂಎಂ ಕೋರ್ಟ್ ಬಂಧನ ವಾರಂಟ್ ಹೊರಡಿಸಿದೆ.

## ಭೋವಿ ನಿಗಮದ ಭ್ರಷ್ಟಾಚಾರ ಕೇಸ್ ಎಸ್ಐಟಿಗೆ

• ಉದಯವಾಹಿನಿ, ಬೆಂಗಳೂರು

ಬಿಜೆಪಿ ಅಧಿಕಾರವಧಿಯಲ್ಲಿ ಭೋವಿ ಅಭಿವೃದ್ಧಿ ನಿಗಮದಲ್ಲಿ ನೂರಾರು ಕೋಟಿ ಅವ್ಯವಹಾರವಾಗಿದ್ದು, ಅಂದಿನ ಸಮಾಜ ಕಲ್ಯಾಣ ಸಚಿವರಾಗಿದ್ದ ಕೋಟಾ ಶ್ರೀನಿವಾಸ ಪೂಜಾರಿಗೆ ಲಂಚ ಸಂದಾಯವಾಗಿದೆ ಎಂದು ಮಾಜಿ ಶಾಸಕ ಗೂಳಿಹಟ್ಟಿ ಶೇಖರ್ ಆರೋಪಿಸಿದ್ದಾರೆ. ಇದರ ಬೆನ್ನಲ್ಲೇ ಈ ಪ್ರಕರಣದ ಕುರಿತು ತನಿಖೆ ನಡೆಸಲು ವಿಶೇಷ ತನಿಖಾ ದಳವನ್ನು ರಚನೆ ಮಾಡಲು ತೀರ್ಮಾನಿಸಿದೆ ಎಂದು ವರದಿಯಾಗಿದೆ. ವಾಲ್ಮೀಕಿ ನಿಗಮದ



ಸುಮಾರು 187 ಕೋಟಿ ಹಣ ವರ್ಗಾವಣೆ ಪ್ರಕರಣವನ್ನು ಈಗಾಗಲೇ ಸರ್ಕಾರ ಎಸ್ಐಟಿ ತನಿಖೆಗೆ ವಹಿಸಿದೆ. ಇದರ ನಂತರ ಭೋವಿ ಅಭಿವೃದ್ಧಿ ನಿಗಮದ ಭ್ರಷ್ಟಾಚಾರ ಪ್ರಕರಣವನ್ನು ಎಸ್ಐಟಿಗೆ ವಹಿಸಲು ಸರ್ಕಾರ ನಿರ್ಧಾರಿಸಿದೆ ಎನ್ನಲಾಗಿದೆ. ಗೂಳಿಹಳ್ಳಿ ಶೇಖರ್ ಅವರು 13 ನಿಮಿಷಗಳ ಆಡಿಯೋ ಹೇಳಿಕೆ ಬಿಡುಗಡೆ ಮಾಡಿದ್ದು, ಸುಪ್ರೀಂಕೋರ್ಟ್ ನ್ಯಾಯಮೂರ್ತಿ ನೇತೃತ್ವದಲ್ಲಿ ಪ್ರಕರಣದ ತನಿಖೆ ನಡೆಸುವಂತೆ ಆಗ್ರಹಿಸಿದ್ದಾರೆ. ಬೊಮ್ಮಾಯಿ ಸಿಎಂ ಆಗಿದ್ದಾಗ ಕೊನೆಯ ಮೂರು ತಿಂಗಳು ಭೋವಿ ನಿಗಮದ ಅಧ್ಯಕ್ಷನಾಗಿ ಕೆಲಸ ಮಾಡಿದ್ದೇನೆ. ಕೋಟ್ಯಂತರ ರೂಪಾಯಿ ಅವ್ಯವಹಾರ ನಡೆದಿರುವುದು ಗಮನಕ್ಕೆ ಬಂದಿದೆ. ಸಚಿವರಾಗಿದ್ದ ಕೋಟಾ ಶ್ರೀನಿವಾಸ್ ಪೂಜಾರಿಗೂ ಇದರಲ್ಲಿ ಪಾಲಿದೆ ಎಂದು ಶೇಖರ್ ಆರೋಪಿಸಿದ್ದಾರೆ.

# ನಮೋ ಗ್ಯಾರಂಟಿ ಖಾತೆಗೆ ಬೇಡ ಪೈಪೋಟಿ



■ ಅಧಿಕಾರ ಹಂಚಿಕೆಗೆ ಚೌಕಾಸಿ ■ ಜೂ.9ರಂದು ಪ್ರಧಾನಿಯಾಗಿ ಮೋದಿ ಪ್ರಮಾಣ ವಚನ

- ಸಶಸ್ತ್ರ ಪಡೆಗಳಲ್ಲಿ ನೇಮಕಾತಿಗಾಗಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಅಗ್ನಿಪಥ್ ಯೋಜನೆಗೆ ವಿರೋಧ
- ಸಮ್ಮಿಶ್ರ ಸರ್ಕಾರದಲ್ಲಿ ಪ್ರಮುಖ ಪಾಲುದಾರ ಪಕ್ಷಗಳಾಗಿರುವ ಜೆಡಿಯು ಹಾಗೂ ಎಲ್‌ಜೆಪಿಯಿಂದ ಅಸಮಾಧಾನ
- ಅಗ್ನಿಪಥ್ ಯೋಜನೆಯನ್ನು ಮರು ಪರಿಶೀಲನೆ ಮಾಡಬೇಕು ಎಂದು ಆಗ್ರಹಿಸಿವೆ ಬಿಜೆಪಿ ಮಿತ್ರ ಪಕ್ಷಗಳು
- ಮೋದಿ ಸರ್ಕಾರದ ಮೂರನೇ ಅವಧಿಗೆ ಬಿಹಾರದ ಪಕ್ಷಗಳಿಂದ ಮೊದಲ ಸವಾಲು
- ಟಿಡಿಪಿ ಹಾಗೂ ಜೆಡಿಯು ಬೆಂಬಲ ಎನ್‌ಡಿಎ ಮೈತ್ರಿ ಕೂಟದ ಸರ್ಕಾರಕ್ಕೆ ನಿರ್ಣಾಯಕ
- ನಾಯ್ಡು - ನಿತೀಶ್ ಜೋಡಿ ಕೇಂದ್ರ ಸರ್ಕಾರದಲ್ಲಿ ಸಾಕಷ್ಟು ಪ್ರಾಧಾನ್ಯತೆ ಬಯಸಿದ್ದಾರೆ

**ರಾಜ್ಯಗಳಿಗೆ ಹೆಚ್ಚಿನ ಸವಲತ್ತುಗಳ ನಿರೀಕ್ಷೆ**

### ಸಾಮಾನ್ಯ ಕನಿಷ್ಠ ಕಾರ್ಯಕ್ರಮ

ಎನ್‌ಡಿಎ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಎನ್‌ಡಿಎ ಸಾಮಾನ್ಯ ಕನಿಷ್ಠ ಕಾರ್ಯಕ್ರಮ ಕಾರ್ಯಸೂಚಿಯನ್ನು ರೂಪಿಸಬೇಕು ಎಂಬ ಬಗ್ಗೆಯೂ ಮಿತ್ರ ಪಕ್ಷಗಳು ಹೇಳಿದ್ದು, ಸರ್ಕಾರ ರಚನೆಯಾದ ಮೇಲೆ ಎನ್‌ಡಿಎ ಸಾಮಾನ್ಯ ಕನಿಷ್ಠ ಕಾರ್ಯಕ್ರಮಗಳ ಕಾರ್ಯಸೂಚಿ ತಯಾರಾಗಲಿದೆ. ಕೇಂದ್ರ ಸರ್ಕಾರದ ಮಟ್ಟದಲ್ಲಿ ಮುಂದೆ ಏನೆಲ್ಲ ಕಾರ್ಯಕ್ರಮಗಳನ್ನು ಜಾರಿ ಮಾಡಬೇಕು. ಯಾವ ಕಲ್ಯಾಣ ಯೋಜನೆಗಳನ್ನು ರೂಪಿಸಬೇಕು ಎಂಬೆಲ್ಲ ಅಂಶಗಳು ಈ ಸಾಮಾನ್ಯ ಕನಿಷ್ಠ ಕಾರ್ಯಕ್ರಮದಲ್ಲಿ ಇರಲಿವೆ. ಮುಂದೆ ಯಾವುದೇ ಯೋಜನೆಯನ್ನು ಜಾರಿ ಮಾಡುವ ಮೊದಲು ಎನ್‌ಡಿಎ ಸಭೆಯಲ್ಲಿ ಚರ್ಚಿಸಿ ತೀರ್ಮಾನಗಳಾಗಬೇಕು ಎಂಬ ಬೇಡಿಕೆಯನ್ನು ಮಿತ್ರಪಕ್ಷಗಳು ಬಿಜೆಪಿ ಮುಂದೆ ಇಟ್ಟಿವೆ. ಮೋದಿ ಅವರು ಈ ಹಿಂದಿನ ಜಾರಿ ಮಾಡಿದ ರೀತಿಯಲ್ಲಿ ಕಾರ್ಯಕ್ರಮವನ್ನು ಏಕಪಕ್ಷೀಯವಾಗಿ ಜಾರಿ ಮಾಡುವುದು ಈಗಿನ ಪರಿಸ್ಥಿತಿಯಲ್ಲಿ ಕಷ್ಟ ಎಂದು ಹೇಳಲಾಗಿದೆ.

• ಉದಯವಾಹಿನಿ, ನವದೆಹಲಿ

ಎನ್‌ಡಿಎ ಮೈತ್ರಿಕೂಟದ ನಾಯಕನಾಗಿರುವ ಮೋದಿ ಅವರು ಜೂ.9ರಂದು ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ. ಪ್ರಮಾಣ ವಚನ ಸಮಾರಂಭವನ್ನು ಜೂ.8 ಕ್ಕೆ ನಿಗದಿಪಡಿಸಲಾಗಿತ್ತು. ಆದರೆ ಜೂ. 9 ರಂದು ಸಂಜೆ 6 ಗಂಟೆಗೆ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ ಎನ್ನಲಾಗುತ್ತಿದೆ. ದಿನಾಂಕ ಅಂತಿಮಗೊಳಿಸುವ ಬಗ್ಗೆ ಇನ್ನೂ ಅಧಿಕೃತ ಮಾಹಿತಿ ಹೊರಬಿದ್ದಿಲ್ಲ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಪ್ರಧಾನಿ ನರೇಂದ್ರ ಮೋದಿ ಈಗಾಗಲೇ ರಾಜೀನಾಮೆ ಸಲ್ಲಿಸಿದ್ದಾರೆ. ಜೂ.9ರಂದು ಮೂರನೇ ಅವಧಿಗೆ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಕಾಂಗ್ರೆಸ್ ನೇತೃತ್ವದ ಇಂಡಿಯಾ ಮೈತ್ರಿಕೂಟ ಮತ್ತು ಬಿಜೆಪಿ ನೇತೃತ್ವದ ಎನ್‌ಡಿಎ ಎರಡೂ ಪಕ್ಷಗಳಿಂದ ಬುಧವಾರ ತೀವ್ರ ಮಾತುಕತೆಗಳು ಮತ್ತು ಪ್ರಮುಖ ಸಭೆಗಳು ನಡೆದಿವೆ. ಯಾವುದೇ ಪಕ್ಷವು ಸ್ವತಂತ್ರವಾಗಿ ಸರ್ಕಾರ ರಚಿಸಲು ಜನಾದೇಶ ಪಡೆದುಕೊಂಡಿಲ್ಲ. ಎನ್‌ಡಿಎ ಒಕ್ಕೂಟದ ಮಿತ್ರ ಪಕ್ಷಗಳ ನಾಯಕರು ತಮ್ಮ ಬೆಂಬಲ ಭರವಸೆ ನೀಡಿದ್ದು, ಮೋದಿ ಅವರು ಭಾನುವಾರದಂದು ಮೂರನೇ ಅವಧಿಗೆ ಪ್ರಮಾಣವಚನ ಸ್ವೀಕರಿಸಲು ಸಿದ್ಧರಾಗಿದ್ದಾರೆ.

ಮೂರನೇ ಬಾರಿಗೆ ದೇಶದ ಪ್ರಧಾನಿಯಾಗಿ ಮೋದಿ ಅವರ ಪ್ರಮಾಣವಚನ ಸ್ವೀಕಾರಕ್ಕೆ ಸಿದ್ಧತೆಗಳು ನಡೆದಿರುವಾಗಲೇ ಎನ್‌ಡಿಎನಲ್ಲಿ ಅಧಿಕಾರ ಹಂಚಿಕೆಯ ಚೌಕಾಸಿ ನಡೆದಿದ್ದು, ಮಿತ್ರಪಕ್ಷಗಳ ಸಚಿವ ಸ್ಥಾನ ಬೇಡಿಕೆ ಬಗ್ಗೆ ಬಿಜೆಪಿ ನಾಯಕರುಗಳು ಗುರುವಾರ ಸಭೆ ನಡೆಸಿದ್ದಾರೆ. ಎನ್‌ಡಿಎನಲ್ಲಿರುವ ಬಿಜೆಪಿಯ ಮಿತ್ರ ಪಕ್ಷಗಳು ಲೋಕಸಭೆಯ ಸ್ಪೀಕರ್‌ಸ್ಥಾನ ಸೇರಿದಂತೆ ಪ್ರಮುಖ ಖಾತೆಗಳಿಗೆ ಬೇಡಿಕೆ ಇಟ್ಟಿದ್ದು, ಯಾವ ಪಕ್ಷಗಳಿಗೆ ಎಷ್ಟು ಸಚಿವ ಸ್ಥಾನ ನೀಡಬೇಕು, ಯಾವೆಲ್ಲ ಖಾತೆ ಮಿತ್ರಪಕ್ಷಗಳಿಗೆ ಬಿಟ್ಟುಕೊಡಬೇಕು ಎಂಬ ಬಗ್ಗೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ ನಡ್ಡಾ ನಿವಾಸದಲ್ಲಿ ಬಿಜೆಪಿಯ ಪ್ರಮುಖ ನಾಯಕರುಗಳು ಸಭೆ ನಡೆಸಿ ಸಮಾಲೋಚನೆ ನಡೆಸಿದ್ದಾರೆ. ಪ್ರಧಾನಿಯಾಗಿ ಮೋದಿ ಅವರ ಪ್ರಮಾಣವಚನ ಸ್ವೀಕರಿಸುವ ಸಮಾರಂಭದಲ್ಲಿ ಬಿಜೆಪಿ ಸೇರಿದಂತೆ ಎನ್‌ಡಿಎನ ಹಲವರು ಸಚಿವ ಸ್ಥಾನದ ಪ್ರಮಾಣವಚನವನ್ನು ಸ್ವೀಕರಿಸಲಿದ್ದು, ಯಾರನ್ನೆಲ್ಲ ಮಂತ್ರಿ ಮಾಡಬೇಕು ಎಂಬ ಬಗ್ಗೆ ಬಿಜೆಪಿಯ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರ ನಿವಾಸದಲ್ಲಿ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜ್‌ನಾಥ್ ಸಿಂಗ್ ಸೇರಿದಂತೆ ಬಿಜೆಪಿ ಪ್ರಮುಖ ಮುಖಂಡರ ಸಭೆ ನಡೆದಿದ್ದು, ಈ ಸಭೆಯಲ್ಲಿ ಎನ್‌ಡಿಎ ಮಿತ್ರಪಕ್ಷಗಳಿಗೆ ಎಷ್ಟು ಸಚಿವ ಸ್ಥಾನ ನೀಡಬೇಕು, ಬಿಜೆಪಿಯಿಂದ ಎಷ್ಟು ಜನ ಸಚಿವರಾಗಬೇಕು ಎಂಬೆಲ್ಲ ವಿಚಾರಗಳ ಬಗ್ಗೆ ಈ ನಾಯಕರುಗಳು ಚರ್ಚೆ ನಡೆಸಿದ್ದಾರೆ. ಸರ್ಕಾರ ರಚನೆಯಲ್ಲಿ ಕಿಂಗ್‌ಮೇಕರ್‌ಗಳಾಗಿ ಗುರುತಿಸಿಕೊಂಡಿರುವ ತೆಲುಗುದೇಶಂ ಜೆಡಿಯು ಪಕ್ಷಗಳು ಲೋಕಸಭೆಯ ಸ್ಪೀಕರ್ ಸ್ಥಾನಕ್ಕೆ ಪಟ್ಟು ಹಿಡಿದಿದ್ದು, ಸ್ಪೀಕರ್ ಸ್ಥಾನವನ್ನು ಮಿತ್ರಪಕ್ಷಗಳಿಗೆ ಬಿಟ್ಟುಕೊಡಬೇಕೇ ಇಲ್ಲವೇ ತನ್ನಲ್ಲೇ ಉಳಿಸಿಕೊಳ್ಳಬೇಕೇ ಎಂಬ ಬಗ್ಗೆ ಬಿಜೆಪಿ ನಾಯಕರ ಸಭೆ ಯಲ್ಲಿ ಸಮಾಲೋಚನೆಗಳು ನಡೆದಿವೆ ಎಂದು ಹೇಳಲಾಗಿದೆ. ಲೋಕಸಭೆಯ ಸ್ಪೀಕರ್‌ಸ್ಥಾನದ ಬಗ್ಗೆ ತೆಲುಗುದೇಶಂನ ಮುಖ್ಯಸ್ಥ ಚಂದ್ರಬಾಬುನಾಯ್ಡು, 4 ಸಂಪುಟ ದರ್ಜೆಯ ಸಚಿವ ಸ್ಥಾನಕ್ಕೆ ಪಟ್ಟು ಹಿಡಿದಿದ್ದು, ಜೆಡಿಯುನ ಮುಖ್ಯಸ್ಥ ಬಿಹಾರದ ಮುಖ್ಯಮಂತ್ರಿ ನಿತೀಶ್‌ಕುಮಾರ್ ರೈಲ್ವೆಯಂತಹ ಮಹತ್ವದ ಖಾತೆ ಸೇರಿದಂತೆ ಮೂರು ಸಂಪುಟ ದರ್ಜೆಯ ಸಚಿವಸ್ಥಾನಕ್ಕೆ ಬೇಡಿಕೆ ಇಟ್ಟಿದ್ದಾರೆ. ಶಿವಸೇನೆ 1, ಸಂಪುಟ ದರ್ಜೆ 2, ರಾಜ್ಯ ಸಚಿವ ಖಾತೆಗಳಿಗೆ ಬೇಡಿಕೆ ಇಟ್ಟಿದ್ದರೆ, ಚಿರಾಗ್‌ಪಾಸ್ವಾನ್ ನೇತೃತ್ವದ ಲೋಕಜನಶಕ್ತಿ ಪಕ್ಷ 1 ಸಂಪುಟ ದರ್ಜೆ ಹಾಗೂ 1 ರಾಜ್ಯ ಖಾತೆಗೆ ಪಟ್ಟು ಹಿಡಿದಿದೆ. ಹಾಗೆಯೇ ಜೆಡಿಎಸ್ ಕೃಷಿಯಂತಹ ಮಹತ್ವದ ಖಾತೆ ನೀಡುವಂತೆ ಕೋರಿದೆ. ಜತೆಗೆ ಹೆಚ್‌ಎಂಎಸ್ ಸಂಪುಟ ದರ್ಜೆ ಸಚಿವ ಸ್ಥಾನ ನೀಡಬೇಕು ಎಂದು ಬೇಡಿಕೆ ಇಟ್ಟಿವೆ. ಮಿತ್ರ ಪಕ್ಷಗಳ ಸಚಿವಸ್ಥಾನ ಬೇಡಿಕೆ ಬಗ್ಗೆ ಜೆ.ಪಿ ನಡ್ಡಾ ಅವರ ನೇತೃತ್ವದಲ್ಲಿ ನಡೆದಿರುವ ಬಿಜೆಪಿ ನಾಯಕರು ಮಹತ್ವದ ಸಭೆಯಲ್ಲಿ ಚರ್ಚೆಗಳು ನಡೆದಿದ್ದು, ಅಂತಿಮವಾಗಿ ಪ್ರಧಾನಿ ನರೇಂದ್ರ ಮೋದಿಯವರ ಜತೆ ಚರ್ಚಿಸಿ ಮಿತ್ರಪಕ್ಷಗಳಿಗೆ ಎಷ್ಟು ಸಚಿವ ಸ್ಥಾನ, ಯಾವ ಇಲಾಖೆಗಳ ಜವಾಬ್ದಾರಿ ನೀಡಬಹುದು ಎಂಬ ಬಗ್ಗೆ ಅಂತಿಮ ತೀರ್ಮಾನ ಕೈಗೊಳ್ಳಲಾಗುತ್ತದೆ.


### ರಾಜ್ಯದಿಂದ ಯಾರಿಗೆಲ್ಲ ಸಚಿವ ಪಟ್ಟ

ಪ್ರಧಾನಿ ಮೋದಿ ನೇತೃತ್ವದ ಹೊಸ ಸಚಿವ ಸಂಪುಟದಲ್ಲಿ ರಾಜ್ಯದಿಂದ ಯಾರಿಗೆಲ್ಲ ಸಚಿವ ಸ್ಥಾನ ಸಿಗಲಿದೆ ಎಂಬ ಬಗ್ಗೆ ಚರ್ಚೆಗಳು ನಡೆದಿದ್ದು, ರಾಜ್ಯಕ್ಕೆ 5-6 ಸಚಿವಸ್ಥಾನ ಸಿಗುವ ಸಾಧ್ಯತೆ ಇದೆ. ಜೆಡಿಎಸ್‌ನ ಹೆಚ್.ಡಿ ಕುಮಾರಸ್ವಾಮಿ ಅವರಿಗೆ ಕೇಂದ್ರ ಮಂತ್ರಿಗಿರಿ ಸಿಗುವುದು ಪಕ್ಕಾ ಆಗಿದ್ದು, ಬಿಜೆಪಿಯಿಂದ ಯಾರಿಗೆ ಸಚಿವ ಸ್ಥಾನ ಸಿಗಲಿದೆ ಎಂಬುದು ಕುತೂಹಲ ಮೂಡಿಸಿದೆ. ಬಿಜೆಪಿಯಿಂದ ಮಾಜಿ ಮುಖ್ಯಮಂತ್ರಿಗಳಾ ಜಗದೀಶ್‌ಶೆಟ್ಟರ್, ಬಸವರಾಜ ಬೊಮ್ಮಾಯಿ, ಮಾಜಿ ಸಚಿವ ವಿ ಸೋಮಣ್ಣ ಹಾಲಿ ಕೇಂದ್ರ ಸಚಿವ ಪ್ರಲ್ಹಾದ್‌ಜೋಷಿ, ಶೋಭಾಕರಂದ್ಲಾಜೆ, 4 ಬಾರಿ ಸಂಸತ್‌ಗೆ ಆಯ್ಕೆಯಾಗಿರುವ ಬಿ.ವೈ. ರಾಘವೇಂದ್ರ 5 ಬಾರಿ ಸತತವಾಗಿ ಲೋಕಸಭಾ ಚುನಾವಣೆಯಲ್ಲಿ ಗೆದ್ದಿರುವ ಬಾಗಲಕೋಟೆಯ ಪಿ.ಸಿ ಗದ್ದಿಗೌಡರ್, ಬೆಂಗಳೂರು ಕೇಂದ್ರದಿಂದ ಆಯ್ಕೆಯಾಗಿರುವ ಪಿ.ಸಿ ಮೋಹನ್ ಇವರುಗಳು ಸಚಿವರಾಗುವ ರೇಸ್‌ನಲ್ಲಿ ಇದ್ದು, ಅಂತಿಮವಾಗಿ ಯಾರಿಗೆ ಅದೃಷ್ಟ ಒಲಿಯುತ್ತದೋ ಕಾದು ನೋಡಬೇಕು.

## ರಾಜಕೀಯಕ್ಕೆ ಗ್ಯಾರಂಟಿ ಲಾಭವಾಗುವ ನಿರೀಕ್ಷೆ ಇತ್ತು

• ಉದಯವಾಹಿನಿ, ಉಡುಪಿ

ಲೋಕಸಭಾ ಚುನಾವಣೆಯಲ್ಲಿ ಬಹಳಷ್ಟು ಕಡೆ ನಾವು ಸೋತಿದ್ದೇವೆ. ಸೋಲಿನ ವಿಶ್ಲೇಷಣೆ ಹಾಗೂ ಆತ್ಮಾವಲೋಕನ ಮಾಡಬೇಕಿದೆ. ಯಾಕೆ ಸೋತಿದ್ದೇವೆ ಎಲ್ಲಿ ಎಡವಿದ್ದೇವೆ ಎನ್ನುವುದು ಚರ್ಚೆಯಾಗಬೇಕಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಹೇಳಿದ್ದಾರೆ. ಉಡುಪಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನ ಸಾಮಾನ್ಯರ ಬಡತನ ನಿರ್ಮೂಲನೆಗಾಗಿ ಗ್ಯಾರಂಟಿ ಯೋಜನೆ ಜಾರಿಗೆ ತಂದಿದ್ದೆವು. ಜನಕ್ಕೆ ಗ್ಯಾರಂಟಿ ತಲುಪಿದೆ.



ಎಲ್ಲಾ ಯೋಜನೆ ಅನುಷ್ಠಾನ ಆಗಿದೆ. ರಾಜಕೀಯಕ್ಕೆ ಗ್ಯಾರಂಟಿ ಲಾಭ ಆಗಬಹುದು ಎಂಬ ನಿರೀಕ್ಷೆ ಇತ್ತು. ಸಿಎಂ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹಾಗೂ ನಾನು ಈ ಬಗ್ಗೆ ಚರ್ಚೆ ಮಾಡಿದ್ದೇವೆ. ಸೋಲಿನ ಬಗ್ಗೆ ಸಮಿತಿ ಮಾಡಿ, ಹಿರಿಯರು ಅನುಭವಿಗಳ ವಿಶ್ಲೇಷಣೆ ಮಾಡಲು ತೀರ್ಮಾನಿಸಲಾಗಿದೆ. ಪಕ್ಷದ ಪ್ರಧಾನ ಕಾರ್ಯದರ್ಶಿ ರಣದೀಪ್ ಸುರ್ಜೇವಾಲಾ ಅವರಿಗೆ ಲೆಕ್ಕ ಕೊಡಬೇಕಾಗುತ್ತದೆ. ಸಮಿತಿ ರಚನೆಯಾಗಿ ನಡೆಯುವ ಚರ್ಚೆಯಲ್ಲಿ ರಣದೀಪ್ ಸುರ್ಜೇವಾಲಾ ಕೂಡ ಭಾಗಿಯಾಗಬಹುದು ಎಂದರು. ಸರ್ಕಾರದ ಗ್ಯಾರಂಟಿಗಳು ನಿಲ್ಲುತ್ತದೆ ಎನ್ನುವ ವದಂತಿ ಬಗ್ಗೆ ಮಾತನಾಡಿದ ಜಿ.ಪರಮೇಶ್ವರ್, ರಾಜ್ಯದಲ್ಲಿ ಗ್ಯಾರಂಟಿ ಯೋಜನೆ ನಿಲ್ಲಿಸುವುದಿಲ್ಲ. ಗ್ಯಾರಂಟಿ ರಾಜಕೀಯ ಉದ್ದೇಶಕ್ಕಲ್ಲ. ಪಟ್ಟಣ ಪ್ರದೇಶದಲ್ಲಿ ಗ್ಯಾರಂಟಿ ಅವಶ್ಯಕತೆ ಇದೆಯೋ ಇಲ್ಲವೋ ಗೊತ್ತಿಲ್ಲ. ಆದರೆ ಹಳ್ಳಿ, ಗ್ರಾಮೀಣ ಭಾಗದ ಜನಕ್ಕೆ ಈ ಯೋಜನೆ ಉಪಯೋಗವಾಗುತ್ತಿದೆ. ಗ್ಯಾರಂಟಿ ಜೊತೆ ಅಭಿವೃದ್ಧಿ ಕಾರ್ಯ ಕೂಡಾ ಮಾಡುತ್ತೇವೆ. ರಾಜ್ಯದ ಬಜೆಟ್ ಗಾತ್ರ ಹಿಗ್ಗಿದೆ ಅಭಿವೃದ್ಧಿಗೆ ಹಣಕಾಸು ವ್ಯವಸ್ಥೆ ಇದೆ. ಹಣಕಾಸು ಮತ್ತು ವಿವಿಧ ಕಾರ್ಯಕ್ರಮಗಳಿಗೆ ಯಾವುದೇ ತೊಂದರೆ ಇಲ್ಲ ಎಂದು ಸ್ಪಷ್ಟಪಡಿಸಿದರು.

## ಬೊಮ್ಮಾಯಿ ಪತ್ರಕ್ಕೆ ಸ್ಪಂದಿಸಿದ ಕೃಷಿ ಸಚಿವ ಚಲುವರಾಯಸ್ವಾಮಿ


• ಉದಯವಾಹಿನಿ, ಬೆಂಗಳೂರು

**ಗೊಬ್ಬರ ಪೂರೈಕೆಗೆ ಕ್ರಮ**

**ಬಸವರಾಜ ಬೊಮ್ಮಾಯಿಯವರ ಪತ್ರಕ್ಕೆ ಸ್ಪಂದಿಸಿರುವ ಕೃಷಿ ಸಚಿವ ಎನ್. ಚಲುವರಾಯ ಸ್ವಾಮಿ, ಗೊಬ್ಬರ ಪೂರೈಕೆಗೆ ಅಗತ್ಯ ಕ್ರಮ ಕೈಗೊಂಡಿರುವ ಬಗ್ಗೆ ಪತ್ರದ ಮೂಲಕ ತಿಳಿಸಿದ್ದಾರೆ.**

ಹಾವೇರಿ ಜಿಲ್ಲೆಗೆ ಅವಶ್ಯವಿರುವ ಗೊಬ್ಬರವನ್ನು ಪೂರೈಸಲು ಅಗತ್ಯ ಕ್ರಮ ವಹಿಸುವಂತೆ ಕೃಷಿ ಇಲಾಖೆಯ ಆಯುಕ್ತರಿಗೆ ಸೂಚನೆಗಳನ್ನು ನೀಡಿರುವುದಾಗಿ ಕೃಷಿ ಸಚಿವ ಎನ್. ಚಲುವರಾಯ ಸ್ವಾಮಿ ಅವರು ಮಾಜಿ ಸಿಎಂ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಅವರಿಗೆ ತಿಳಿಸಿದ್ದಾರೆ.

ಇತ್ತೀಚೆಗೆ ಬೀಳುತ್ತಿರುವ ಮುಂಗಾರು ಮಳೆಯಿಂದ ರೈತರು ಉತ್ಸುಕರಾಗಿ ಬಿತ್ತನೆ ಮಾಡಲು ಸಿದ್ದರಾಗಿದ್ದು, ಅದಕ್ಕಾಗಿ ಗೊಬ್ಬರ ಪಡೆದುಕೊಳ್ಳಲು ಮುಂದೆ ಬಂದ ಸಂದರ್ಭದಲ್ಲಿ ಹಾವೇರಿ ಜಿಲ್ಲೆಯಲ್ಲಿ ಗೊಬ್ಬರ ಕಡಿಮೆ ಇದ್ದು, ನೂಕು-ನುಗ್ಗಲು ಪರಿಸ್ಥಿತಿ ಉಂಟಾಗಿರುವುದಾಗಿ, ಹಾವೇರಿ ಜಿಲ್ಲೆಗೆ ಸುಮಾರು 35,000 ಮೆಟ್ರಿಕ್ ಟನ್ ಮುಂಗಾರು ಹಂಗಾಮಿನಲ್ಲಿ ಡಿ.ಎ.ಪಿ.ಗೊಬ್ಬರ ಅವಶ್ಯಕತೆ ಇದ್ದು, ಕೇವಲ 6.500 ಮೆಟ್ರಿಕ್ ಟನ್ ಮಾತ್ರ ಸರಬರಾಜಾಗಿರುವುದರಿಂದ ಬಾಕಿ ಇರುವ 29,000 ಮೆಟ್ರಿಕ್ ಟನ್ ಗೊಬ್ಬರವನ್ನು ಹಾವೇರಿ ಜಿಲ್ಲೆಗೆ ಸರಬರಾಜು ಮಾಡುವಂತೆ ಹಾಗೂ ಇದೇ ರೀತಿ ಯೂರಿಯಾ 65000 ಮೆಟ್ರಿಕ್ ಟನ್ ಮತ್ತು ಕಾಂಪ್ಲೆಕ್ಸ್ 38000 ಮೆಟ್ರಿಕ್ ಟನ್ ಸಹ ಸರಬರಾಜು ಮಾಡಲು ಕ್ರಮ ಜರುಗಿಸುವಂತೆ ಜುಲೈ 22 ರಂದು ಮಾಜಿ ಸಿಎಂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಕೃಷಿ ಸಚಿವರಿಗೆ ಪತ್ರ ಬರೆದು ಸಚಿವರ ಗಮನ ಸೆಳೆದಿದ್ದರು.




## ಉಚಿತ ಆರೋಗ್ಯ ತಪಾಸಣಾ, ಚಿಕಿತ್ಸಾ ಶಿಬಿರ ಉದ್ಘಾಟಿಸಿದ ಸಿಎಂ



• ಉದಯವಾಹಿನಿ, ಬೆಂಗಳೂರು

ಉಚಿತ ಆರೋಗ್ಯ ತಪಾಸಣಾ, ಚಿಕಿತ್ಸಾ ಶಿಬಿರವನ್ನು ಸಿಎಂ ಸಿದ್ದರಾಮಯ್ಯ ಉದ್ಘಾಟಿಸಿದರು. ಸಚಿವಾಲಯದ ಅಧಿಕಾರಿ ಮತ್ತು ಸಿಬ್ಬಂದಿಗೆ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಮತ್ತು ಚಿಕಿತ್ಸಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ದೈಹಿಕವಾಗಿ ಚಟುವಟಿಕೆ ಇಲ್ಲದೆ ಕುಳಿತವರಿಗೆ ಅನಾರೋಗ್ಯ ಹೆಚ್ಚು. ಆದ್ದರಿಂದ ದೈಹಿಕ ಮತ್ತು ಮಾನಸಿಕ ಚಟುವಟಿಕೆ ಅಗತ್ಯ. ಜೀವನಶೈಲಿ, ಆಹಾರ ಪದ್ಧತಿ ಮನುಷ್ಯನ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ.

ರಾಜ್ಯ ಸರ್ಕಾರ ಎಲ್ಲಾ ವರ್ಗದ ಜನಕ್ಕೆ ಆರೋಗ್ಯ, ಅಗತ್ಯ ಚಿಕಿತ್ಸೆ ಒದಗಿಸಲು ಕಾರ್ಯಕ್ರಮಗಳನ್ನು ನಿರಂತರವಾಗಿ ರೂಪಿಸಿ, ಜಾರಿ ಮಾಡುತ್ತಿದೆ. ಕ್ಯಾನ್ಸರ್ ನಂತಹ ಮಾರಕ ರೋಗವನ್ನೂ ಗುಣಪಡಿಸುವುದು ಸಾಧ್ಯವಿದೆ. ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುತ್ತಿದ್ದರೆ ದೀರ್ಘಕಾಲ ಆರೋಗ್ಯ ಕಾಪಾಡಿಕೊಳ್ಳುವುದು ಸಾಧ್ಯವಿದೆ. ಹಿಂದಿನವರ ಆರೋಗ್ಯ ಪದ್ಧತಿ ಮತ್ತು ಶ್ರಮಾಧಾರಿತ ಜೀವನ ಶೈಲಿ ಅವರನ್ನು ಗಟ್ಟಿಮುಟ್ಟಾಗಿ ಸದೃಢವಾಗಿ ಇಟ್ಟಿತ್ತು. ಇಂಥಾ ಆರೋಗ್ಯ ತಪಾಸಣಾ ಶಿಬಿರಗಳು ಮೇಲಿಂದ ಮೇಲೆ ಆಗಬೇಕು. ರಾಜ್ಯದ ಮೂಲೆ ಮೂಲೆಗಳಲ್ಲೂ ನಡೆಯಬೇಕು, ಈ ಬಗ್ಗೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಲಿ ಎಂದರು.

## ಹಣಕಾಸು ಇಲಾಖೆ ಅನುಮತಿ ಇಲ್ಲದೇ ಇದು ನಡೆಯಲು ಸಾಧ್ಯವಿಲ್ಲ

### ಸಿದ್ದರಾಮಯ್ಯ ರಾಜೀನಾಮೆ ಪಡೆಯಲು ಆಗ್ರಹಿಸಿ ರಾಜ್ಯಪಾಲರಿಗೆ ಮನವಿ: ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ

• ಉದಯವಾಹಿನಿ, ಬೆಂಗಳೂರು

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ಮೊತ್ತದ ಹಗರಣಕ್ಕೆ ಸಂಬಂಧಿಸಿ ಹಣಕಾಸು ಇಲಾಖೆ ನಿರ್ವಹಿಸುತ್ತಿರುವ ಸಿಎಂ ಸಿದ್ದರಾಮಯ್ಯ ರಾಜೀನಾಮೆ ಪಡೆಯುವಂತೆ ರಾಜ್ಯಪಾಲರನ್ನು ಕೋರಲಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ತಿಳಿಸಿದರು. ವಿಧಾನಸೌಧದಿಂದ ರಾಜಭವನಕ್ಕೆ ಕಾಲ್ನಡಿಗೆಯಲ್ಲಿ ಶಾಸಕರ ಜೊತೆ ತೆರಳಿದ ಬಳಿಕ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ರಾಜಭವನದಲ್ಲಿ ಗುರುವಾರ ರಾಜ್ಯಪಾಲರನ್ನು ಭೇಟಿ ಮಾಡಿದ್ದೇವೆ. ಹೈದರಾಬಾದ್‌ನಲ್ಲಿ 18ಕ್ಕೂ ಹೆಚ್ಚು ನಕಲಿ ಬ್ಯಾಂಕ್ ಖಾತೆಗಳನ್ನು ತೆರೆದು ಹಣವನ್ನು ಅಕ್ರಮವಾಗಿ ವರ್ಗಾಯಿಸಿದ್ದಾರೆ.

ಹಣಕಾಸು ಇಲಾಖೆ ಅನುಮತಿ ಇಲ್ಲದೇ ಇದು ನಡೆಯಲು ಸಾಧ್ಯವಿಲ್ಲ ಎಂದು ತಿಳಿಸಿದರು. ಮುಖ್ಯಮಂತ್ರಿಗಳ ಗಮನಕ್ಕೆ ಬರದೇ ಈ ಹಗರಣ ನಡೆದಿರಲು ಸಾಧ್ಯವಿಲ್ಲ. ಕೇವಲ ಸಚಿವರ ರಾಜೀನಾಮೆ ಪಡೆದರೆ ಸಾಲದು ಎಂದು ಅವರು ನುಡಿದರು. ರಾಜ್ಯದ ಇತಿಹಾಸದಲ್ಲಿ ಇಂಥ ದೊಡ್ಡ ಹಗರಣ ನಡೆದಿರಲಿಲ್ಲ ಎಂದು ತಿಳಿಸಿದರು. ಹಗರಣ ನಡೆದು ಇಷ್ಟು ದಿನ ಆದರೂ ಸಚಿವರ ರಾಜೀನಾಮೆ ಪಡೆಯಲು ಸಿಎಂ ಹಿಂದೆ ಮುಂದೆ ನೋಡುತ್ತಿದ್ದಾರೆ. ಸಿಬಿಐ ತನಿಖೆಗೆ ಕೋರಿದ್ದು, ಅದಕ್ಕೂ ಮಣಿದಿಲ್ಲ ಎಂದು ಆಕ್ಷೇಪಿಸಿದರು. ಈ ವಿಚಾರವನ್ನು ಇಲ್ಲಿಗೇ ಕೈಬಿಡುವುದಿಲ್ಲ. ವಿಪಕ್ಷವಾಗಿ ನಾವು ಸುಮ್ಮನೆ ಕುಳಿತುಕೊಳ್ಳುವುದಿಲ್ಲ. ಮುಖ್ಯ ಮಂತ್ರಿಯವರು ಹಾರಿಕೆಯ ಉತ್ತರ ನೀಡುತ್ತಿದ್ದಾರೆ. ಆನೆ ನಡೆದಿದ್ದೇ ದಾರಿ ಎಂಬಂತೆ ಮುಖ್ಯಮಂತ್ರಿಯವರ ವರ್ತನೆಯನ್ನು ಖಂಡಿಸುತ್ತೇವೆ ಎಂದು ತಿಳಿಸಿದರು.

ಈ ವಿಷಯದಲ್ಲಿ ರಾಜ್ಯವ್ಯಾಪಿ ಹೋರಾಟ ಮಾಡಲಿದ್ದೇವೆ ಎಂದು ಅವರು ಎಚ್ಚರಿಸಿದರು. 20 ಲೋಕಸಭಾ ಕ್ಷೇತ್ರಗಳಲ್ಲಿ ಗೆಲ್ಲುವುದಾಗಿ ಹೇಳಿದ್ದೀರಿ; ಈಗ ಸರಕಾರದ ಯೋಗ್ಯತೆ ಏನೆಂದು ಮತದಾರರು ತೋರಿಸಿಕೊಟ್ಟಿದ್ದಾರೆ. ಸಿದ್ದರಾಮಯ್ಯ ಸರಕಾರಕ್ಕೆ ಧಿಕ್ಕಾರ, ಭ್ರಷ್ಟ ಕಾಂಗ್ರೆಸ್ ಸರಕಾರಕ್ಕೆ ಧಿಕ್ಕಾರ ಕೂಗುತ್ತ.

ಮಹರ್ಷಿ ವಾಲ್ಮೀಕಿ ನಿಗಮದ 187 ಕೋಟಿ ದುರುಪಯೋಗದ ಹಗರಣಕ್ಕೆ ಸಂಬಂಧಿಸಿ ನಾಗೇಂದ್ರರ ರಾಜೀನಾಮೆ ಪಡೆಯದೆ ಇರುವ ರಾಜ್ಯ ಸರಕಾರದ ಕ್ರಮವನ್ನು ಖಂಡಿಸಲಾಯಿತು. ಕೂಡಲೇ ನಾಗೇಂದ್ರರು ರಾಜೀನಾಮೆ ಕೊಡಬೇಕೆಂದು ಆಗ್ರಹಿಸಲಾಯಿತು.

ಕೊಡಲೇಬೇಕು, ಕೊಡಲೇಬೇಕು ರಾಜೀನಾಮೆ ಕೊಡಲೇಬೇಕು, ದಲಿತರ ಹಣವನ್ನು ತೆಲಂಗಾಣಕ್ಕೆ ವರ್ಗಾಯಿಸಿದ ಸರಕಾರಕ್ಕೆ ಧಿಕ್ಕಾರ, ಭ್ರಷ್ಟ ಸಿದ್ದರಾಮಯ್ಯ ಸರಕಾರಕ್ಕೆ ಧಿಕ್ಕಾರ ಧಿಕ್ಕಾರ ಎಂಬ ಘೋಷಣೆಗಳನ್ನು ಮೊಳಗಿಸಲಾಯಿತು. ಸಚಿವರ ವಜಾಕ್ಕೆ ಆಗ್ರಹಿಸುವ ಫಲಕಗಳೊಂದಿಗೆ ಶಾಸಕರು, ಮುಖಂಡರು ಭಾಗವಹಿಸಿದ್ದರು.



**ರಾಜೀನಾಮೆ ಪಡೆದರೆ ಸಾಲದು**

> ಪರಿಶಿಷ್ಟ ಸಮುದಾಯಕ್ಕೆ ಸೇರಿದ ಹಣವನ್ನು ಅಕ್ರಮವಾಗಿ ಲೋಕಸಭಾ ಚುನಾವಣೆಗೆ ಬಳಸಿದ್ದಾರೆ. ಸಚಿವರ ರಾಜೀನಾಮೆ ಪಡೆಯಲು ಮುಖ್ಯಮಂತ್ರಿಗಳಿಗೆ ಭಯ ಇದ್ದಂತಿದೆ ಎಂದು ಬಿ.ವೈ.ವಿಜಯೇಂದ್ರ ಅವರು ತಿಳಿಸಿದರು. ಪ್ರಕರಣವನ್ನು ರಾಜ್ಯ ಸರಕಾರವು ಕೂಡಲೇ ಸಿಬಿಐ ತನಿಖೆಗೆ ವಹಿಸಬೇಕು
>
> - ಬಿ.ವೈ.ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ

**ಆಗ್ರಹಿಸಿದರು ಸ್ಪಂದಿಸಿಲ್ಲ**

ದಲಿತರ ಅಭಿವೃದ್ಧಿಗಾಗಿ ಬಳಸಬೇಕಿದ್ದ ಹಣವನ್ನು ಹೈದರಾಬಾದ್‌ನಲ್ಲಿ 18 ನಕಲಿ ಬ್ಯಾಂಕ್ ಖಾತೆಗಳನ್ನು ತೆರೆದು ವರ್ಗಾಯಿಸಲಾಗಿದೆ ಎಂದೂ ಆಕ್ಷೇಪಿಸಿದರು. ಹಿಂದಿನಿಂದಲೂ ನಾವು ಸಚಿವರ ರಾಜೀನಾಮೆ ಪಡೆಯಲು ಆಗ್ರಹಿಸಿದ್ದೆವು. ಆದರೂ ಅವರು ಸ್ಪಂದಿಸಿಲ್ಲ ಎಂದು ಟೀಕಿಸಿದರು.

ಈ ದಿನದ ದರ | ಪೆಟ್ರೋಲ್: 99.94 ₹/L | ಡೀಸೆಲ್ : 85.93 ₹/L | ಬಂಗಾರ: ₹7,342 /Gram(24ct) ₹6,730 /Gram(22ct) | ಬೆಳ್ಳಿ: ₹91.00 /Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

### ಕಾಲಾಧೀನದೊಳುಸುರಿಕ್ಕುತ್ತ

ನಿಜಗುಣರ ಪರಮಾರ್ಥ ಗೀತೆಯ ಮಾತು. ಕಾಲಕ್ಕೆ ಅಧೀನವಾಗಿ ನಿರಂತರ ಹಗಲು ರಾತ್ರಿ ಬಿಡದೇ ಉಸಿರಾಡುವುದು ವಾಯು. ಇದು ಪ್ರಾಣ ಅಪಾನ ವ್ಯಾನ ಉದಾನ ಸಮಾನ ಎಂದು ಐದು ವಿಧ. ಮಲ ಮೂತ್ರಗಳನ್ನು ಅಧೋಮುಖವಾಗಿ ತಳ್ಳುವುದು ವಾಯು. ಅನಗತ್ಯವಾದ ವಾಯು ಗುದ ದ್ವಾರದಿಂದ ಹೊರಹೋಗುವುದು ಅಪಾನ ವಾಯು.

ಅನ್ನದ ಫಲಿತ ರಸವನ್ನು ಹೀರುವುದು ಆಕಳಿಕೆ ವಾಕರಿಕೆ ಢೇಕರಿಕೆ ಕೆಮ್ಮು ಸೀನುಗಳನ್ನು ಉಂಟುಮಾಡುವುದು, ಜಠರಾಗ್ನಿಯನ್ನು ಪುಟುಮಾಡುವುದು, ಕಣ್ಣು ರೆಪ್ಪೆಗಳನ್ನಾಡಿಸುವುದು ಇಂದ್ರಿಯಗಳನ್ನು ಸಕ್ರಿಯಗೊಳಿಸುವುದು, ಪರಾ ಪಶ್ಯಂತೀ ಮಧ್ಯಮಾ ವೈಖರೀ ಎಂಬ ನಾಲ್ಕು ವಿಧದ ಮಾತು ಶಬ್ದಗಳನ್ನು ಉತ್ಪಾದಿಸುವುದು ವಾಯು. ಕಿವಿ ಮೂಗು ಅನ್ನನಾಳ ಶ್ವಾಶಕೋಶ ರಕ್ತನಾಳ ಹೊಟ್ಟೆ ಮುಂತಾದ ಭಾಗಗಳಲ್ಲಿ ತೆರವಾಗಿರುವ ಖಾಲಿ ಪ್ರದೇಶ ಆಕಾಶದ ಅಂಶ.

## ಜೂನ್ 8ರಂದು ಆಮ್ ಆದ್ಮಿ ಪಾರ್ಟಿ ಕಾರ್ಯಕಾರಿಣಿ ಸಭೆ

• ಉದಯವಾಹಿನಿ, ಬೆಂಗಳೂರು

ಆಮ್ ಆದ್ಮಿ ಪಾರ್ಟಿ ಕರ್ನಾಟಕದ ಉಸ್ತುವಾರಿ ದಿಲೀಪ್ ಪಾಂಡೆ, ರಾಷ್ಟ್ರೀಯ ಜಂಟಿ ಕಾರ್ಯದರ್ಶಿ ಪೃಥ್ವಿ ರೆಡ್ಡಿ, ರಾಜ್ಯಾಧ್ಯಕ್ಷ ಡಾ. ಮುಖ್ಯಮಂತ್ರಿ ಚಂದ್ರು ಅವರೊಂದಿಗೆ ಜೂನ್ 8 ರಂದು ಶನಿವಾರ ರಾಜ್ಯ ಕಾರ್ಯಕಾರಿಣಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಆಮ್ ಆದ್ಮಿ ಪಾರ್ಟಿ ರಾಜ್ಯ ಪ್ರಧಾನ ಕಾರ್ಯದರ್ಶಿ ಸಂಚಿತ್ ಸಹಾನಿ ತಿಳಿಸಿದ್ದಾರೆ. ನಗರದ ಅಲುಮ್ನಿ ಅಸೋಸಿಯೇಷನ್ ಯುವಿಸಿಇ ಇಲ್ಲಿ ಬೆಳಗ್ಗೆ 9 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಕಾರ್ಯಕಾರಿಣಿ ಸಭೆ ನಡೆಯಲಿದ್ದು, ಪ್ರಸ್ತುತ ರಾಜಕೀಯ ಬೆಳವಣಿಗೆ, ಕರ್ನಾಟಕದಲ್ಲಿ ಪಕ್ಷದ ಮುಂದಿನ ರೂಪು ರೇಷೆ ಕುರಿತಾಗಿ ಚರ್ಚೆ ನಡೆಸಲಾಗುವುದು ಎಂದು ತಿಳಿಸಿದರು. ಸಭೆಯಲ್ಲಿ ಆಮ್ ಆದ್ಮಿ ಪಾರ್ಟಿ ರಾಜ್ಯ ಕಾರ್ಯಕಾರಿಣಿ ಸದಸ್ಯರು, ರಾಜ್ಯ ಸಮಿತಿಯ ಎಲ್ಲಾ ಪದಾಧಿಕಾರಿಗಳು, ಎಲ್ಲಾ ಘಟಕದ ರಾಜ್ಯಾಧ್ಯಕ್ಷರು, ಎಲ್ಲಾ ಜಿಲ್ಲೆಯ ಜಿಲ್ಲಾಧ್ಯಕ್ಷರು ಭಾಗವಹಿಸಲಿದ್ದು, ಪಕ್ಷದ ಬಲವರ್ಧನೆ ಬಗ್ಗೆ ಚರ್ಚೆ ನಡೆಯಲಿದೆ ಎಂದು ಹೇಳಿದರು.


## ಗ್ಯಾರಂಟಿಗಳನ್ನು ನಿಲ್ಲಿಸಿದರೆ ಮುಂದಾಗುವ ಅನಾಹುತಗಳಿಗೆ ಸರ್ಕಾರವೇ ನೇರ ಕಾರಣ

• ಉದಯವಾಹಿನಿ, ಬೆಂಗಳೂರು

ಲೋಕಸಭಾ ಚುನಾವಣೆಯ ಬಳಿಕ ಗ್ಯಾರಂಟಿ ಯೋಜನೆಗಳನ್ನು ಕಾಂಗ್ರೆಸ್ ಸರ್ಕಾರ ನಿಲ್ಲಿಸಲಿದೆ ಎನ್ನಲಾಗುತ್ತಿತ್ತು. ಒಂದು ವೇಳೆ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಿದ್ದೇ ಆದ್ರೇ, ಕರ್ನಾಟಕದಲ್ಲಿ ಮುಂದಾಗುವ ಅನಾಹುತಗಳಿಗೇ ರಾಜ್ಯ ಸರ್ಕಾರವೇ ಹೊಣೆ ಎಂಬುದಾಗಿ ಕರ್ನಾಟಕ ಬಿಜೆಪಿ ಎಚ್ಚರಿಕೆ ನೀಡಿದೆ. ಇಂದು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವಂತ ಅದು, ಬಣ್ಣ ಬದಲಿಸುವಲ್ಲಿ ಕಾಂಗ್ರೆಸ್ ಪಕ್ಷದವರು ಊಸರವಳ್ಳಿಯನ್ನು ಸಹ ಮೀರಿಸುತ್ತಾರೆ ಎಂಬುದಾಗಿ ಕಿಡಿಕಾರಿದೆ. ಗ್ಯಾರಂಟಿಗಳೇ ನಮ್ಮ ಸರ್ಕಾರಕ್ಕೆ ಶ್ರೀರಕ್ಷೆ ಎಂದು ಬಡಾಯಿ ಕೊಚ್ಚಿಕೊಂಡಿದ್ದ ಶಾಸಕರೆಲ್ಲರೂ ಈಗ ಗ್ಯಾರಂಟಿಯಿಂದಲೇ ನಮ್ಮ ಸರ್ಕಾರಕ್ಕೆ ಹಿನ್ನಡೆ ಎನ್ನುತ್ತಿರುವುದು ಹತಾಶೆಯ ಪರಮಾವಧಿ ಅಂತ ಗುಡುಗಿದೆ. ಲೋಕಸಭಾ ಚುನಾವಣೆಯಲ್ಲಿ ಸೋತ ಕಾರಣಕ್ಕೆ ಗ್ಯಾರಂಟಿಗಳನ್ನು ನಿಲ್ಲಿಸಿದರೆ, ಕರ್ನಾಟಕದಲ್ಲಿ ಮುಂದಾಗುವ ಅನಾಹುತಗಳಿಗೆ ಕಾಂಗ್ರೆಸ್ ಸರ್ಕಾರವೇ ನೇರ ಕಾರಣವಾಗುತ್ತದೆ ಎಂಬುದಾಗಿ ಎಚ್ಚರಿಕೆ ನೀಡಿದೆ.

## ಶ್ರೀಕಿ ಸೇರಿ 6 ಆರೋಪಿಗಳ ವಿರುದ್ಧ ನ್ಯಾಯಾಲಯಕ್ಕೆ ಚಾರ್ಜ್ ಶೀಟ್ ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು



ಬಿಟ್ ಕಾಯಿನ್ ಹಗರಣದ ತನಿಖೆಯನ್ನು ನಡೆಸುತ್ತಿರುವಂತ ಎಸ್ಐಟಿ ಅಧಿಕಾರಿಗಳು, ಇಂದು ನ್ಯಾಯಾಲಯಕ್ಕೆ ಶ್ರೀಕಿ ಸೇರಿದಂತೆ 6 ಆರೋಪಿಗಳ ವಿರುದ್ಧ ದೋಷಾರೋಪ ಪಟ್ಟಿಯನ್ನು ಸಲ್ಲಿಸಿದ್ದಾರೆ. ಬೆಂಗಳೂರಿನ 1ನೇ ಎಸಿಎಂಎಂ ಕೋರ್ಟ್ ಗೆ ಬಿಟ್ ಕಾಯಿನ್ ಪ್ರಕರಣದ ತನಿಖೆ ನಡೆಸುತ್ತಿರುವಂತ ಎಸ್ಐಟಿ ಪೊಲೀಸರು, ಮೊದಲ ಚಾರ್ಜ್ ಶೀಟ್ ಸಲ್ಲಿಸಿದ್ದಾರೆ. ಆರೋಪಿಗಳಾದಂತ ಶ್ರೀಕಿ ಆಲಿಯಾಸ್ ಶ್ರೀಕೃಷ್ಣ, ರಾಬಿನ್ ಖಂಡೇವಾಲ, ಸುನೀಶ್ ಹೆಗ್ಡೆ ಸೇರಿದಂತೆ 6 ಆರೋಪಿಗಳ ವಿರುದ್ಧ ಇಂದು ಕೋರ್ಟ್ ಗೆ ದೋಷಾರೋಪ ಪಟ್ಟಿಯನ್ನು ಎಸ್ಐಟಿ ಪೊಲೀಸರು ಸಲ್ಲಿಸಿದ್ದಾರೆ. ಅಂದಹಾಗೇ ಡ್ರಗ್ ಕೇಸ್ ಪ್ರಕರಣ ಸಂಬಂಧ ಮೂರು ಎಫ್ಐಆರ್ ಗಳು ದಾಖಲಾಗಿದ್ದವು. ಇವುಗಳನ್ನು ತನಿಖೆ ಮಾಡುತ್ತಿದ್ದಂತ ವೇಳೆಯಲ್ಲಿ ಬಿಟ್ ಕಾಯಿನ್ ಪ್ರಕರಣ ಬೆಳಕಿಗೆ ಬಂದಿತ್ತು. ಈ ಕೇಸರನ್ನು ರಾಜ್ಯ ಸರ್ಕಾರ ಎಸ್ಐಟಿ ಪೊಲೀಸರ ಮೂಲಕ ತನಿಖೆಗೆ ಆದೇಶಿಸಿತ್ತು. ಈಗ ತನಿಖೆ ನಡೆಸಿರುವಂತ ಎಸ್ಐಟಿ ಪೊಲೀಸರು, ನ್ಯಾಯಾಲಯಕ್ಕೆ 6 ಆರೋಪಿಗಳ ವಿರುದ್ಧ ಚಾರ್ಜ್ ಶೀಟ್ ಸಲ್ಲಿಸಿದ್ದಾರೆ.

## ರಾಜ್ಯದಲ್ಲಿ ಮುಂದಿನ 24 ಗಂಟೆಗಳಲ್ಲಿ ಭಾರಿ ಮಳೆ ಸಾಧ್ಯತೆ!

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ಮುಂದಿನ 24 ಗಂಟೆ ಭರ್ಜರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ದಕ್ಷಿಣ ಕರ್ನಾಟಕ, ಉತ್ತರ ಕರ್ನಾಟಕ, ಕೊಡಗು, ಶಿವಮೊಗ್ಗ, ಚಿಕ್ಕಮಗಳೂರು, ಚಾಮರಾಜನಗರ, ಮಂಡ್ಯ, ಮೈಸೂರು ಉಡುಪಿ, ಮಂಗಳೂರು, ಉತ್ತರ ಕನ್ನಡ, ತುಮಕೂರು, ಹಾಸನ, ಚಿತ್ರದುರ್ಗ, ಬೆಳಗಾವಿ, ದಾವಣಗೆರೆ, ಬಳ್ಳಾರಿ, ಬೆಂಗಳೂರು ನಗರ, ವಿಜಯಪುರ,ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಕೋಲಾರದಲ್ಲಿ ಭಾರಿ ಮಳೆ ಸುರಿಯಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಮುಂದಿನ 5 ದಿನಗಳ ಕಾಲ ಕರ್ನಾಟಕದ ಕೆಲವು ಭಾಗಗಳಲ್ಲಿ ಗುಡುಗು, ಮಿಂಚು, ಬಿರುಗಾಳಿಯ ಗಾಳಿಯೊಂದಿಗೆ ಮಳೆಯಾಗುವ ಸಾಧ್ಯತೆದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

## ಆಹಾರದಲ್ಲಿ ಇಲಿ ಪತ್ತೆ : ಪ್ರತಿಭಟಿಸಿದ ವಿದ್ಯಾರ್ಥಿಗಳು

• ಉದಯವಾಹಿನಿ, ಆನೇಕಲ್

ಜಿಗಣಿ ಸಮೀಪದ ಎಸ್.ವ್ಯಾಸ ಯೂನಿವರ್ಸಿಟಿ ಕಾಲೇಜಿನ ಹಾಸ್ಟೆಲ್ ನಲ್ಲಿ ರಾತ್ರಿ ಊಟದಲ್ಲಿ ಇಲಿ ಪತ್ತೆಯಾಗಿರುವ ಆಘಾತಕಾರಿ ಘಟನೆ ಬೆಂಗಳೂರು ಹೊರವಲಯದ ಆನೇಕಲ್‌ನಲ್ಲಿ ನಡೆದಿದೆ. ಈ ಆಹಾರವನ್ನು ಸೇವಿಸಿದ ನಂತರ ಹಲವಾರು ವಿದ್ಯಾರ್ಥಿಗಳಿಗೆ ವಾಂತಿ ಉಂಟಾಗಿದ್ದು, ಊಟವನ್ನು ಪರಿಶೀಲಿಸಿದ ಪಲ್ಯದಲ್ಲಿ ಇಲಿ ಪ್ರತ್ಯಕ್ಷವಾಗಿದೆ. ಆಹಾರದಲ್ಲಿ ಇಲಿಯನ್ನು ಕಂಡು ಆತಂಕಗೊಂಡಿದ್ದು, ವಿದ್ಯಾರ್ಥಿಗಳಿಂದ ಕಾಲೇಜು ಆಡಳಿತ ಮಂಡಳಿ ವಿರುದ್ಧ ಪ್ರತಿಭಟನೆ ನಡೆಸಿದ್ದರು. ವಿದ್ಯಾರ್ಥಿಗಳು ಕಾಲೇಜು ಆಡಳಿತ ಮಂಡಳಿ ಬೇಜಾವಾಬ್ದಾರಿ ವಿರುದ್ಧ ವಿದ್ಯಾರ್ಥಿಗಳ ಆಕ್ರೋಶ ಹೊರಹಾಕಿದ್ದಾರೆ. ಪ್ರತಿಭಟನೆ ಜೋರಾದ ಬೆನ್ನಲ್ಲೇ ಆಡಳಿತ ಮಂಡಳಿ ಸ್ಥಳಕ್ಕೆ ಆಗಮಿಸಿದ್ದು, ಮುಂದೆ ಈ ರೀತಿಯ ತಪ್ಪುಗಳ ಆಗದಂತೆ ನೋಡಿಕೊಳ್ಳುತ್ತೇವೆ ಎಂದು ವಿದ್ಯಾರ್ಥಿಗಳ ಮನವೊಲಿಸಿದ್ದಾರೆ. ಆಡಳಿತ ಮಂಡಳಿ ಮನವೊಲಿಸುತ್ತಿದ್ದಂತೆ ವಿದ್ಯಾರ್ಥಿಗಳು ಪ್ರತಿಭಟನೆಯನ್ನು ಬಿಟ್ಟು ಕ್ಲಾಸ್‌ಗೆ ತೆರಳಿದ್ದಾರೆ.

# ರಸಗೊಬ್ಬರ ಬಳಸಲು ರೈತರಿಗೆ ಸಲಹೆ

### ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಗೆ 17 ಪೋಷಕಾಂಶಗಳ ಅಗತ್ಯ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಕೃಷಿ ಚಟುವಟಿಕೆ ಆರಂಭ**

ಪೂರ್ವ ಮುಂಗಾರು ಮಳೆ ಉತ್ತಮವಾಗಿ ಸುರಿದಿದೆ. ನೈಋತ್ಯ ಮುಂಗಾರು ಮಳೆ ಆರಂಭಾಗಿದೆ. ರೈತರು ಕೃಷಿ ಚಟುವಟಿಕೆಯಲ್ಲಿ ಬ್ಯುಸಿಯಾಗಿದ್ದು, ಕೃಷಿ ಇಲಾಖೆ ರಸಗೊಬ್ಬರ ಬಳಕೆ ಮಾಡುವ ಕುರಿತು ರೈತರಿಗೆ ಸಲಹೆಗಳನ್ನು ನೀಡಿದೆ. ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಗೆ 17 ಪೋಷಕಾಂಶಗಳ ಅಗತ್ಯವಿರುತ್ತದೆ.

ಇವುಗಳಲ್ಲಿ ಇಂಗಾಲ, ಜಲಜನಕ ಮತ್ತು ಆಮ್ಲಜನಕವು ಸ್ವಾಭಾವಿಕವಾಗಿ ದೊರೆಯಲಿದ್ದು, ಗಾಳಿ ಮತ್ತು ನೀರಿನ ಮೂಲಕ ಸಸ್ಯಗಳಿಗೆ ಲಭ್ಯವಾಗುತ್ತವೆ.ಉಳಿದ 14 ಪೋಷಕಾಂಶಗಳಲ್ಲಿ ಸಾರಜನಕ, ರಂಜಕ, ಪೋಟ್ಯಾಷ್ ಹೆಚ್ಚಿನ ಪ್ರಮಾಣದಲ್ಲಿ ಬೇಕಿದ್ದು ಇವುಗಳನ್ನು ಪ್ರಧಾನ ಪೋಷಕಾಂಶಗಳೆಂದು, ಕ್ಯಾಲ್ಸಿಯಂ, ಮೆಗ್ನೆಷಿಯಂ, ಗಂಧಕ, ಕಬ್ಬಿಣ, ಜಿಂಕ್, ಬೋರಾನ್, ತಾಮ್ರ, ಮ್ಯಾಂಗನೀಸ್, ಮಾಲಿಬಿನಂ, ಕ್ಲೋರಿನ್ ಮತ್ತು ನಿಕಲ್ ಕಡಿಮೆ ಪ್ರಮಾಣದಲ್ಲಿ ಬೇಕಿದ್ದು ಇವುಗಳನ್ನು ಲಘು ಪೋಷಕಾಂಶಗಳೆಂದು ವಿಂಗಡಿಸಲಾಗಿದೆ.

ಇವುಗಳಲ್ಲಿ ಯಾವುದೇ ಒಂದು ಪೋಷಕಾಂಶದ ಕೊರತೆಯಾದರೂ ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಯ ಮೇಲೆ ಪರಿಣಾಮ ಬೀರಿ ಇಳುವರಿ ಕುಂಠಿತವಾಗುತ್ತದೆ. ಪ್ರಧಾನ ಪೋಷಕಾಂಶಗಳು ಮತ್ತು ಲಘು ಪೋಷಕಾಂಶಗಳಿಗೆ ಭೂಮಿಯೇ ಮುಖ್ಯ ಆಧಾರ, ಮಣ್ಣಿನಿಂದ ಈ ಎಲ್ಲಾ ಪೋಷಕಾಂಶಗಳು ಬೆಳೆಗಳಿಗೆ ಬೇಕಾದ ಪ್ರಮಾಣದಲ್ಲಿ ದೊರೆಯುವುದಿಲ್ಲವಾದ್ದರಿಂದ ಬಾಹ್ಯವಾಗಿ ನೀಡುವುದು ಅನಿವಾರ್ಯ.

**ರೈತರಿಗೆ ಸಲಹೆಗಳು:** ಬೆಳೆಗಳಿಗೆ ಬೇಕಾಗುವ ಈ ಬಾಹ್ಯ ಪೋಷಕಾಂಶಗಳನ್ನು ಸಾವಯವ (ಕೊಟ್ಟಿಗೆ ಗೊಬ್ಬರ, ಹಸಿರೆಲೆ ಗೊಬ್ಬರ ಹಿಂಡಿ ಮತ್ತಿತರ) ಮತ್ತು ರಸಗೊಬ್ಬರಗಳಿಂದ ಒದಗಿಸಬೇಕಾಗಿದ್ದು ರಸಗೊಬ್ಬರಗಳಲ್ಲಿ ಪೋಷಕಾಂಶಗಳು ಹೆಚ್ಚಿನ ಪ್ರಮಾಣದಲ್ಲಿ ಮತ್ತು ನೇರವಾಗಿ ದೊರೆಯುವ ರೂಪದಲ್ಲಿದ್ದು ಅವುಗಳ ಬಳಕೆ ಅತ್ಯಗತ್ಯವಾಗಿದೆ.

ರೈತರು ಕೇವಲ ಒಂದು ಅಥವಾ ಎರಡು ಪೋಷಕಾಂಶ ಒದಗಿಸುವ ಯೂರಿಯಾ ಹಾಗೂ ಡಿ.ಎ.ಪಿ.ಯನ್ನು ರೂಢಿಗತವಾಗಿ ಬಳಸುತ್ತಿದ್ದು, ಇವುಗಳಲ್ಲಿ ಸಾರಜನಕ ಮತ್ತು ರಂಜಕದ ಅಂಶ ಮಾತ್ರವಿರುತ್ತದೆ. ಆದರೆ, ಬೆಳೆಗಳಿಗೆ ಬರ ಮತ್ತು ರೋಗ ನಿರೋಧಕ ಶಕ್ತಿ ನೀಡಿ ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯಕವಾಗಿರುವ ಪೋಟ್ಯಾಷ್ ಲಭ್ಯವಿರುವುದಿಲ್ಲ. ಮಾರುಕಟ್ಟೆಯಲ್ಲಿ ವಿವಿಧ ಶ್ರೇಣಿಯ (ಗ್ರೇಡ್) ಸಾರಜನಕ, ರಂಜಕ ಮತ್ತು ಪೋಟ್ಯಾಷ್ ಯುಕ್ತ ಬಹಳಷ್ಟು ರಸಗೊಬ್ಬರಗಳು ಲಭ್ಯವಿದ್ದು, ಶಿಫಾರಸ್ಸಿನಂತೆ ವಿವಿಧ ರಸಗೊಬ್ಬರಗಳ ಸಂಯೋಜನೆಯೊಂದಿಗೆ ಬಳಸಬಹುದಾಗಿದೆ.

ಶಿಫಾರಸು ಅನ್ವಯ ಬೆಳೆಗಳಿಗೆ ಸಾರಜನಕ, ರಂಜಕ, ಪೋಟ್ಯಾಷ್ ರಸಗೊಬ್ಬರಗಳನ್ನು 4:2:1ರ ಅನುಪಾತದಲ್ಲಿ ಬಳಸಬೇಕಾಗಿರುತ್ತದೆ. ಆದರೆ ಇತ್ತೀಚಿನ ವರ್ಷಗಳಲ್ಲಿ ರೈತರು ಬಳಸುತ್ತಿರುವ ರಸಗೊಬ್ಬರಗಳ ಅನುಪಾತವು ರಾಜ್ಯದಲ್ಲಿ 5:3:1 ಆಗಿರುತ್ತದೆ. ಇದನ್ನು ಸಮತೋಲನಾತ್ಮಕ ರಸಗೊಬ್ಬರಗಳ ಬಳಕೆಯನ್ನು ಉತ್ತೇಜಿಸಲು ಪೋಟ್ಯಾಷ್ ಯುಕ್ತ ಸಂಯುಕ್ತ ರಸಗೊಬ್ಬರಗಳ ಬಳಕೆಯನ್ನು ಪ್ರೇರೇಪಿಸುವುದು ಮುಖ್ಯವಾಗಿರುತ್ತದೆ.

> **ಅಲ್ಲದೆ, ರೈತರು ರಸಗೊಬ್ಬರವನ್ನು ಕೇವಲ ಒಂದೇ ಸಂಸ್ಥೆಯ ಅಥವಾ ಒಂದೇ ರಸಗೊಬ್ಬರಕ್ಕೆ ಆದ್ಯತೆ ನೀಡದೆ, ಡಿ.ಎ.ಪಿ. ರಸಗೊಬ್ಬರಕ್ಕೆ ಪರ್ಯಾಯವಾಗಿ ಗಂಧಕ ಒದಗಿಸುವ 20:20:0:13 ಹಾಗೂ ಪೋಟ್ಯಾಷ್ ಒದಗಿಸುವ ಇತರೆ ಸಂಯುಕ್ತ (ಕಾಂಪ್ಲೆಕ್ಸ್) ರಸಗೊಬ್ಬರಗಳಾದ 15:15:15, 10:26:26, 12:32:16, 22:22:11, 14:35:14, 17:17:17, 14:28:14, 19:19:19, 20:10:10 ಮತ್ತಿತರ ರಸಗೊಬ್ಬರಗಳನ್ನೂ ಸಹ ಬಳಸಬಹುದಾಗಿದೆ.**

> **ರಾಜ್ಯದಲ್ಲಿ ಪೂರ್ವ ಮುಂಗಾರು ಮಳೆ ಉತ್ತಮವಾಗಿ ಸುರಿದಿದೆ. 2024-25ನೇ ಸಾಲಿನ ಮುಂಗಾರು ಹಂಗಾಮಿನಲ್ಲಿಯೂ ಉತ್ತಮ ಮಳೆಯಾಗಲಿದೆ ಎಂದು ಈಗಾಗಲೇ ಮುನ್ಸೂಚನೆ ನೀಡಲಾಗಿದೆ. ರೈತರು ಈಗಾಗಲೇ ಮುಂಗಾರು ಹಂಗಾಮಿನ ಪೂರ್ವ ಸಿದ್ಧತೆಯಲ್ಲಿದ್ದು, ಜೂನ್‌ನಲ್ಲಿ ಹಲವು ಜಿಲ್ಲೆಗಳಲ್ಲಿ ಭತ್ತ, ಜುಲೈ ಮತ್ತು ಆಗಸ್ಟ್ ತಿಂಗಳಿನಲ್ಲಿ ಮುಸುಕಿನ ಜೋಳದ ಬಿತ್ತನೆ ಕಾರ್ಯ ಕೈಗೊಳ್ಳಲಿದ್ದಾರೆ.**

## ನಾಗೇಂದ್ರ ಸ್ವಯಂ ಪ್ರೇರಣೆಯಿಂದ ರಾಜೀನಾಮೆಗೆ ಮುಂದಾಗಿದ್ದಾರೆ

• ಉದಯವಾಹಿನಿ, ಬೆಂಗಳೂರು

ಪಕ್ಷ ಹಾಗೂ ಸರ್ಕಾರಗ ಘನತೆಗೆ ಧಕ್ಕೆಯಾಗಬಾರದು ಎಂಬ ಕಾರಣಕ್ಕೆ ಸಚಿವ ನಾಗೇಂದ್ರ ಅವರು ಸ್ವಯಂ ಪ್ರೇರಿತರಾಗಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಲು ಮುಂದಾಗಿದ್ದಾರೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಕ್ವೀನ್ಸ್ ರಸ್ತೆಯ ಕೆಪಿಸಿಸಿ ಕಚೇರಿ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಗುರುವಾರ ಪ್ರತಿಕ್ರಿಯಿಸಿದರು.

ಸಚಿವ ಬಿ.ನಾಗೇಂದ್ರ ಅವರ ರಾಜೀನಾಮೆಗೆ ವಿರೋಧ ಪಕ್ಷಗಳು ಆಗ್ರಹಿಸುತ್ತಿರುವ ಬಗ್ಗೆ ಕೇಳಿದಾಗ, ನಾನು, ಗೃಹ ಸಚಿವರು ಸಚಿವ ನಾಗೇಂದ್ರ ಅವರ ಜತೆ ಚರ್ಚೆ ಮಾಡಿದ್ದೇವೆ.



ಅವರು ಈ ಅಕ್ರಮದಲ್ಲಿ ಭಾಗಿಯಾಗಿಲ್ಲ. ಹೀಗಾಗಿ ಅವರು ರಾಜೀನಾಮೆ ಕೊಡುವ ಅಗತ್ಯವಿಲ್ಲ. ಆದರೆ ಪಕ್ಷದ ಹಾಗೂ ಸರ್ಕಾರದ ಘನತೆಗೆ ಧಕ್ಕೆ ಬರಬಾರದು ಎಂದು ಸ್ವತಃ ನಾಗೇಂದ್ರ ಅವರೇ ರಾಜೀನಾಮೆ ನೀಡಲು ಮುಂದಾಗಿದ್ದಾರೆ.

ಅವರು ರಾಜೀನಾಮೆ ನೀಡಬಹುದು ಎಂದರು.ಸರ್ಕಾರ ರಾಜೀನಾಮೆ ಸ್ವೀಕರಿಸಲಿದೆಯೇ ಎಂದು ಕೇಳಿದಾಗ, ಮುಖ್ಯಮಂತ್ರಿಗಳು ಪಕ್ಷದ ಹೈಕಮಾಂಡ್ ಜತೆ ಚರ್ಚೆ ಮಾಡಿ ನಿರ್ಧಾರವನ್ನು ಕೈಗೊಳ್ಳಲಿದ್ದಾರೆ ಎಂದರು. ಲೋಕಸಭೆ ಚುನಾವಣೆ ಫಲಿತಾಂಶದ ಬಗ್ಗೆ ಕೇಳಿದಾಗ, ದೇಶದಲ್ಲಿ ಇಂಡಿಯಾ ಮೈತ್ರಿಕೂಟ ಉತ್ತಮ ಪ್ರದರ್ಶನ ನೀಡಿರುವುದಕ್ಕೆ ಸಂತೋಷವಾಗಿದೆ. ನಮ್ಮ ಮೈತ್ರಿಕೂಟ ಅಧಿಕಾರದ ಸನಿಹಕ್ಕೆ ಬಂದರೂ ಸರ್ಕಾರ ರಚನೆ ಪ್ರಯತ್ನದಿಂದ ದೂರವಿರಲು ನಿರ್ಧರಿಸಿದೆ. ಪ್ರತಿಪಕ್ಷಗಳು ಬಲಿಷ್ಠವಾಗಿರಬೇಕು ಎಂದು ದೇಶ ಅಭಿಪ್ರಾಯ ಪಟ್ಟಿದೆ. ದೇಶದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಸಂವಿಧಾನ ರಕ್ಷಣೆಗೆ ಹೊಸ ಭರವಸೆ ಸಿಕ್ಕಿದೆ. ಭವಿಷ್ಯದ ಬಗ್ಗೆ ಎಐಸಿಸಿ ಅಧ್ಯಕ್ಷರು ತೀರ್ಮಾನ ಮಾಡಲಿದ್ದಾರೆ ಎಂದರು.

## 5 ಗ್ಯಾರಂಟಿಗಳ ಪುನರ್ ಪರಿಶೀಲನೆಗೆ ಒತ್ತಡ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಕರ್ನಾಟಕ ರಾಜ್ಯದಲ್ಲಿ ಲೋಕಸಭಾ ಚುನಾವಣೆ ಸಮರ ಅಂತ್ಯ ಕಂಡಿದೆ. ರಾಜಕೀಯ ಪಕ್ಷಗಳು ಸೋಲು-ಗೆಲುವಿನ ವಿಮರ್ಶೆಗಳಲ್ಲಿ ಮುಳುಗಿವೆ. ಈ ನಡುವೆ ರಾಜ್ಯ ಕಾಂಗ್ರೆಸ್ ಶಾಸಕರಿಗೆ ಕಡಿಮೆ ಸೀಟು ಗೆದ್ದಿದ್ದಕ್ಕೆ ಅಸಮಾಧಾನ ಹೊರ ಹಾಕಿದ್ದಾರೆ. ಸರ್ಕಾರದ ಮಹತ್ವಾಕಾಂಕ್ಷೆಯ ಗ್ಯಾರಂಟಿಗಳನ್ನು ಮರು ಪರಿಶೀಲಿಸುವಂತೆ ಒತ್ತಡ ತರುತ್ತಿದ್ದಾರೆ ಎನ್ನಲಾಗಿದೆ.ಹಾಗಾದರೆ ಶಾಸಕರ ವಾದವೇನು?,

ಚುನಾವಣೆ ವೇಳೆ ಕನಿಷ್ಠ 20 ಕ್ಷೇತ್ರಗಳನ್ನು ಗೆಲ್ಲುತ್ತೇವೆ ಎಂದು ಕಾಂಗ್ರೆಸ್ ನಾಯಕರು ಹೇಳಿಕೊಂಡಿದ್ದರು. ಇತ್ತ ಶಾಸಕರು ಕನಿಷ್ಠ ಅರ್ಧದಷ್ಟು ಸೀಟುಗಳು (14) ಗೆಲ್ಲುತ್ತೇವೆ. ನಮಗೆ ಗ್ಯಾರಂಟಿ ಯೋಜನೆಗಳು ಕೈ ಹಿಡಿಯುತ್ತವೆ ಎಂದುಕೊಂಡಿದ್ದರು. ಆದರೆ ಕಾಂಗ್ರೆಸ್ ರಾಜ್ಯದಲ್ಲಿ ಕೇವಲ 09 ಸ್ಥಾನಗಳನ್ನು ಮಾತ್ರ ಗೆದ್ದಿದೆ. ಇದು ನಮಗೆ ಸಮಾಧಾನ ತಂದಿಲ್ಲ.

ಗ್ಯಾರಂಟಿ ಯೋಜನೆಗಳು ಜಾರಿಯಾದ ಬಳಿಕ ರಾಜ್ಯದ ಬಹುತೇಕ ಮಹಿಳೆಯರು ಕಾಂಗ್ರೆಸ್ ಪರ ಇದ್ದಾರೆ ಎಂದು ಭಾವಿಸಿದ್ದೆವು. ನಮ್ಮ ನಿರೀಕ್ಷೆ ಹುಸಿಯಾಗಿದೆ. ಆದ್ದರಿಂದ ಈ ಐದು ಗ್ಯಾರಂಟಿಗಳನ್ನು ರಾಜ್ಯ ಸರ್ಕಾರ ಪುನರ್ ಪರಿಶೀಲಿಸುವಂತೆ ಒತ್ತಡ ತರಲು ಆರಂಭಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

## ಸಚಿವ ನಾಗೇಂದ್ರ ರಾಜೀನಾಮೆ ಬಗ್ಗೆ ಸಿದ್ದು ಅಸಮಂಜಸ ಪ್ರತಿಕ್ರಿಯೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ತನಿಖೆ ಆಗಲಿ, ವರದಿ ಬರಲಿ**

ಸಚಿವ ನಾಗೇಂದ್ರ ಅವರೊಂದಿಗೆ ಮಾತನಾಡಿದ್ದೇನೆ. ಕರೆದು ಮಾತಾಡಿದ ತಕ್ಷಣ ರಾಜೀನಾಮೆ ಅಂತ ಅಲ್ಲ, ತನಿಖೆ ಆಗಲಿ, ವರದಿ ಬರಲಿ. ಪ್ರತಿಭಟನೆ, ಪಾದಯಾತ್ರೆ ಮಾಡುವವರು ಮಾಡಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಸಮಂಜಸವಾಗಿ ಪ್ರತಿಕ್ರಿಯಿಸಿದ್ದಾರೆ.


ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ವಿಧಾನಸೌಧ ಪಶ್ಚಿಮ ದ್ವಾರದ ಬಳಿ ಇರುವ ಮಾಜಿ ಮುಖ್ಯಮಂತ್ರಿಗಳಾದ ದಿವಂಗತ ದೇವರಾಜ ಅರಸುರವರ 42ನೇ ಪುಣ್ಯಸ್ಮರಣೆ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಂತರ ಮಾಧ್ಯಮದವರೊಂದಿಗೆ ಮಾತನಾಡಿ, ಬಿಜೆಪಿಯವರು ರಾಜಭವನಕ್ಕೆ ಹೋದರೆ ಹೋಗಲಿ. ಅಭಿವೃದ್ಧಿ ನಿಗಮದ ಅವ್ಯವಹಾರ ಕುರಿತ ತನಿಖೆಗೆ ಎಸ್ಐಟಿ ರಚನೆ ಆಗಿದೆ, ಎಸ್ಐಟಿ ಯವರು ತನಿಖೆ ಮಾಡ್ತಿದ್ದಾರೆ. ತನಿಖೆ ಮುಗಿಯಲಿ. ನಾನು ಎಲ್ಲಾ ಸಚಿವರನ್ನು ಕರೆದು ಮಾತನಾಡಿದ್ದೇನೆ. ನಾಗೇಂದ್ರ ರ ಜೊತೆಗೂ ಮಾತಾಡಿದ್ದೇನೆ ನೋಡೋಣ ಎಂದರು. ದೇವರಾಜ ಅರಸು ಅವರು ಕರ್ನಾಟಕದಲ್ಲಿ ಮುಖ್ಯಮಂತ್ರಿಯಾಗಿ ಎಂಟು ವರ್ಷಗಳ ಕಾಲ ಸಾಮಾಜಿಕ ನ್ಯಾಯದ ಅಡಿಪಾಯ ಹಾಕಿದರು.

> **ದೇವರಾಜ ಅರಸು ಅವರು ಕಾಂಗ್ರೆಸ್ ಪಕ್ಷದ ಪ್ರಮುಖ ನಾಯಕರಾಗಿ ಈ ರಾಜ್ಯದಲ್ಲಿ ಬದಲಾವಣೆ ತರಲು ಪ್ರಯತ್ನಿಸಿದರು. ಅವರ ಹಾದಿಯಲ್ಲಿಯೇ ನಡೆಯುವ ಪ್ರಯತ್ನವನ್ನು ನಮ್ಮ ಸರ್ಕಾರವೂ ಮಾಡುತ್ತದೆ. ಅದೇ ನಾವು ಅವರಿಗೆ ಸಲ್ಲಿಸುವ ಗೌರವ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.**

ಅದರ ಬುನಾದಿಯ ಮೇಲೆ ಸಾಮಾಜಿಕ ನ್ಯಾಯ ಕರ್ನಾಟಕದಲ್ಲಿ ಮುಂದುವರೆದಿದೆ ಕಾಂಗ್ರೆಸ್ ಪಕ್ಷ ಮಾತ್ರ ಸಾಮಾಜಿಕ ನ್ಯಾಯ ಪಾಲಿಸುತ್ತಿದೆ. ಇತರೆ ಪಕ್ಷಗಳಿಗೆ ಸಾಮಾಜಿಕ ನ್ಯಾಯದ ಕುರಿತು ಬದ್ಧತೆ ಇಲ್ಲ. ಬದಲಿಗೆ ಅದರ ವಿರುದ್ಧವಾಗಿದ್ದಾರೆ ಎಂದರು.

## ವೈದ್ಯರ ಎಡವಟ್ಟಿಗೆ 7 ವರ್ಷದ ಬಾಲಕ ಸಾವು

• ಉದಯವಾಹಿನಿ, ಬೆಂಗಳೂರು



ಸಂಪಂಗಿ ರಾಮನಗರದಲ್ಲಿ ವೈದ್ಯರೊಬ್ಬರು ಮಾಡಿದಂತ ಎಡವಟ್ಟಿಗೆ 7 ವರ್ಷದ ಬಾಲಕನೊಬ್ಬ ಧಾರುಣವಾಗಿ ಸಾವನ್ನಪ್ಪಿದ್ದಂತ ಘಟನೆ ನಡೆದಿದೆ. ಬೆಂಗಳೂರಿನ ಸಂಪಂಗಿ ರಾಮನಗರದ 7 ವರ್ಷದ ಬಾಲಕ ಆಡನ್ ಮೈಕಲ್ ಎಂಬಾತನಿಗೆ ಊಟ ಮಾಡುವಂತ ಗಂಟಲು ನೋವು ಕಾಣಿಸಿಕೊಂಡಿತ್ತು.ಈ ಹಿನ್ನಲೆಯಲ್ಲಿ ಸಿಂಧ್ಯಾ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿತ್ತು.ಆಡನ್ ಮೈಕಲ್ ಪರೀಕ್ಷೆ ಮಾಡಿದಂತ ವೈದ್ಯರು, ಆಪರೇಷನ್ ಮಾಡಬೇಕು ಅಂತ ಹೇಳಿದ್ದಾರೆ. ಅದಕ್ಕೆ ಕುಟುಂಬಸ್ಥರು ಒಪ್ಪಿಗೆ ಸೂಚಿಸಿದ್ದಾರೆ. ಸಿಂಧ್ಯಾ ಆಸ್ಪತ್ರೆಯ ಡಾ.ಶ್ವೇತಾ ಪೈ ಎಂಬುವರು ಬಾಲಕ ಆಡನ್ ಮೈಕಲ್ ಗೆ ಅನೆ ಸ್ತೇಷಿಯಾ ನೀಡಿದ್ದಾರೆ. ಹೀಗೆ ನೀಡಿದಂತ ಕೆಲವೇ ನಿಮಿಷದಲ್ಲಿ ಬಾಲಕ ಸಾವನ್ನಪ್ಪಿದ್ದಾನೆ. ಇದನ್ನು ಮುಚ್ಚಿಕೊಳ್ಳೋದಕ್ಕೆ ಬಾಲಕನಿಗೆ ಹೃದಯ ಸಂಬಂಧಿ ಸಮಸ್ಯೆ ಇದೆ. ಅದು ಇದು ಅಂತ ಕಥೆ ಹೊಡೆದಿದ್ದಾರೆ. ಅನುಮಾನಗೊಂಡ ಪೋಷಕರು, ಪೊಲೀಸರಿಗೆ ದೂರು ನೀಡಿದ್ದಾರೆ. ಸ್ಥಳಕ್ಕೆ ಬಂದ ಪೊಲೀಸರು ಪರಿಶೀಲಿಸಿದಾಗ ಬಾಲಕ ಅನೆಸ್ತೇಷಿಯಾ ಓವರ್ ಡೋಸ್ ಆಗಿ ಸಾವನ್ನಪ್ಪಿದ್ದಾನೆ ಎನ್ನಲಾಗುತ್ತಿದೆ. ಸದ್ಯ ವಿಕ್ಟೋರಿಯಾ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗಾಗಿ ಬಾಲಕನ ಮೃತದೇಹ ಕಳುಹಿಸಿಕೊಡಲಾಗಿದೆ.

## ಉತ್ತರಾಖಂಡಕ್ಕೆ ಚಾರಣಕ್ಕೆ ತೆರಳಿದ್ದ ಕರ್ನಾಟಕದ ಐವರು ಸೇಫ್

• ಉದಯವಾಹಿನಿ, ಬೆಂಗಳೂರು

ಉತ್ತರಾಖಂಡಕ್ಕೆ ಚಾರಣಕ್ಕೆ ಕರ್ನಾಟಕದಿಂದ ತೆರಳಿದ್ದಂತ ಐವರು ಚಾರಣಿಗರು ಸೇಫ್ ಆಗಿದ್ದಾರೆ. ಇನ್ನುಳಿದಂತೆ 9 ಮಂದಿ ಸಾವನ್ನಪ್ಪಿದ್ದಾರೆ. ಅವರ ಮೃತದೇಹವನ್ನು ಡೆಹ್ರಾಡೂನ್ ಗೆ ವಿಮಾನದಲ್ಲಿ ಸಾಗಿಸಲು ಸ್ವಲ್ಪ ವಿಳಂಬವಾಗಿದೆ. ಬೆಂಗಳೂರಿಗೆ ಅಲ್ಲಿಂತ ತರಲಾಗುತ್ತದೆ ಅಂತ ಕಂದಾಯ ಸಚಿವ ಕೃಷ್ಣ ಬೈರೇಗೌಡ ಸ್ಪಷ್ಟಪಡಿಸಿದ್ದಾರೆ.

ಇಂದು ಈ ಸಂಬಂಧ ಹೇಳಿಕೆ ಬಿಡುಗಡೆ ಮಾಡಿರುವಂತ ಅವರು, ಅವಘಡದಲ್ಲಿ ಬದುಕುಳಿದಿರುವ 5 ಜನ ಚಾರಣಿಗರು ಮತ್ತು 9 ಮೃತದೇಹಗಳನ್ನು ಉತ್ತರಕಾಶಿಯಿಂದ ಡೆಹ್ರಾಡೂನ್‌ಗೆ ವಿಮಾನದಲ್ಲಿ ಸಾಗಿಸಲು ಸ್ವಲ್ಪ ವಿಳಂಬವಾಗಿದೆ. ದುರಂತದ ಸ್ವರೂಪದ ಕಾರಣಕ್ಕೆ ಕೆಲವು ಏಜೆನ್ಸಿಗಳಿಂದ ಕಾನೂನು ದಾಖಲೆಗಳ ಪರಿಶೀಲನಾ ಕೆಲಸ ವಿಳಂಬವಾಗುತ್ತಿದೆ ಎಂದಿದ್ದಾರೆ. ಬದುಕುಳಿದಿರುವ 5 ಜನ ಚಾರಣಿಗರು ಮತ್ತು 9 ಮೃತದೇಹಗಳು ಇಂದು ಮಧ್ಯಾಹ್ನ 2.30ಕ್ಕೆ ವಿಮಾನದ ಮೂಲಕ ಡೆಹ್ರಾಡೂನ್ ತಲುಪಲಿವೆ. ಇದಲ್ಲದೆ, ಎಲ್ಲಾ 9 ಮೃತದೇಹಗಳನ್ನು ಬೆಂಗಳೂರಿಗೆ ಸಾಗಿಸಲು ಈ ಅಲ್ಪ ಅವಧಿಯಲ್ಲಿ ಚಾರ್ಟರ್ ಫ್ಲೈಟ್ ವ್ಯವಸ್ಥೆಗೊಳಿಸುವುದು ನಮ್ಮಿಂದ ಸಾಧ್ಯವಾಗುತ್ತಿಲ್ಲ. ಹೀಗಾಗಿ ಇಂದು ಎಲ್ಲಾ 9 ಮೃತ ದೇಹಗಳನ್ನು ರಸ್ತೆ ಮೂಲಕ ದೆಹಲಿಗೆ ಸಾಗಿಸಲು ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ. ವಾಣಿಜ್ಯ ವಿಮಾನಗಳ ಮೂಲಕ ನಾಳೆ ಬೆಳಿಗ್ಗೆ ದೆಹಲಿಯಿಂದ ಬೆಂಗಳೂರಿಗೆ ಮೃತ ದೇಹಗಳನ್ನು ತಲುಪಿಸಲು ನಮ್ಮ ತಂಡ ವ್ಯವಸ್ಥೆ ಮಾಡುತ್ತಿದೆ. ಇನ್ನೂ ಒಂದೆರಡು ಗಂಟೆಗಳಲ್ಲಿ ಎಲ್ಲವೂ ಸ್ಪಷ್ಟವಾಗಲಿದೆ ಎಂದಿದ್ದಾರೆ.

## ವೇದಿಕೆಯಲ್ಲೇ ತನ್ನ ಚಟದ ಗುಟ್ಟು ಬಿಚ್ಚಿಟ್ಟ ಸಿದ್ದು

• ಉದಯವಾಹಿನಿ, ಬೆಂಗಳೂರು

ದೈಹಿಕವಾಗಿ ಚಟುವಟಿಕೆ ಇಲ್ಲದೆ ಕುಳಿತವರಿಗೆ ಅನಾರೋಗ್ಯ ಹೆಚ್ಚು. ಆದ್ದರಿಂದ ದೈಹಿಕ ಮತ್ತು ಮಾನಸಿಕ ಚಟುವಟಿಕೆ ಅಗತ್ಯ. ನನಗೂ ಒಂದಾನೊಂದು ಕಾಲದಲ್ಲಿ ಆ ಒಂದು ಅಭ್ಯಾಸವಿತ್ತು. ಅದನ್ನು ಬಿಟ್ಟೆ ಅಂತ ವೇದಿಕೆಯಲ್ಲೇ ತನ್ನ ಚಟದ ಗುಟ್ಟನ್ನು ಸಿಎಂ ಸಿದ್ಧರಾಮಯ್ಯ ಬಿಚ್ಚಿಟ್ಟರು.

ಸಚಿವಾಲಯದ ಅಧಿಕಾರಿ ಮತ್ತು ಸಿಬ್ಬಂದಿಗೆ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಮತ್ತು ಚಿಕಿತ್ಸಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಜೀವನಶೈಲಿ ಮತ್ತು ಆಹಾರ ಪದ್ಧತಿ ಮನುಷ್ಯನ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ. ರಾಜ್ಯ ಸರ್ಕಾರ ಎಲ್ಲಾ ಜನ ವರ್ಗಕ್ಕೆ ಆರೋಗ್ಯ ಮತ್ತು ಅಗತ್ಯ ಚಿಕಿತ್ಸೆಗೆ ಒದಗಿಸಲು ಕಾರ್ಯಕ್ರಮಗಳನ್ನು ನಿರಂತರವಾಗಿ ರೂಪಿಸಿ, ಜಾರಿ ಮಾಡುತ್ತಿದ್ದೇವೆ ಎಂದರು. ಕ್ಯಾನ್ಸರ್ ನಂತಹ ಮಾರಕ ರೋಗವನ್ನೂ ಗುಣಪಡಿಸುವುದು ಸಾಧ್ಯವಿದೆ. ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುತ್ತಿದ್ದರೆ ದೀರ್ಘ ಕಾಲ ಆರೋಗ್ಯ ಕಾಪಾಡಿಕೊಳ್ಳುವುದು ಸಾಧ್ಯವಿದೆ ಎಂದರು.

ಹಿಂದಿನವರ ಆರೋಗ್ಯ ಪದ್ಧತಿ ಮತ್ತು ಶ್ರಮಾಧಾರಿತ ಜೀವನ ಶೈಲಿ ಅವರನ್ನು ಗಟ್ಟಿಮುಟ್ಟಾಗಿ ಸದೃಡವಾಗಿ ಇಟ್ಟಿತ್ತು ಎಂದರು.

ಇಂಥಾ ಆರೋಗ್ಯ ತಪಾಸಣಾ ಶಿಬಿರಗಳು ಮೇಲಿಂದ ಮೇಲೆ ಆಗಬೇಕು. ರಾಜ್ಯದ ಮೂಲೆ ಮೂಲೆಗಳಲ್ಲೂ ನಡೆಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ತುಂಬಾ ವಯಸ್ಸಾದ ಮೇಲೆ ಬರುವ ಆರೋಗ್ಯ ಸಮಸ್ಯೆಗಳು ಬರದಂತೆ ವಯಸ್ಸಿದ್ದಾಗಲೇ ಪ್ರಯತ್ನಿಸಿ ಎಂದು ಕರೆ ನೀಡಿದರು. ಆರೋಗ್ಯ ಸಚಿವರಾದ ದಿನೇಶ್ ಗುಂಡೂರಾವ್, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಎಚ್.ಎಂ.ರೇವಣ್ಣ, ಮುಖ್ಯ ಸಚೇತಕರಾದ ಅಶೋಕ್ ಪಟ್ಟಣ್ , ಅಪರ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಉಪಸ್ಥಿತರಿದ್ದರು.




> **ಸಹವಾಸ ದೋಷದಿಂದಲೂ ಅನಾರೋಗ್ಯ ತರುವ ಚಟಗಳು ಅಂಟಿಕೊಳ್ಳುತ್ತವೆ. ಆದರೆ ಸದಾ ಎಚ್ಚರದಿಂದ ನಮ್ಮನ್ನು ನಾವು ಕಾಪಾಡಿಕೊಳ್ಳಬೇಕು. ನಾನೂ ಮೊದಲು ಸಿಗರೇಟ್ ಸೇದುತ್ತಿದ್ದೆ. ಒಮ್ಮೆ ವಿದೇಶಕ್ಕೆ ಹೋದಾಗ ಸ್ನೇಹಿತರು ಸಿಗರೇಟ್ ಪ್ಯಾಕ್ ತಂದುಬಿಟ್ಟಿದ್ದರು. ನಾನು ಕಡಿಮೆ ಅವಧಿಯಲ್ಲಿ ಹೆಚ್ಚು ಸಿಗರೇಟ್ ಸೇದಿಬಿಟ್ಟೆ. ಅವತ್ತೇ ನನಗೆ ಮನವರಿಕೆ ಆಯ್ತು. ಮನವರಿಕೆ ಆಗಿದ್ದು ಆಗಸ್ಟ್ 27 ನೇ ತಾರೀಕಿನಂದು. ಅದೇ ದಿನ ಸಿಗರೇಟ್ ಸೇದುವುದನ್ನು ಸಂಪೂರ್ಣ ನಿಲ್ಲಿಸಿದೆ ಎಂದು ನೆನಪಿಸಿಕೊಂಡರು.**

# ಲೋ. ಚು. ಬಿಜೆಪಿ ಮುಂದೊಡಲು ಕಾರಣವಾಗಿದ್ದು ಯೂಟ್ಯೂಬರ್

### ಯೂಟ್ಯೂಬ್ ಚಾನೆಲ್‌ಗಳನ್ನು ನೋಡುವವರ ಸಂಖ್ಯೆ ಹೆಚ್ಚು,ವಿಡಿಯೋಗಳು ಜನರ ಗಮನ ಸೆಳೆಯಲು ಆರಂಭ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಧ್ರುವ ರಾಠಿ..ಹೇಗೆ ಗೊತ್ತಾ?**

ಇತ್ತೀಚೆಗೆ ಮಾಧ್ಯಮಗಳು ಒಂದು ಪಕ್ಷದ ಮುಖವಾಣಿಯಂತೆ ಕಾರ್ಯನಿರ್ವಹಿಸುತ್ತಿರುವುದು ಕಣ್ಣಿಗೆ ರಾಚುತ್ತಿದೆ. ವಿರೋಧ ಪಕ್ಷಗಳಾಗಿ ಕಾರ್ಯ ನಿರ್ವಹಿಸಬೇಕಾಗಿದ್ದ ನಾಲ್ಕನೆ ಕಂಬ ತನ್ನ ಕೆಲಸ ಮರೆತಿರುವುದು ಸ್ಪಷ್ಟವಾಗಿದೆ. ಯೂಟ್ಯೂಬ್ ಚಾನೆಲ್ ಗಳನ್ನು ನೋಡುವವರ ಸಂಖ್ಯೆ ಹೆಚ್ಚಾಗಿರುವುದು ಇದನ್ನು ಮತ್ತಷ್ಟು ಸ್ಪಷ್ಟವಾಗಿಸಿದೆ. ಸದ್ಯ ನಾವು ಹೇಳಲು ಹೊರಟಿರುವುದು ಕೂಡ ಇಂತಹದ್ದೆ ಒಬ್ಬ ಯೂಟ್ಯೂಬರ್ ಒಬ್ಬರ ಬಗ್ಗೆ. ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಅಂದುಕೊಂಡಿದ್ದಕ್ಕಿಂತ ಕಡಿಮೆ ಸ್ಥಾನಗಳನ್ನು ಗಳಿಸಲು, 150ರ ಗಡಿ ದಾಟಲ್ಲ ಎಂದು ಹೇಳಲಾಗುತ್ತಿದ್ದ ಇಂಡಿಯಾ ಒಕ್ಕೂಟದ ಸಾಧನೆಗೆ ಹೆಚ್ಚು ಕೊಡುಗೆ ಕೊಟ್ಟವರಲ್ಲಿ ಈ ಯೂಟ್ಯೂಬರ್ 'ಧ್ರುವ್ ರಾಠಿ' ಪ್ರಮುಖ ಪಾತ್ರ ವಹಿಸಿದ್ದಾರೆ.

ಎಸ್... ಧ್ರುವ್ ರಾಠಿ ತನ್ನ ಯೂಟ್ಯೂಬ್ ಚಾನೆಲ್ ನಲ್ಲಿ ಈ ಚುನಾವಣೆಯ ಸಮಯದಲ್ಲಿ ಮತ್ತು ಅದಕ್ಕಿಂತ ಮುಂಚೆಯಿಂದ ಸರ್ಕಾರದ ನೀತಿಗಳ ವಿರುದ್ಧ ಮಾಡಿದ ವಿಡಿಯೋಗಳು ಜನರ ಗಮನ ಸೆಳೆಯಲು ಆರಂಭಿಸಿದ್ದವು. ಮಾಹಿತಿಯುಕ್ತ ಮತ್ತು ಸಾಮಾನ್ಯ ಜನರಿಗೂ ಅರ್ಥವಾಗುವಂತೆ ವಿಷಯವನ್ನು ಮುಟ್ಟಿಸುವ ಅವರ ವಿಡಿಯೋಗಳು ವೈರಲ್ ಆಗಲು ಪ್ರಾರಂಭಿಸಿದ್ದವು. ಜನ ಅವರ ವಿಡಿಯೋಗಳನ್ನು ಹುಡುಕು ಹುಡುಕಿ ನೋಡಲು ಪ್ರಾರಂಭಿಸಿದ್ದೇ ಮೋದಿ ಸರ್ಕಾರದ ಪತನಕ್ಕೆ ಹೊಡೆದ ಮೊದಲ ಮೊಳೆಯಾಗಿತು

ಧ್ರುವ್ ರಾಠಿ ಭಾರತೀಯರಾದರೂ ಜರ್ಮನಿಯಲ್ಲಿ ನೆಲೆಸಿದ್ದಾರೆ. ದೇಶದ ಬಗ್ಗೆ ಅಪಾರ ಕಾಳಜಿ ಇರುವ ಇವರು ತಮ್ಮ ವಿಡಿಯೋಗಳಲ್ಲಿ ಬಿಜೆಪಿ ಸರ್ಕಾರ ನೀತಿಗಳು ಜನ ಸಾಮಾನ್ಯರನ್ನು ಹೇಗೆ ಭಾದಿಸುತ್ತಿವೆ. ಶ್ರೀಮಂತರ ತಿಜೋರಿಯನ್ನು ಹೇಗೆ ತುಂಬಿಸುತ್ತಿದೆ ಎಂಬುದನ್ನು ಅಚ್ಚುಕಟ್ಟಾಗಿ ವಿವರಿಸುತ್ತಾರೆ. ವಿಡಿಯೋಗಳು ಮಿಲಿಯನ್‌ಗಟ್ಟಲೆ ವೀಕ್ಷಣೆ ಪಡೆಯುತ್ತವೆ.

> **ತನ್ನ ಕೆಲಸಕ್ಕೆ 21 ಮಿಲಿಯನ್ ಯೂಟ್ಯೂಬ್ ಚಂದಾದಾರರು, ಮೂರು ತಿಂಗಳಲ್ಲಿ ಬರೋಬ್ಬರಿ 70 ಮಿಲಿಯನ್ ಯೂನಿಕ್ ಯೂಸರ್ಸ್ ಬಂದಿದ್ದಾರೆ. ಇದರ ಅರ್ಥ ಒಂದು ಯೂಟ್ಯೂಬ್ ಚಾನೆಲ್ ಬರೋಬ್ಬರಿ 7% ಮತದಾರರನ್ನು ತಲುಪಿದೆ. ಇದು ಬರಿ ಯೂಟ್ಯೂಬ್ ಡಾಟ. ಆದರೆ, ಫೇಸ್‌ಬುಕ್, ಟ್ವಿಟರ್, ವಾಟ್ಸಾಪ್ ಮತ್ತು ಇನ್‌ಸ್ಟಾಗ್ರಾಮ್ ಗಳ ಮೂಲಕ ಹೆಚ್ಚು ಕಡಿಮೆ 20 ರಿಂದ 25 % ಮತದಾರರನ್ನು ತಲುಪಿದ್ದೇವೆ. ಅದರಲ್ಲಿ ಶೇಕಡಾ 80 ರಷ್ಟು ವೀಕ್ಷಕರು ಭಾರತೀಯರು ಎಂಬ ಡಾಟವನ್ನು ಹಂಚಿಕೊಂಡಿದ್ದಾರೆ.**

ಲೋಕಸಭಾ ಚುನಾವಣಾ ಸಮಯದಲ್ಲಿ ಮತ ಚಲಾಯಿಸುವ ಮುನ್ನ ಯೋಚಿಸಿ ಮತ ಚಲಾಯಿಸುವಂತೆ ಮಾಡಿದ್ದ ಸರಣಿ ವಿಡಿಯೋಗಳು ಯೂಟ್ಯೂಬ್, ಟ್ವಿಟರ್ ಮತ್ತು ಫೇಸ್‌ಬುಕ್‌ನಲ್ಲಿ ದಾಖಲೆ ಬರೆದಿದ್ದವು. ರಿಯಾಲಿಟಿ ಆಫ್ ಮೋದಿ, ದಿ ನರೇಂದ್ರ ಮೋದಿ ಫೈಲ್ಸ್, ಸರ್ವಾಧಿಕಾರ ಜಾರಿಯಾಯಿತೆ...?, ಚುನಾವಣಾ ಬಾಂಡ್‌ಗಳ ಹಗರಣ, ಮೋದಿ: ದಿ ರಿಯಲ್ ಸ್ಟೋರಿ, ರೈತರು ಮತ್ತು ಮೋದಿ, ರಾಮ ಮಂದಿರ... ಮುಂದಾದ ವಿಡಿಯೋಗಳನ್ನು ಜನ ಮತ್ತೆ ಮತ್ತೆ ನೋಡುತ್ತಿದ್ದಾರೆ.

ಈ ಎಲ್ಲಾ ವಿಡಿಯೋಗಳು ಮತದಾರನ ಮೇಲೆ ಪ್ರಭಾವ ಬೀರಿವೆ. ಚುನಾವಣಾ ಸಮಯದಲ್ಲಿ ಮಾಧ್ಯಮಗಳು ಬಿಜೆಪಿ ಪರ ವಹಿಸಿದ್ದನ್ನು, ಬಿಜೆಪಿ ನಾಯಕರು ಸಂವಿಧಾನ ಬದಲಾವಣೆಯ ಬಗ್ಗೆ ನೀಡಿದ ಹೇಳಿಕೆಗಳನ್ನು ಸಾಕ್ಷಿ ಸಮೇತ ಬಯಲು ಮಾಡುವ ಅವರು ತಾವು ವೈಜ್ಞಾನಿಕ ಮತ್ತು ಶೈಕ್ಷಣಿಕ ವಿಡಿಯೋಗಳನ್ನು ಬಿಟ್ಟು ರಾಜಕೀಯ ವಿಡಿಯೋಗಳನ್ನು ಮಾಡಲು ಆರಂಭಿಸಿದ್ದು ಏಕೆ ಎಂಬುದನ್ನು ಹೇಳಿಕೊಂಡಿದ್ದಾರೆ.

> **ಫೆಬ್ರವರಿ 2024ರಲ್ಲಿ ಚಂಡೀಗಡ ಮೇಯರ್ ಎಲೆಕ್ಷನ್‌ನಲ್ಲಿ ನಡೆದ ಹಗರಣ ಇವರನ್ನು ರಾಜಕೀಯ ವಿಚಾರಗಳ ವಿಡಿಯೋ ಮಾಡಲು ಪ್ರೇರೆಪಿಸಿದ್ದನ್ನು ತಿಳಿಸಿದ್ದಾರೆ. ಪ್ರಜಾಪ್ರಭುತ್ವದ ಕೊಲೆ ಎಂದು ಸುಪ್ರೀಂಕೋರ್ಟ್ ಕೊಟ್ಟ ಹೇಳಿಕೆ ನನ್ನನ್ನು ತುಂಬಾ ಕಾಡಿತ್ತು. ಅಂದಿನಿಂದ ನಾನು ಸುಮ್ಮನೆ ಕೂರುವುದಿಲ್ಲ ಎಂದು ನಿರ್ಧರಿಸಿದೆ. ಅಂದಿನಿಂದ ಜನರನ್ನು ಎಚ್ಚರಿಸುವುದು ನನ್ನ ಕೆಲಸವಾಯಿತು. ಯಾರು ಏನು ಮಾಡಲಿ ಬಿಡಲಿ, ನಾನು ಮಾತ್ರ ನನ್ನ ಕೆಲಸ ಮಾಡುತ್ತೇನೆ ಎಂದು ನಿರ್ಧರಿಸಿದೆ ಎಂದಿದ್ದಾರೆ.**

# ಲೋಕಸಭಾ ಚುನಾವಣೆಯಲ್ಲಿ 'ಕೈ' ಹಿಡಿಯದ ಮತದಾರ


## ಕಾಂಗ್ರೆಸ್‌ನ ಸ್ಥಳೀಯ ನಾಯಕರು ವಿಧಾನಸಭೆ ಚುನಾವಣೆ ವೇಳೆ ತೋರಿದ್ದ ಅತ್ಯುತ್ಸಾಹವನ್ನು ಲೋಕ ಚುನಾವಣೆಯಲ್ಲಿ ತೋರಿಲ್ಲ

• ಉದಯವಾಹಿನಿ ಸಾಗರ

ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ 'ಕೈ' ಹಿಡಿದಿದ್ದ ಸಾಗರ ಕ್ಷೇತ್ರದ ಮತದಾರರು ಲೋಕಸಭಾ ಚುನಾವಣೆ ವೇಳೆಗೆ ತಮ್ಮ ನಿಲುವು ಬದಲಿಸಿ, ಕಮಲದತ್ತ ವಾಲಿದ್ದಾರೆ. ವರ್ಷದ ಹಿಂದೆ ನಡೆದಿದ್ದ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೋಪಾಲಕೃಷ್ಣ ಬೇಳೂರು ಅವರಿಗೆ 88,988 ಮತಗಳು ದೊರೆತಿದ್ದವು.

ಕ್ಷೇತ್ರದಲ್ಲಿ 16,022 ಮತಗಳ ಅಂತರದಿಂದ ಕಾಂಗ್ರೆಸ್ ಗೆದ್ದು ಬೀಗಿತ್ತು. ಆದರೆ ಲೋಕಸಭೆ ಚುನಾವಣೆಯಲ್ಲಿ ಸಾಗರ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿಗೆ 95,209 ಮತಗಳು ಲಭಿಸಿವೆ. ಕಾಂಗ್ರೆಸ್ ಅಭ್ಯರ್ಥಿಗಿಂತಲೂ 26,519 ಹೆಚ್ಚುವರಿ ಮತಗಳನ್ನು ಬಿಜೆಪಿ ಅಭ್ಯರ್ಥಿ ಪಡೆದಿದ್ದಾರೆ. ಕಾಂಗ್ರೆಸ್‌ನ ಸ್ಥಳೀಯ ನಾಯಕರು ವಿಧಾನಸಭೆ ಚುನಾವಣೆ ವೇಳೆ ತೋರಿದ್ದ ಅತ್ಯುತ್ಸಾಹವನ್ನು ಲೋಕಸಭೆ ಚುನಾವಣೆಯಲ್ಲಿ ತೋರಿಲ್ಲ ಎಂಬುದು ಇದರಿಂದ ಸ್ಪಷ್ಟವಾಗುತ್ತದೆ.

ಈಡಿಗ, ಮುಸ್ಲಿಂ ಸಮುದಾಯದ ಮತದಾರರು ಕಾಂಗ್ರೆಸ್ ಕೈ ಹಿಡಿದರೂ ಗಣನೀಯ ಪ್ರಮಾಣದಲ್ಲಿ ಇರುವ ಇತರ ಹಿಂದುಳಿದ ವರ್ಗದವರ ಮತಗಳನ್ನು ಸೆಳೆಯುವಲ್ಲಿ ಕಾಂಗ್ರೆಸ್ ವಿಫಲವಾಗಿದೆ ಎಂಬ ಮಾತು ಪಕ್ಷದ ವಲಯದಲ್ಲಿ ಕೇಳಿ ಬರುತ್ತಿದೆ.





ಉದಯವಾಹಿನಿ ಚಿತ್ರ

> ಕಳೆದ ಒಂದು ವರ್ಷದಿಂದ ಸಾಗರ ಕ್ಷೇತ್ರದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕುಸಿದಿದೆ. ಅನೇಕರ ಮೇಲೆ ಸುಳ್ಳು ಕೇಸು ದಾಖಲಾಗುತ್ತಿದೆ. ಶಾಸಕರ ಆಡಳಿತ ವೈಫಲ್ಯ ಎದ್ದು ಕಾಣುತ್ತಿದೆ. ಈ ಎಲ್ಲಾ ಕಾರಣಕ್ಕೆ ಬಿಜೆಪಿಗೆ ದೊಡ್ಡ ಪ್ರಮಾಣದ ಮುನ್ನಡೆ ದೊರಕಿದೆ.
> -ಎಚ್.ಹಾಲಪ್ಪ ಹರತಾಳು, ಮಾಜಿ ಶಾಸಕ

> ಕರಾವಳಿ ಮಲೆನಾಡು ಭಾಗದಲ್ಲಿ ಮೋದಿ ವರ್ಚಸ್ಸು ಕೆಲಸ ಮಾಡಿದೆ. ಶಿವಮೊಗ್ಗ ಕ್ಷೇತ್ರದಲ್ಲೂ ಮೋದಿ ಹೆಸರಿನಲ್ಲೇ ಮತ ಕೇಳಿದ್ದಾರೆ. ಸ್ಥಳೀಯ ಬಿಜೆಪಿ ಮುಖಂಡರ ವರ್ಚಸ್ಸಿನಿಂದ ಆ ಪಕ್ಷಕ್ಕೆ ಮುನ್ನಡೆ ಲಭಿಸಿಲ್ಲ. ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷ ಮತ್ತೆ ಪುಟಿದೇಳಲಿದೆ.
> -ಗೋಪಾಲಕೃಷ್ಣ ಬೇಳೂರು, ಶಾಸಕ

ನಮ್ಮ ಅಭ್ಯರ್ಥಿ ರಾಜಕೀಯ ಚಟುವಟಿಕೆಗಳಿಂದ ದೂರವೇ ಉಳಿದವರು. ಹೀಗಾಗಿ ಕಾರ್ಯಕರ್ತರ ನಡುವೆ ಸಮನ್ವಯತೆ ಮೂಡಿಸುವಲ್ಲಿ ನಮ್ಮ ಪಕ್ಷ ಯಶಸ್ಸು ಕಂಡಿಲ್ಲ' ಎನ್ನುತ್ತಾರೆ ಹಿರಿಯ ಕಾಂಗ್ರೆಸ್ ಮುಖಂಡ ಬಿ.ಆರ್.ಜಯಂತ್. ಒಂದು ವರ್ಷದ ಅವಧಿಯಲ್ಲಿ ಶಾಸಕ ಗೋಪಾಲಕೃಷ್ಣ ಬೇಳೂರು ಕ್ಷೇತ್ರಕ್ಕೆ ಯಾವುದೇ ಅನುದಾನ ತಂದಿಲ್ಲ. ಇಲ್ಲಿ ಯಾವ ಅಭಿವೃದ್ಧಿ ಕಾಮಗಾರಿಯೂ ನಡೆದಿಲ್ಲ. ಅವರ ಆಡಳಿತ ವೈಫಲ್ಯದಿಂದಾಗಿ ಬಿಜೆಪಿಗೆ ಮುನ್ನಡೆ ಲಭಿಸಿದೆ' ಎನ್ನುತ್ತಾರೆ ಮಾಜಿ ಸಚಿವ ಎಚ್. ಹಾಲಪ್ಪ ಹರತಾಳು.

ಕಳೆದ ವಿಧಾನಸಭೆ ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಜಿಲ್ಲಾ ಘಟಕದ ಮಾಜಿ ಅಧ್ಯಕ್ಷ ತೀ.ನ. ಶ್ರೀನಿವಾಸ್, ಕಾಂಗ್ರೆಸ್ ತೊರೆದು ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದರು. ಅದೇ ಹೊತ್ತಿಗೆ ಕಾಂಗ್ರೆಸ್ ಪಕ್ಷ ಗೋಪಾಲಕೃಷ್ಣ ಬೇಳೂರು ಅವರಿಗೆ ಟಿಕೆಟ್ ನೀಡಿದ್ದನ್ನು ಖಂಡಿಸಿ ಹಿರಿಯ ಮುಖಂಡ ಕಾಗೋಡು ತಿಮ್ಮಪ್ಪ ಅವರ ಪುತ್ರಿ ಡಾ.ರಾಜನಂದಿನಿ ಕಾಗೋಡು, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ರತ್ನಾಕರ ಹೊನಗೋಡು ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದ್ದರು.

ಲೋಕಸಭೆ ಚುನಾವಣೆ ಹೊತ್ತಿಗೆ ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಹಕ್ರೆ, ಕೂಡ ಬಿಜೆಪಿಗೆ ಸೇರ್ಪಡೆಯಾಗಿದ್ದರು. ಹೀಗೆ ಸ್ಥಳೀಯ ಮುಖಂಡರು ಒಬ್ಬರ ಹಿಂದೆ ಒಬ್ಬರು ಪಕ್ಷ ತೊರೆದಿದ್ದು ಕಾಂಗ್ರೆಸ್ ಹಿನ್ನಡೆಗೆ ಕಾರಣವಾಗಿದೆ ಎಂದು ಹೇಳಲಾಗಿದೆ.

ವಿಧಾನಸಭೆ ಚುನಾವಣೆಯಲ್ಲಿ ಸೋಲು ಅನುಭವಿಸಿದ ನಂತರ ಇಲ್ಲಿನ ಬಿಜೆಪಿ ಪಾಳಯದ ಮೇಲೆ ನಿರಾಶೆಯ ಕಾರ್ಮೋಡ ಆವರಿಸಿತ್ತು. ಲೋಕಸಭೆ ಚುನಾವಣೆಯಲ್ಲಿ ಕ್ಷೇತ್ರದಲ್ಲಿ ದೊರಕಿರುವ ಮುನ್ನಡೆ ಬರಲಿರುವ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆಗೆ ಕೂಡ ನೆರವಾಗಲಿದೆ ಎಂಬ ಭರವಸೆ ಬಿಜೆಪಿ ಮುಖಂಡರಲ್ಲಿ ಮನೆಮಾಡಿದೆ.

### ಫಲಿತಾಂಶದಿಂದ ವಿಚಲಿತರಾಗಬೇಕಿಲ್ಲ

ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆ ಸಂದರ್ಭದಲ್ಲಿ ಎದುರಾಗುವ ವಿಷಯಗಳೇ ಬೇರೆ, ಲೋಕಸಭೆ ಚುನಾವಣೆಯಲ್ಲಿ ಪರಿಗಣನೆಗೆ ಬರುವ ಅಂಶಗಳೇ ಬೇರೆ. ಹೀಗಾಗಿ ಈಗಿನ ಫಲಿತಾಂಶದಿಂದ ವಿಚಲಿತರಾಗಬೇಕಿಲ್ಲ ಎಂಬ ಅಭಿಪ್ರಾಯ ಕಾಂಗ್ರೆಸ್ ಮುಖಂಡರದ್ದು.

**ಚುನಾವಣೆ ವೇಳೆಗೆ ನಿಲುವು ಬದಲು**



## ಮಿನಿ ನ್ಯೂಸ್

### ರಾಷ್ಟ್ರೀಯ ಹೆದ್ದಾರಿಯಲ್ಲಿಯೇ ನಿಲ್ಲುತ್ತಿರುವ ಸರ್ಕಾರಿ ಬಸ್‌ಗಳು



ಉದಯವಾಹಿನಿ ಚಿತ್ರ

• ಉದಯವಾಹಿನಿ ಹಿರಿಯೂರು

ರಾಷ್ಟ್ರೀಯ ಹೆದ್ದಾರಿ 4ರಲ್ಲಿರುವ ತಾಲ್ಲೂಕಿನ ಜವನಗೊಂಡನಹಳ್ಳಿಯಲ್ಲಿ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳು ಸೇವಾ ರಸ್ತೆಗೆ ಬರದೇ ಹೆದ್ದಾರಿಯಲ್ಲಿಯೇ ನಿಂತು ಪ್ರಯಾಣಿಕರನ್ನು ಹತ್ತಿಸಿ–ಇಳಿಸುತ್ತಿರುವ ಕಾರಣ ಪ್ರಯಾಣಿಕರಿಗೆ ಸುರಕ್ಷತೆಯ ಭಯ ಕಾಡುತ್ತಿದೆ. ಮೇ 23 ರಂದು ಹೆದ್ದಾರಿಯಲ್ಲಿ ಸರಣಿ ಅಪಘಾತವೊಂದು ಸಂಭವಿಸಿ ವ್ಯಕ್ತಿಯೊಬ್ಬರು ಮೃತಪಟ್ಟಿದ್ದರಿಂದ ಎಚ್ಚೆತ್ತ ಪೊಲೀಸ್ ಇಲಾಖೆ, ಹೆದ್ದಾರಿಗೆ ಇಳಿಯದಂತೆ ರಸ್ತೆ ಅಂಚಿನಲ್ಲಿ ಎತ್ತರದ ಗೋಡೆ ನಿರ್ಮಿಸಿ, ರಸ್ತೆಯಿಂದ ರಸ್ತೆಗೆ ದಾಟುವುದನ್ನು ತಪ್ಪಿಸಲು ವಿಭಜಕದ ಮೇಲೆ ತಂತಿ ಬೇಲಿ ಅಳವಡಿಸಿದ್ದರು. ರಾಜ್ಯ ರಸ್ತೆ ಸಾರಿಗೆ ನಿಗಮದ ಅಧಿಕಾರಿಗಳ ಜೊತೆ ಚರ್ಚಿಸಿ ಹೆದ್ದಾರಿಯಲ್ಲಿ ಸಾಗುವ ಎಲ್ಲಾ ಬಸ್‌ಗಳು ಸೇವಾ ರಸ್ತೆಯ ಮೂಲಕ ಸಂಚರಿಸುವಂತೆ ಕ್ರಮ ಕೈಗೊಂಡಿದ್ದರು. ಆದರೆ ಒಂದೆರಡು ದಿನ ಸೇವಾ ರಸ್ತೆಯಲ್ಲಿ ಸಂಚರಿಸಿದ ಬಸ್‌ಗಳು ಮತ್ತೆ ಹಳೆಯ ಚಾಳಿ ಮುಂದುವರಿಸಿವೆ ಎಂದು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಖಾಲಿದ್ ಹುಸೇನ್ ಆರೋಪಿಸಿದ್ದಾರೆ.

### ಪಾನಿಪುರಿ ಸೇವಿಸಿ ವಿದ್ಯಾರ್ಥಿನಿಯರು ಅಸ್ವಸ್ಥ

• ಉದಯವಾಹಿನಿ ರಾಯಚೂರು



ಇಲ್ಲಿಯ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ 20 ವಿದ್ಯಾರ್ಥಿನಿಯರು ಪಾನಿಪುರಿ ಸೇವಿಸಿ ಅಸ್ವಸ್ಥಗೊಂಡಿದ್ದಾರೆ. ಬುಧವಾರ ಸಂಜೆ ವಿಶ್ವವಿದ್ಯಾಲಯದ ಮುಂಭಾಗದ ರಸ್ತೆ ಬದಿಯಲ್ಲಿ ಮಾರಾಟ ಮಾಡುತ್ತಿದ್ದ ವ್ಯಕ್ತಿಯಿಂದ 20 ವಿದ್ಯಾರ್ಥಿನಿಯರು ಪಾನಿಪುರಿ, ಕೆಲವರು ಆಮ್ಲೆಟ್ ಸೇವಿಸಿದ್ದರು. ರಾತ್ರಿ ವಾಂತಿ–ಬೇಧಿ ಕಾಣಿಸಿಕೊಂಡು ಅಸ್ವಸ್ಥರಾಗಿದ್ದು, ತಕ್ಷಣ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದಾರೆ. 18 ವಿದ್ಯಾರ್ಥಿಗಳು ಚಿಕಿತ್ಸೆ ಪಡೆದು ಗುಣಮುಖರಾಗಿದ್ದಾರೆ. ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಇಬ್ಬರ ವಿದ್ಯಾರ್ಥಿಗಳ ಆರೋಗ್ಯವೂ ಸುಧಾರಿಸಿದೆ. ಪಾನಿಪುರಿ, ಆಮ್ಲೆಟ್ ಸೇವಿಸಿದ ಕೆಲ ವಿದ್ಯಾರ್ಥಿಗಳ ಹೊಟ್ಟೆ ತೊಳೆಸಿದಂತಾಗಿದೆ. ಎಲ್ಲರೂ ಚಿಕಿತ್ಸೆ ಪಡೆದುಕೊಂಡಿದ್ದು, ಆರೋಗ್ಯವಾಗಿದ್ದಾರೆ' ಎಂದು ವಿಶ್ವವಿದ್ಯಾಲಯದ ಕುಲಪತಿ ವೀರನಗೌಡ ತಿಳಿಸಿದ್ದಾರೆ.

### ಬ್ರಿಜ್ ಲೋಕದಲ್ಲಿ ಗುರುವಿನ 'ಪರಿಮಳ'

• ಉದಯವಾಹಿನಿ ಮಂಗಳೂರು




ಕಳೆದ ತಿಂಗಳ ಕೊನೆಯ ವಾರದಲ್ಲಿ ಮಹಾರಾಷ್ಟ್ರದ ನಾಸಿಕ್‌ನಲ್ಲಿ ನಡೆದ ಜೂನಿಯರ್ ಮತ್ತು ಸಬ್ ಜೂನಿಯರ್ ಬ್ರಿಜ್ ಚಾಂಪಿಯನ್‌ಷಿಪ್‌ನ ಒಟ್ಟು 17 ಬಹುಮಾನಗಳು ಒಬ್ಬರೇ ಕೋಚ್ ಬಳಿ ತರಬೇತಿ ಪಡೆದವರಿಗೆ ಲಭಿಸಿದವು. ಭಾರತದಲ್ಲಿ ಬ್ರಿಜ್ ಕ್ರೀಡೆಯನ್ನು ಬೆಳೆಸಲು ಪ್ರಯತ್ನಿಸುತ್ತಿರುವ ಕೆಲವೇ ಕೆಲವು ಮಂದಿಯಲ್ಲಿ ಒಬ್ಬರಾಗಿರುವ ಆ ಕೋಚ್ ಈಗ ಮಂಗಳೂರಿನಲ್ಲಿದ್ದಾರೆ.

ಗುಜರಾತ್‌ನ ಅಹಮದಾಬಾದ್ ನಗರದ ಪರಿಮಳ್ ವಹಾಲಿಯ, ಇಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಬ್ರಿಜ್ ಚಾಂಪಿಯನ್‌ಷಿಪ್‌ನಲ್ಲಿ ಪಾಲ್ಗೊಳ್ಳಲು ಶಿಷ್ಯರೊಂದಿಗೆ ಬಂದಿದ್ದಾರೆ. ವಿವಿಧ ವಿಭಾಗಗಳಲ್ಲಿ ಪಾಲ್ಗೊಳ್ಳುತ್ತಿರುವ ಶಿಷ್ಯರನ್ನು ಹುರಿದುಂಬಿಸುತ್ತಿರುವ ಅವರು 7ರಂದು ಆರಂಭವಾಗಲಿರುವ ಮಿಶ್ರ ವಿಭಾಗದಲ್ಲಿ ಶಿಷ್ಯೆಯ ಜೊತೆಯಲ್ಲೇ ಸ್ಪರ್ಧೆಗೂ ಇಳಿಯಲಿದ್ದಾರೆ.

ಬ್ರಿಜ್ ಗುರು' ಎಂದೇ ಕರೆಸಿಕೊಂಡಿರುವ ಪರಿಮಳ್ ವಹಾಲಿಯ, ವಿವಿಧ ಕಾರಣಗಳಿಂದ ದೇಶದಲ್ಲಿ ಬ್ರಿಜ್ ಆಟಗಾರರ ಸಂಖ್ಯೆ ಕುಸಿಯುತ್ತಿರುವುದರ ಬಗ್ಗೆ ಬೇಸರ ವ್ಯಕ್ತಪಡಿಸಿದರು. ಬುಧವಾರ ಮಾತನಾಡಿದ ಅವರು ವಯಸ್ಸಾಗಿ ಅಥವಾ ಅನಾರೋಗ್ಯ ಕಾಡಿ ಒಂದು ತಲೆಮಾರಿನ ಬ್ರಿಜ್ ಪಟುಗಳು ದೂರ ಆಗುತ್ತಿದ್ದಾರೆ. ಆ ಜಾಗ ತುಂಬಲು ಹೊಸತಲೆಮಾರಿನವರು ಬರುತ್ತಿಲ್ಲ. ಆದ್ದರಿಂದ ಭಾರತದಲ್ಲಿ ಈ ಕ್ರೀಡೆಯನ್ನು ಮುನ್ನಡೆಸುವುದು ಸವಾಲಿನ ಕೆಲಸವಾಗಿದೆ ಎಂದು ಹೇಳಿದರು.

### ಬಾವಿಗೆ ಬಿದ್ದ ಜಿಂಕೆಯ ರಕ್ಷಣೆ

• ಉದಯವಾಹಿನಿ ಉಡುಪಿ




ಉದಯವಾಹಿನಿ ಚಿತ್ರ

ದಾರಿ ತಪ್ಪಿ ಬಂದ ಜಿಂಕೆಯೊಂದು ಆಯತಪ್ಪಿ ಬಾವಿಗೆ ಬಿದ್ದ ಘಟನೆ ಕುಂದಾಪುರ ತಾಲ್ಲೂಕಿನ ಕೆದೂರು ಗ್ರಾಮದಲ್ಲಿ ನಡೆದಿದೆ. ಅರಣ್ಯದಿಂದ ನೀರಿಗಾಗಿ ಹುಡುಕಾಟ ನಡೆಸುತ್ತಾ ಬಂದಿದ್ದ ಜಿಂಕೆ ಆವರಣವಿಲ್ಲದ 25 ಅಡಿ ಆಳದ ಬಾವಿಗೆ ಬಿದ್ದಿದೆ. ಜಿಂಕೆಯ ಚೀರಾಟ ಗಮನಿಸಿದ ಗ್ರಾಮಸ್ಥರು ಅರಣ್ಯ ಇಲಾಖೆ ಸಿಬ್ಬಂದಿಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಸ್ಥಳಕ್ಕಾಗಮಿಸಿದ ಅರಣ್ಯ ಇಲಾಖೆ ಸಿಬ್ಬಂದಿ ಬಲೆಯ ಸಹಾಯದಿಂದ ಜಿಂಕೆಯನ್ನು ಮೇಲಕ್ಕೆತ್ತಿ ಕಾಡಿಗೆ ಬಿಟ್ಟಿದ್ದಾರೆ. ಬಾವಿಯಲ್ಲಿ ನೀರಿನ ಪ್ರಮಾಣ ಕಡಿಮೆಯಿದ್ದ ಕಾರಣ ಜಿಂಕೆ ಪ್ರಾಣಾಪಾಯದಿಂದ ಪಾರಾಗಿದೆ.

### ಬಹುರಾಷ್ಟ್ರೀಯ ಕಂಪನಿ ಉದ್ಯೋಗಿ ಸಾವು

• ಉದಯವಾಹಿನಿ ಕಾರವಾರ



ಕರ್ನಾಟಕದಿಂದ ಉತ್ತರಾಖಂಡಕ್ಕೆ ಚಾರಣಕ್ಕೆಂದು 18 ಮಂದಿ ತೆರಳಿದ್ದರು. ಆದ್ರೇ ಹವಾಮಾನ ವೈಪರಿತ್ಯದಿಂದ ಹಿಮಪಾತ ಉಂಟಾದ ಪರಿಣಾಮ, 9 ಮಂದಿ ಸಾವನ್ನಪ್ಪಿದ್ದಾರೆ. ಇವರಲ್ಲಿ ಬೆಂಗಳೂರಿನ ಪ್ರಸಿದ್ಧ ಬಹುರಾಷ್ಟ್ರೀಯ ಕಂಪನಿಯಲ್ಲಿ ಉದ್ಯೋಗಿಯಾಗಿದ್ದ ಯುವತಿ ಕೂಡ ಸೇರಿದ್ದಾರೆ. ಉತ್ತರಾಖಂಡಕ್ಕೆ ಶಿರಸಿ ತಾಲ್ಲೂಕಿನ ಜಾಗನಹಳ್ಳಿಯ ಯುವತಿ ಪದ್ಮಿನಿ ಚಾರಣಕ್ಕೆಂದು ತೆರಳಿದ್ದರು. ಬೆಂಗಳೂರಿನಿಂದ ತೆರಳಿದ್ದಂತ 18 ಮಂದಿಯಲ್ಲಿ ಇವರು ಒಬ್ಬರಾಗಿದ್ದರು. ಪದ್ಮಿನಿ ಬೆಂಗಳೂರು ನಿವಾಸಿಯಾಗಿದ್ದರು. ಬಹುರಾಷ್ಟ್ರೀಯ ಕಂಪನಿ ಗೂಗಲ್ ನಲ್ಲಿ ಕೆಲಸ ಮಾಡುತ್ತಿದ್ದಂತ ಪದ್ಮಿನಿ (35), ಉತ್ತರಾಖಂಡದಲ್ಲಿ ನಡೆದಂತ ಹಿಮಪಾತದಲ್ಲಿ ಸಾವನ್ನಪ್ಪಿದ್ದಾರೆ. ಅಂದಹಾಗೇ ಕೆಲ ವರ್ಷಗಳಿಂದ ಚಾರಣದಲ್ಲಿ ಆಸಕ್ತಿ ಹೊಂದಿದ್ದಂತ ಪದ್ಮಿನಿ, ಮೇ.29ರಿಂದ ಜೂನ್ .7ರವರೆಗೆ ಭಟವಾಡಿ ಮಲ್ಲಾ–ಸಿಲ್ಲಾ ಕುಶಕಲ್ಯಾಣ ಸಹಸ್ರಾತಾಲ್ ಟ್ರೆಕ್ಕಿಂಗ್ ಗೆ ಅನುಮತಿ ಪಡೆದ ತಡದೊಂದಿಗೆ ತೆರಳಿದ್ದರು.

## ಉದ್ಯಾನದಲ್ಲಿ ಕಿಡಿಗೇಡಿಗಳ ಉಪಟಳ, ಬೇಸತ್ತ ನಾಗರಿಕರು

• ಉದಯವಾಹಿನಿ ಲಿಂಗಸುಗೂರು

ಪಟ್ಟಣದ ಸಾರ್ವಜನಿಕ ಉದ್ಯಾನ ಕಿಡಿಗೇಡಿಗಳ ತಾಣವಾಗಿ ಪರಿವರ್ತನೆಗೊಳ್ಳುತ್ತಿದೆ. ಕಿಡಿಗೇಡಿಗಳ ಉಪಟಳದಿಂದ ಬೇಸತ್ತ ನಾಗರಿಕರು ಹಿಡಿಶಾಪ ಹಾಕುತ್ತಿದ್ದಾರೆ. ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ 6.43 ಕೋಟಿ ಅನುದಾನದಡಿ ಉದ್ಯಾನ ನಿರ್ಮಿಸಲಾಗಿತ್ತು.

ಇದು ಕಲ್ಯಾಣ ಕರ್ನಾಟಕ ಭಾಗದ ಹೈಟೆಕ್ ಉದ್ಯಾನ ಎಂಬ ಕೀರ್ತಿ ಪಡೆದಿದೆ. ಕೆರೆಗುಂಟ ಗ್ರಿಲ್ ಅಳವಡಿಕೆ, 960 ಮೀಟರ್ ಉದ್ದನೆಯ ಪಾದಚಾರಿ ಮಾರ್ಗ, ಲೈಟಿಂಗ್, ವೈವಿಧ್ಯಮಯ ಹೂ, ಬಳ್ಳಿ, ಗಿಡ–ಮರಗಳು, ಹಚ್ಚ ಹಸಿರಿನ ಲಾನ್ ಉದ್ಯಾನದ ಸೌಂದರ್ಯಕ್ಕೆ ಮೆರುಗು ನೀಡುವಂತಿವೆ. 2023ರಲ್ಲಿ ಲೋಕಾರ್ಪಣೆಗೊಂಡ ಉದ್ಯಾನ, ಮೇಲುಸ್ತುವಾರಿ ಮತ್ತು ನಿರ್ವಹಣೆ ಕೊರತೆ ಕಾರಣಕ್ಕೆ ಹಾಳಾಗುತ್ತಿದೆ. ಅಲ್ಲಲ್ಲಿ ಗಿಡ–ಬಳ್ಳಿಗಳು ಒಣಗುತ್ತಿವೆ. ಕೆರೆ ದಂಡೆಯಲ್ಲಿ ಮುಳ್ಳು–ಕಂಟಿ ಬೆಳೆದು ವಾಯುವಿಹಾರಕ್ಕೆ ಅಡ್ಡಿಯಾಗಿವೆ. ಈ ಮಧ್ಯೆ ಕೆಲ ಯುವಕರು ಬೈಸಿಕಲ್, ಬೈಕ್, ಕುದುರೆ ಓಡಿಸುವುದು, ಎಲ್ಲೆಂದರಲ್ಲಿ ಮದ್ಯಪಾನ ಮಾಡಲು ಕುಳಿತುಕೊಂಡು ಅಸಡ್ಡೆ ಪ್ರದರ್ಶನ ಮಾಡುತ್ತಿದ್ದಾರೆ. ಸಮಸ್ಯೆ ಕುರಿತು ಪುರಸಭೆ, ಪೊಲೀಸ್, ಕಂದಾಯ ಇಲಾಖೆ ಅಧಿಕಾರಿಗಳ ಗಮನ ಸೆಳೆದರು ಪ್ರಯೋಜನವಾಗಿಲ್ಲ ಎಂಬುದು ಸಾಮೂಹಿಕ ಆರೋಪ.



ಉದಯವಾಹಿನಿ ಚಿತ್ರ

**ಉದ್ಯಾನ ಕಿಡಿಗೇಡಿಗಳ ತಾಣ**

ಕೋಟ್ಯಂತರ ಹಣ ಖರ್ಚು ಮಾಡಿ ಹೈಟೆಕ್ ಮಾದರಿ ಉದ್ಯಾನ ನಿರ್ಮಿಸಲಾಗಿದೆ. ಕಣ್ಮನ ಸೆಳೆಯುವ ಉದ್ಯಾನ ಸಂರಕ್ಷಣೆ ಮತ್ತು ನಿರ್ವಹಣೆ ಮಾಡುವಲ್ಲಿ ತಾಲ್ಲೂಕು ಆಡಳಿತ ನಿರ್ಲಿಪ್ತ ಧೋರಣೆ ಅನುಸರಿಸುತ್ತಿದೆ.

ಕಿಡಿಗೇಡಿಗಳ ಉಪಟಳ, ಅಟ್ಟಹಾಸಕ್ಕೆ ಬೇಸತ್ತ ಬಹುತೇಕರು ಉದ್ಯಾನದತ್ತ ಸುಳಿಯುತ್ತಿಲ್ಲ. ಈ ನಿಟ್ಟಿನಲ್ಲಿ ತಾಲ್ಲೂಕು ಆಡಳಿತ ಮುತುವರ್ಜಿ ವಹಿಸಬೇಕು' ಎಂದು ಸಮಾಜ ಸೇವಕ ಚೆನ್ನಬಸವ ವಿಠಲಾಪುರ ಮನವಿ ಮಾಡಿದ್ದಾರೆ.

## ಬಿತ್ತನೆ ಬೀಜ ಕಂಪನಿಗಳಿಗೆ ಕೋಟಿಗಟ್ಟಲೆ ಹಣ ವಂಚಿಸಿ ಪರಾರಿ

• ಉದಯವಾಹಿನಿ ಜಗಳೂರು

ಪಟ್ಟಣದಲ್ಲಿ ನಕಲಿ ಬಿತ್ತನೆ ಬೀಜ ಮಾರಾಟಗಾರನೊಬ್ಬ ಬೀಜ ಮಾರಾಟದ ನೆಪದಲ್ಲಿ 20ಕ್ಕೂ ಹೆಚ್ಚು ಕಂಪನಿಗಳಿಗೆ ಕೋಟ್ಯಂತರ ರೂಪಾಯಿ ವಂಚಿಸಿರುವ ಪ್ರಕರಣ ಬಯಲಿಗೆ ಬಂದಿದೆ.

ಪಟ್ಟಣದ ದಾವಣಗೆರೆ ರಸ್ತೆಯಲ್ಲಿ 'ಕಿಸಾನ್ ಆಗ್ರೋ' ಹೆಸರಿನಲ್ಲಿ ಬೀಜ ಮತ್ತು ಗೊಬ್ಬರ ವ್ಯಾಪಾರ ನಡೆಸುತ್ತಿದ್ದ ಹೊರ ರಾಜ್ಯ ಮೂಲದ ಕುಮಾರ್ ಗೌಡ ಎಂಬ ಹೆಸರಿನ ವ್ಯಕ್ತಿ ವಿವಿಧ ಬೀಜ ಕಂಪನಿಗಳ ವಿತರಕರಿಗೆ ಕೋಟಿಗಟ್ಟಲೆ ವಂಚನೆ ಮಾಡಿ ಪರಾರಿಯಾಗಿದ್ದಾನೆ.

ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಬೀಜ ಮಾರಾಟ ಮಾಡುವ ಉದ್ದೇಶದಿಂದ ಇಲ್ಲಿನ ಮರೇನಹಳ್ಳಿ ರಸ್ತೆಯ ಲೋಕೋಪಯೋಗಿ ಕಚೇರಿ ಎದುರಿನ ಹನುಮಂತಾಪುರ ಪಕೀರ್ ಸಾಬ್ ಎಂಬುವವರಿಗೆ ಸೇರಿದ ವಾಣಿಜ್ಯ ಕಟ್ಟಡವನ್ನು ಬಾಡಿಗೆ ಪಡೆದಿದ್ದನು.



ಉದಯವಾಹಿನಿ ಚಿತ್ರ

**ಕಿಸಾನ್ ಆಗ್ರೋ ಹೆಸರಿನಲ್ಲಿ ವಂಚನೆ**

ಪಯೊನಿಯರ್, ಕಾವೇರಿ, ರಾಶಿ, ಡಿಕೆಶಿ, ಅಡ್ವಾಂಟ, ಲಕ್ಷ್ಮೀ ಸೀಡ್ಸ್, ವಿ.ಎನ್.ಆರ್, ಮುಂತಾದ 20ಕ್ಕೂ ಹೆಚ್ಚು ಕಂಪನಿಗಳ ಬಿತ್ತನೆ ಬೀಜ ಮತ್ತು ಕೀಟನಾಶಕಗಳನ್ನು ರೈತರಿಗೆ ಮಾರಾಟ ಮಾಡಿದ್ದು, ಆ ಹಣವನ್ನು ಬೀಜ ಪೂರೈಕೆ ಮಾಡಿದ್ದ ಕಂಪನಿಗಳಿಗೆ ಕೊಡದೆ ರಾತ್ರೋರಾತ್ರಿ ಪಟ್ಟಣದಿಂದ ಪರಾರಿಯಾಗಿದ್ದು, ಆತಂಕಗೊಂಡ ವಿತರಕರು, ಕಂಪನಿ ಉದ್ಯೋಗಿಗಳು ಪೊಲೀಸರ ಮೊರೆ ಹೋಗಿದ್ದಾರೆ.

'ನಾನು ಇಡೀ ಜಿಲ್ಲೆಗೆ 30 ವರ್ಷದಿಂದ ಬಾಯರ್, ಕಾವೇರಿ, ಪಯೊನಿಯರ್, ಮುಂತಾದ ಕಂಪನಿಗಳ ಈರುಳ್ಳಿ, ಮೆಕ್ಕೆಜೋಳ ಮತ್ತಿತರೆ ಬಿತ್ತನೆ ಬೀಜಗಳನ್ನು ಮಾರಾಟಗಾರರಿಗೆ ಬೀಜ ಪೂರೈಸುತ್ತಿದ್ದೇನೆ. ಜಗಳೂರಿನಲ್ಲಿ ಬೀಜ ಮಾರಾಟ ಮಾಡುವ ಕುಮಾರ್ ಗೌಡ ಎಂಬ ವ್ಯಕ್ತಿಗೆ 1.75 ಕೋಟಿ ಮೊತ್ತದ ಬಿತ್ತನೆ ಬೀಜ ಕೊಟ್ಟಿದ್ದೇನೆ. ನನಗೆ ಕೇವಲ 35 ಲಕ್ಷವನ್ನು ಕೊಟ್ಟಿದ್ದು, ಉಳಿದ ಹಣ ಕೊಡುತ್ತೇನೆ ಎಂದು ಭರವಸೆ ನೀಡಿದ್ದ.

> ಆದರೆ ಈಗ ಮೋಸ ಮಾಡಿ ಓಡಿ ಹೋಗಿದ್ದಾನೆ. ಅವನ ಮೂಲದ ಬಗ್ಗೆ ಹೆಚ್ಚು ತಿಳಿದಿಲ್ಲ. ನಕಲಿ ಆಧಾರದ ಕಾರ್ಡ್ ಕೊಟ್ಟು ನಮಗೆ ದಿಕ್ಕು ತಪ್ಪಿಸಿದ್ದಾನೆ. ನನಗೆ ಕನಿಷ್ಠ 1 ಕೋಟಿಗೂ ಹೆಚ್ಚು ವಂಚಿಸಿದ್ದಾನೆ
> -ಶಿವಮೂರ್ತಿ, ದಾವಣಗೆರೆ ಮೂಲದ ವಿತರಕ

## ಹದಗೆಟ್ಟ ರಸ್ತೆ ದುರಸ್ತಿಗೆ ಮುಂದಾದ ಗ್ರಾಮಸ್ಥರು

• ಉದಯವಾಹಿನಿ ಆನವಟ್ಟಿ

ಸಚಿವರಿಗೆ, ಶಾಸಕರು, ಸಂಸದರಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ ಹದಗೆಟ್ಟ ರಸ್ತೆ ದುರಸ್ತಿಯಾಗದ ಕಾರಣ ಸಮೀಪದ ವಿಠಲಾಪುರದ ಗ್ರಾಮಸ್ಥರೇ ದೇಣಿಗೆ ಸಂಗ್ರಹಿಸಿ ರಸ್ತೆ ಅಭಿವೃದ್ಧಿಗೆ ಮುಂದಾಗಿದ್ದಾರೆ. ಗ್ರಾಮದಿಂದ ಹಿರಿಯ ಪ್ರಾಥಮಿಕ, ಪ್ರೌಢಶಾಲೆ, ಪಿಯುಸಿ, ಪದವಿ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳು, ಉದ್ಯೋಗಕ್ಕೆ ಹೋಗುವವರು ಮತ್ತು ತೋಟ, ಗದ್ದೆಗೆ ಹೋಗುವ ಕೃಷಿಕರು ಇದೆ ರಸ್ತೆಯಲ್ಲಿ ಸಾಗಬೇಕು. ಒಂದೂವರೆ ಕಿ.ಮೀ ರಸ್ತೆ ಹಾಳಾಗಿ ಹಲವು ವರ್ಷಗಳೇ ಕಳೆದಿವೆ.

ಗ್ರಾಮದ ಒಳಗೆ ಬಸ್ ವ್ಯವಸ್ಥೆ ಇಲ್ಲ. ಸ್ವಂತ ವಾಹನವಿದ್ದರೂ ಮಳೆಗಾಲದಲ್ಲಿ ಹೊರಗೆ ಹೋಗಲು ಸಾಧ್ಯವಿಲ್ಲ. ನಡೆದುಕೊಂಡು ಹೋಗುವುದು ಅನಿವಾರ್ಯ. ಅದೂ ಕೆಸರಿನ ಮಜ್ಜನದೊಂದಿಗೆ. ಇದರಿಂದ ಗ್ರಾಮಸ್ಥರು ತಾವೇ ದುರಸ್ತಿ ಕೈಗೊಂಡಿದ್ದಾರೆ. 2 ಲಕ್ಷ ದೇಣಿಗೆ ಸಂಗ್ರಹಿಸಿ ಟ್ರ್ಯಾಕ್ಟರ್, ಜೆಸಿಬಿ ತರಿಸಿ ರಸ್ತೆಗೆ ಮಣ್ಣು ಹಾಕಿ ಅಭಿವೃದ್ಧಿ ಪಡಿಸಿದ್ದಾರೆ.



ಉದಯವಾಹಿನಿ ಚಿತ್ರ

> ಮಳೆಗಾಲ ಪ್ರಾರಂಭವಾಗಿದ್ದರಿಂದ ನಡೆದುಕೊಂಡು ಹೋಗಲು ಸಾಧ್ಯವಾಗುವಂತೆ ತಾತ್ಕಾಲಿಕವಾಗಿ ಮಣ್ಣು ಹಾಕಿ ರಸ್ತೆ ದುರಸ್ತಿ ಮಾಡುತ್ತಿದ್ದೇವೆ. ಲೋಕಸಭಾ ಚುನಾವಣೆ ಮುನ್ನ ಸಚಿವರು ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ಮಾಡಿದ್ದರು. ಶೀಘ್ರ ರಸ್ತೆ ದುರಸ್ತಿ ಕೈಗೊಳ್ಳಬೇಕು
> -ಶರತ್ ಎಂ. ಗೌಡರ್, ಗ್ರಾಮಸ್ಥ

ಜಡೆ ಮುಖ್ಯ ರಸ್ತೆಯಿಂದ ವಿಠಲಾಪುರ ಗ್ರಾಮಕ್ಕೆ ಹೋಗುವ ರಸ್ತೆ ಸಂಪೂರ್ಣ ಹಾಳಾಗಿದೆ. ಕಿರಿಯ ಪ್ರಾಥಮಿಕ ಶಾಲೆಗೆ ಶಿಕ್ಷಕರು ಮಳೆಗಾಲದಲ್ಲಿ ಬರಲು ಹರಸಹಾಸ ಪಡಬೇಕು. ಒಮ್ಮೆ ಕಾರು ತಂದು ರಸ್ತೆಯಲ್ಲಿ ಸಿಲುಕಿ, ವಾರದ ನಂತರ ತೆಗೆದುಕೊಂಡು ಹೋಗಿದ್ದಾರೆ. ಮೂಗೂರು ಏತ ನೀರಾವರಿಗಾಗಿ ರಸ್ತೆಯಲ್ಲೇ ಪೈಪ್‌ಲೈನ್‌ಗಾಗಿ ಕಾಲುವೆ ತೋಡಿ ಚೆನ್ನಾಗಿದ್ದ ರಸ್ತೆಯನ್ನು ಹಾಳು ಮಾಡಿದ್ದಾರೆ. ಅಂದಿನ ಶಾಸಕರಿಗೆ ಮನವಿ ಸಲ್ಲಿಸಿದರೆ ಭರವಸೆ ಕೊಟ್ಟರೇ ಹೊರತು ಕಾಮಗಾರಿ ಕೈಗೊಳ್ಳಲಿಲ್ಲ' ಎಂದು ಶಿವಾನಂದ ಗೌಡ ದೂರಿದರು.

ಮಳೆಗಾಲ ಪ್ರಾರಂಭವಾಗುತ್ತಲೇ ನಮಗೆ ಆಂತಕ ಶುರುವಾಗುತ್ತದೆ. ಮಳೆ ಬಿದ್ದ ತಕ್ಷಣ ರಸ್ತೆ ಕೆಸರುಗದ್ದೆಯಂತೆ ಆಗುತ್ತದೆ. ರಸ್ತೆಯಲ್ಲಿ ಶಾಲಾ ಮಕ್ಕಳು, ರೈತರು, ಓಡಾಡುವುದೇ ಕಷ್ಟ' ಎಂದು ಅವರು ಮಾತು ಸೇರಿಸಿದರು.

## ಕಲುಷಿತ ನೀರು ಪೂರೈಕೆ: ಸಾರ್ವಜನಿಕರ ಆತಂಕ

• ಉದಯವಾಹಿನಿ ಕವಿತಾಳ

ಪಟ್ಟಣದ ವಿವಿಧ ವಾರ್ಡ್‌ಗಳಿಗೆ ಕಲುಷಿತ ನೀರು ಪೂರೈಕೆ ಮಾಡಲಾಗುತ್ತಿದ್ದು, ಸಾಂಕ್ರಾಮಿಕ ರೋಗ ಭೀತಿ ಎದುರಾಗಿದೆ. ಇಲ್ಲಿನ 16 ವಾರ್ಡ್‌ಗಳಿಗೆ ಶುದ್ಧ ಕುಡಿಯುವ ನೀರು ಪೂರೈಸಲು ಸಮೀಪದ ಲಕ್ಷ್ಮೀ ನಾರಾಯಣ ಕ್ಯಾಂಪ್ ಹತ್ತಿರ ನಿರ್ಮಿಸಿದ ಕೆರೆಯಲ್ಲಿ ನೀರು ಸಂಪೂರ್ಣ ಖಾಲಿಯಾಗಿದ್ದು, ಪಕ್ಕದಲ್ಲಿನ ಹಳೆ ಕೆರೆಯಿಂದ ನೀರು ಪೂರೈಸಲಾಗುತ್ತಿದೆ ಎನ್ನಲಾಗಿದೆ. ಬುಧವಾರ ಕೆಲವು ವಾರ್ಡ್‌ಗಳಿಗೆ ಪೂರೈಸಿದ ನೀರು ಸಂಪೂರ್ಣ ಕೆಸರು ಮಯವಾಗಿದ್ದು, ಅದರಲ್ಲಿ ಕಸ, ಕಡ್ಡಿ ಸೇರಿದಂತೆ ಗಲೀಜು ಬಂದಿದೆ. ಹಸಿರು ಬಣ್ಣಕ್ಕೆ ತಿರುಗಿದ ನೀರು ದುರ್ವಾಸನೆ ಬೀರುತ್ತಿದ್ದು, ಬಳಕೆಗೂ ಯೋಗ್ಯವಾಗಿಲ್ಲ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದರು.

ಕೆರೆಯಲ್ಲಿ ನೀರಿನ ಪ್ರಮಾಣ ಕಡಿಮೆಯಾದ ಹಿನ್ನೆಲೆಯಲ್ಲಿ ಈಗಾಗಲೇ ಕಳೆದ ಒಂದು ತಿಂಗಳಿಂದ ಐದು ದಿನಗಳಿಗೊಮ್ಮೆ ನೀರು ಪೂರೈಕೆ ಮಾಡಲಾಗುತ್ತಿದೆ. ಸದ್ಯ ಕೆರೆಯಲ್ಲಿ ನೀರು ಸಂಪೂರ್ಣ ಖಾಲಿಯಾಗಿದ್ದು, ಕಲುಷಿತ ನೀರು ಪೂರೈಕೆ ಆತಂಕ ಉಂಟು ಮಾಡಿದೆ. ಕೆರೆಯಿಂದ ಪೂರೈಸುವ ನೀರನ್ನು ಕಾಯಿಸಿ, ಆರಿಸಿ ಕುಡಿಯುವುದು ಅಥವಾ ಶುದ್ಧೀಕರಣ ಘಟಕದ ನೀರು ಸೇವಿಸುವಂತೆ ಪಟ್ಟಣ ಪಂಚಾಯಿತಿ ವತಿಯಿಂದ ಸಾರ್ವಜನಿಕರಿಗೆ ಧ್ವನಿ ವರ್ಧಕದ ಮೂಲಕ ನಿತ್ಯ ಮಾಹಿತಿ ನೀಡಲಾಗುತ್ತಿದೆ.



ಉದಯವಾಹಿನಿ ಚಿತ್ರ

> ಕಲುಷಿತ ನೀರಿನಿಂದ ತೊಂದರೆ ಉಂಟಾಗುವ ಮೊದಲು ಅಧಿಕಾರಿಗಳು ಎಚ್ಚೆತ್ತುಕೊಳ್ಳಬೇಕು
> -ರಮೇಶ ನಗನೂರು, ಪಟ್ಟಣ ಪಂಚಾಯಿತಿ ಸದಸ್ಯ

ಕಾಲುವೆಗೆ ನೀರು ಹರಿಸಿದಾಗ ಕೆರೆಗೆ ನೀರು ಭರ್ತಿ ಮಾಡುವಲ್ಲಿ ಅಧಿಕಾರಿಗಳು ಆಸಕ್ತಿ ವಹಿಸಿ ಕೆಲಸ ಮಾಡಲಿಲ್ಲ. ಹೀಗಾಗಿ ನೀರಿನ ಕೊರತೆ ಉಂಟಾಗಿದೆ ಮತ್ತು ಕೊಳವೆಬಾವಿ ಕೆಟ್ಟು ಒಂದೂವರೆ ತಿಂಗಳು ಕಳೆದರೂ ಅದರ ದುರಸ್ತಿ ಬಗ್ಗೆ ಕಾಳಜಿ ವಹಿಸುತ್ತಿಲ್ಲ. ಹೀಗಾಗಿ ಪಟ್ಟಣದ ಜನತೆ ನೀರಿಗಾಗಿ ಪರದಾಡುವಂತಾಗಿದೆ.

## ಸಿಗಂದೂರು ಲಾಂಚ್ ವಾಹನ ಸಂಚಾರಕ್ಕೆ ನಿರ್ಬಂಧ

• ಉದಯವಾಹಿನಿ ಸಿಗಂದೂರು

ಮಳೆಯ ಕೊರತೆಯಿಂದ ಶರಾವತಿ ಹಿನ್ನೀರಿನಲ್ಲಿ ನೀರಿನ ಹರಿವು ಕಡಿಮೆಯಾಗಿದ್ದು, ಸಿಗಂದೂರು ಲಾಂಚ್‌ನಲ್ಲಿ ಬುಧವಾರದಿಂದ ವಾಹನ ಸಂಚಾರಕ್ಕೆ ನಿರ್ಬಂಧ ಹೇರಲಾಗಿದೆ.

ಶರಾವತಿ ಹಿನ್ನೀರಿನ ಮುಪ್ಪಾನೆ, ಹಸಿರುಮಕ್ಕಿ ಲಾಂಚ್ (ಕಡವು) ಸೇವೆಗಳು ಈಗಾಗಲೇ ಸ್ಥಗಿತಗೊಂಡಿದ್ದು, ಈಗ ಸಿಗಂದೂರು ಲಾಂಚ್ ಕೂಡ ಸ್ಥಗಿತಗೊಂಡಿರುವುದರಿಂದ ಈ ಭಾಗದ ಜನರು ತೊಂದರೆ ಎದುರಿಸುವಂತಾಗಿದೆ.

ಶರಾವತಿ ಕಣಿವೆ ಭಾಗದ 4 ಗ್ರಾಮ ಪಂಚಾಯಿತಿಗಳ ಸಂಪರ್ಕ ಕೊಂಡಿಯಾಗಿರುವ ಲಾಂಚ್ ಸೇವೆಯನ್ನು ಈ ಭಾಗದ ರೈತರು ಹಾಗೂ ವಿದ್ಯಾರ್ಥಿಗಳು ಹೆಚ್ಚಾಗಿ ಅವಲಂಬಿಸಿದ್ದಾರೆ.

ಜಿಲ್ಲಾ, ತಾಲ್ಲೂಕು ಕೇಂದ್ರವನ್ನು ಸಂಪರ್ಕಿಸಲೂ ಈ ಭಾಗದ ಜನರಿಗೆ ಇದೇ ಮಾರ್ಗ ಆಸರೆ. ಲಾಂಚ್ ಸ್ಥಗಿತಗೊಂಡರೆ ರೈತರು ಕೃಷಿ ಉತ್ಪನ್ನಗಳನ್ನು ಸಾಗಿಸಲು ಹೊಸನಗರ ತಾಲ್ಲೂಕಿನ ನಿಟ್ಟೂರು ಮೂಲಕ 90 ಕಿ.ಮೀ. ಸುತ್ತಿ ಸಾಗಬೇಕಾದ ಅನಿವಾರ್ಯತೆ ಇದೆ.



ಉದಯವಾಹಿನಿ ಚಿತ್ರ

ರಾಜ್ಯದ ವಿವಿಧ ಭಾಗಗಳಿಂದ ಬರುವ ಸಿಗಂದೂರು ಭಕ್ತರಿಗೂ ಇದರ ಬಿಸಿ ತಟ್ಟಲಿದೆ. ಬೇಸಿಗೆಯ ಪರಿಸ್ಥಿತಿ ಹೀಗೇ ಮುಂದುವರಿದರೆ ಗರಿಷ್ಠ 17 ದಿನ ಮಾತ್ರ ಲಾಂಚ್ ಕಾರ್ಯನಿರ್ವಹಿಸಲಿದೆ ಎಂದು ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ ಅಧಿಕಾರಿಯೊಬ್ಬರು ತಿಳಿಸಿದರು.

## ಧಾರಾಕಾರ ಮಳೆ ಮನೆಗಳಿಗೆ ನುಗ್ಗಿದ ನೀರು

• ಉದಯವಾಹಿನಿ ಬೈಲಹೊಂಗಲ

ಪಟ್ಟಣ ಹಾಗೂ ಸುತ್ತಮುತ್ತಲಿನ ಹಳ್ಳಿಗಳಲ್ಲಿ ಗುರುವಾರ ಧಾರಾಕಾರ ಮಳೆ ಸುರಿಯಿತು. ಬೆಳಿಗ್ಗೆಯಿಂದಲೇ ಮೋಡ ಕವಿದ ವಾತಾವರಣವಿತ್ತು. ಮಧ್ಯಾಹ್ನದ ಹೊತ್ತಿಗೆ ಬಿರುಸಿನ ಮಳೆ ಬಿದ್ದು, ಪಟ್ಟಣದ ತಗ್ಗು ಪ್ರದೇಶದ ಮನೆಗಳಿಗೆ ನೀರು ನುಗ್ಗಿತು. ಹೊಸೂರ ರಸ್ತೆಯ ವಿಜಯ ಸೋಸಿಯಲ್ ಕ್ಲಬ್, ಪೊಲೀಸ್ ಠಾಣೆ, ಬಸ್ ನಿಲ್ದಾಣ ಮುಖ್ಯ ರಸ್ತೆಗಳು ಮಳೆ ನೀರಿನಿಂದಾಗಿ ಕೆರೆಯಂತೆ ಕಂಡವು. ಕಾರ್, ಬೈಕ್ ಸವಾರರು ಸಂಚಾರಕ್ಕೆ ಪರದಾಡುವಂತಾಯಿತು.

ಈಟಿ ಬಸವೇಶ್ವರ ದೇವಸ್ಥಾನ ಹತ್ತಿರದ ಎಂ.ಜೆ. ಹೌಸಿಂಗ್ ಕಾಲೊನಿಯಲ್ಲು ಬಿರುಗಾಳಿ–ಮಳೆ ಬಂದಿತು. ಇಲ್ಲಿ ಡಾಂಬರ್ ಅಥವಾ ಸಿಮೆಂಟ್ ರಸ್ತೆಗಳು ಇಲ್ಲದ ಕಾರಣ ಇಡೀ ಕಾಲೊನಿ ಕೆಸರುಮಯವಾಯಿತು. ಇಂಚಲ ಕ್ರಾಸ್‌ನಲ್ಲಿ ಗಟಾರುಗಳು ತುಂಬಿ ಹರಿದಿದ್ದರಿಂದ ತಾಲ್ಲೂಕು ಕೇಂದ್ರ ಬಸ್ ನಿಲ್ದಾಣ, ರಾಯಣ್ಣ ವೃತ್ತದ ರಸ್ತೆಯಲ್ಲಿ ಭಾರಿ ಪ್ರಮಾಣದಲ್ಲಿ ಮಳೆ ನೀರು ತುಂಬಿ ಹರಿಯಿತು. ಬಜಾರ ರಸ್ತೆಯ ಗಣಾಚಾರಿ ಮಳಿಗೆ ಹಿಂಬದಿಯ ಗಟಾರಗಳು ತುಂಬಿ ತ್ಯಾಜ್ಯ ಸಮೇತ ಮುಖ್ಯ ರಸ್ತೆ ಮೇಲೆ ಹರಿಯಿತು. ಇದರಿಂದಾಗಿ ಬಜಾರ ರಸ್ತೆ ಕೆಲಕಾಲ ದುರ್ವಾಸನೆಯಿಂದ ಕೂಡಿತ್ತು. ಪುರಸಭೆ ಮುಖ್ಯಾಧಿಕಾರಿ ವೀರೇಶ ಹಸಬಿ, ಸಿಬ್ಬಂದಿ ಸ್ಥಳಕ್ಕೆ ತೆರಳಿ ಗಟಾರುಗಳ ದುರಸ್ತಿಗೆ ತುರ್ತು ಕ್ರಮ ವಹಿಸಿದರು. ಗಟಾರುಗಳಲ್ಲಿನ ತ್ಯಾಜ್ಯ ತೆರವುಗೊಳಿಸಿ ಮಳೆ ನೀರು ಹರಿದುಹೋಗಲು ಅನುವು ಮಾಡಿಕೊಟ್ಟರು. ಈ ವೇಳೆ ಬಜಾರ ರಸ್ತೆಯಲ್ಲಿ ತಾಸುಗಳವರೆಗೆ ಸಂಚಾರ ಸ್ಥಗಿತಗೊಂಡಿತು.



ಉದಯವಾಹಿನಿ ಚಿತ್ರ

### ಎಚ್ಚರಿಕೆ ಕ್ರಮ

ಪುರಸಭೆಯ ವಿವಿಧ ವಾರ್ಡುಗಳಲ್ಲಿ ಭೇಟಿ ನೀಡಿದ ಅಧಿಕಾರಿಗಳು, ಮಳೆ ನೀರು ನುಗ್ಗಿದ ಮನೆಗಳನ್ನು ಪರಿಶೀಲಿಸಿದರು. ಸಾರ್ವಜನಿಕರಿಗೆ ಮಳೆ ನೀರಿನಿಂದ ತೊಂದರೆ ಆಗದ ರೀತಿಯಲ್ಲಿ ಎಚ್ಚರಿಕೆ ಕ್ರಮವಹಿಸಲಾಗಿದೆ ಎಂದು ತಿಳಿಸಿದರು.

# ಪಾಳುಬಿದ್ದ ಇಂಡಿ ತಾಲ್ಲೂಕು ಆಸ್ಪತ್ರೆ ಉದ್ಯಾನವನ

## ಆರೋಗ್ಯ ಇಲಾಖೆ, ಪುರಸಭೆ , ಪುರಸಭೆ ಮುಖ್ಯಧಿಕಾರಿ ಈ ಬಗ್ಗೆ ಗಮನಹರಿಸದೆ ನಿರ್ಲಕ್ಷ್ಯ ತೋರುತ್ತಿದೆ ಎಂದು ಸ್ಥಳೀಯರ ಆರೋಪ

• ಶಿವರಾಜಕುಮಾರ ವಾಲಿಕಾರ

• ಉದಯವಾಹಿನಿ ಇಂಡಿ

ಇಂಡಿ ತಾಲ್ಲೂಕಾ ಆಸ್ಪತ್ರೆಗೆ ಬಂದವರಿಗೆ ಸುಂದರ ಪರಿಸರದಿಂದ ಮುದ ನೀಡಬೇಕಿದ್ದ ಪಾರ್ಕ್ ಹಾಳು ಕೊಂಪೆಯಂತಾಗಿದ್ದು, ಕಿರಿಕಿರಿ ಉಂಟುಮಾಡುತ್ತಿದೆ. ಇಂಡಿ ನಗರದ ತಾಲ್ಲೂಕಾಸ್ಪತ್ರೆ ಮುಂಭಾಗದಲ್ಲಿರುವ ಉದ್ಯಾನವನದಲ್ಲಿ ಆಸ್ಪತ್ರೆಗೆ ಬಂದ ಅನೇಕರು ಐದು ನಿಮಷ ನೆರಳಿಗೆ ಕೂರಲು ಸಹ ಸಾಧ್ಯವಾಗದ ದುಸ್ಥಿತಿ ನಿರ್ಮಾಣ ಆಗಿದೆ. ಅನೇಕ ರೋಗಿಗಳು ಬೆಡ್ ಸಿಗದಾಗ ಇದೇ ಸ್ಥಳದಲ್ಲಿ ಕಾಯುತ್ತಾರೆ. ರೋಗಿಗಳ ಸಂಬಂಧಿಕರು ಸಹ ಮೂಗು ಮುಚ್ಚಿಕೊಂಡು ಅನಿವಾರ್ಯವಾಗಿ ಇದೇ ಜಾಗದಲ್ಲಿ ಕಾಲ ಕಳೆಯುತ್ತಾರೆ. ಇಷ್ಟಿದ್ದರೂ ಸಹ ಆರೋಗ್ಯ ಇಲಾಖೆ,ಪುರಸಭೆ , ಪುರಸಭೆ ಮುಖ್ಯಧಿಕಾರಿ ಈ ಬಗ್ಗೆ ಗಮನಹರಿಸದೆ ನಿರ್ಲಕ್ಷ್ಯ ತೋರುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ

ಇನ್ನು ಅನೇಕ ರೋಗಿಗಳ ಸಂಬಂಧಿಕರು ಇದೇ ಸ್ಥಳದಲ್ಲಿ ಆಹಾರ ಸೇವಿಸಿ, ತಿಂದುಂಡಿದ್ದ ಕಸವನ್ನು ಇಲ್ಲೇ ಬಿಸಾಡುತ್ತಾರೆ. ಹೀಗಾಗಿ, ಆಸ್ಪತ್ರೆಗೆ ಬಂದವರಿಗೆ ಸುಂದರ ಪರಿಸರದಿಂದ ಮುದ ನೀಡಬೇಕಿದ್ದ ಪಾರ್ಕ್ ಹಾಳು ಕೊಂಪೆಯಂತಾಗಿದ್ದು, ಕಿರಿಕಿರಿ ಉಂಟುಮಾಡುತ್ತಿದೆ.

**ಆಹಾರ ಸೇವಿಸಿ, ತಿಂದುಂಡಿದ್ದ ಕಸವನ್ನು ಇಲ್ಲೇ ಬಿಸಾಡುತ್ತಾರೆ**

ಒಟ್ಟಾರೆಯಾಗಿ ನಿಂಬೆಯ ನಾಡು ಇಂಡಿ ತಾಲೂಕಾಸ್ಪತ್ರೆಯಲ್ಲಿ ಎಲ್ಲವೂ ಸರಿಯಿಲ್ಲ ಎಂಬುದು ಪದೇ ಪದೇ ಬಹಿರಂಗ ಆಗುತ್ತಿದೆ. ಆಸ್ಪತ್ರೆ ವಾರ್ಡ್‌ಗಳು ಮತ್ತು ಆವರಣದಲ್ಲಿ ನಾಯಿಗಳು ಓಡಾಡುತ್ತವೆ. ಆಸ್ಪತ್ರೆಯ ಮುಂಭಾಗದ ಉದ್ಯಾನವನ ಹಾಳುಬಿದ್ದು ಗಬ್ಬೆದ್ದಿದೆ. ಹೀಗಾಗಿ, ಇನ್ನಾದರೂ ಸಂಬಂಧಿತ ಅಧಿಕಾರಿಗಳು ಈ ಬಗ್ಗೆ ಗಮನಹರಿಸಿ ಸೂಕ್ತ ಕ್ರಮ ಕೈಗೊಳ್ಳಬೇಕಿದೆ ಎನ್ನುವುದು ಇಲ್ಲಿನ ಸ್ಥಳೀಯರ ಒತ್ತಾಯ. ಒಂದು ಸರ್ಕಾರಿ ಆಸ್ಪತ್ರೆ ಎಂದರೆ ನಿತ್ಯ ನೂರಾರು ಜನರು ಅಲ್ಲಿಗೆ ಬಂದು ಹೋಗುತ್ತಾರೆ. ಅದರಲ್ಲೂ ಸರ್ಕಾರಿ ತಾಲ್ಲೂಕಾಸ್ಪತ್ರೆ ಜನರ ಜೀವ ಉಳಿಸುವಲ್ಲಿ ಪ್ರಮುಖವಾದ ಪಾತ್ರವಹಿಸುತ್ತದೆ.



ಉದಯವಾಹಿನಿ ಚಿತ್ರ

ಆದರೆ ಇಂಡಿ ತಾಲೂಕಾ ಆಸ್ಪತ್ರೆಯ ಮುಂಭಾಗದಲ್ಲಿ ಐದು ನಿಮಿಷವೂ ಸಹ ನಿಲ್ಲಲು ಸಾಧ್ಯವಾಗದ ದುಸ್ಥಿತಿ ಎದುರಾಗಿದೆ. ಇದಕ್ಕೆ ಕಾರಣ ಆಸ್ಪತ್ರೆ ಮುಂಭಾಗದಲ್ಲಿರುವ ಉದ್ಯಾನವನದ ದುರಸ್ಥಿಯೇ ಆಗಿದೆ. ಈ ಉದ್ಯಾನವನ ಗ್ಲೌಸ್, ಮಾಸ್ಕ್, ಪ್ಲಾಸ್ಟಿಕ್ ಕಸದಿಂದ ತುಂಬಿದ್ದು, ಸುತ್ತಮುತ್ತ ತಿಪ್ಪೆಯಂತಹ ವಾತಾವರಣ ಸೃಷ್ಟಿಯಾಗಿದೆ. ಅದರಲು ಸಾರ್ವಜನಿಕರು ಮೂತ್ರ ವಿಸರ್ಜನೆ ಕೂಡ ಅಲೆ ಮಾಡುತ್ತಾರೆ. ಹೀಗಾಗಿ ತಾಲ್ಲೂಕಾ ಆಡಳಿತ ಇದರ ಬಗ್ಗೆ ಗಮನ ಹರಿಸಬೇಕು ಎಂದು ಹೇಳಿದರು ಕರವೇ ಅಧ್ಯಕ್ಷ ಶಿವು ಮಲಗ್ಗೊಂಡ.

> ಸರಕಾರಿ ಆಸ್ಪತ್ರೆ ಉದ್ಯಾನವನ ಆಸ್ಪತ್ರೆಗೆ ಸಂಬಂಧಿಸುತ್ತದೆ ಮತ್ತು ಉದ್ಯಾನವನ ನಿರ್ಮಿಸುವದು ಸರಕಾರಿ ಆಸ್ಪತ್ರೆಯವರ ಜವಾಬ್ದಾರಿ. ಆದರೆ ಇಂಡಿ ತಾಲ್ಲೂಕಿನ ಸರಕಾರಿ ಆಸ್ಪತ್ರೆ. ಸಿ. ಎಮ್. ಓ. ಈರಣ್ಣ ಧಾರವಾಡಕರ್ ಅವರು ಉದ್ಯಾನವನ ನಿರ್ಮಿಸುವ ಜವಾಬ್ದಾರಿ ಪಟ್ಟಣದ ಪುರಸಭೆ ಅಧಿಕಾರಿಗಳು ಉದ್ಯಾನವನ ನಿರ್ಮಿಸಬೇಕು ಅದು ಅವರಿಗೆ ಸಂಬಂಧಸುತ್ತದೆ ನಮ್ಮ ಆಸ್ಪತ್ರೆಗೆ. ನೀರು. ಲೈಟ್ ಯಲ್ಲಾ ಪುರಸಭೆಯವರು ಮಾಡುತ್ತಾರೆ. ಉದ್ಯಾನವನ ಕೂಡ ಅವರೇ ಮಾಡಬೇಕು ನಾನು ಪುರಸಭೆಗೆ ಉದ್ಯಾನವನ ನಿರ್ಮಿಸಿ ಅಂತ. ಲೇಟರ್ ಬರುಯುತ್ತೇನೆ -ಡಾ || ಈರಣ್ಣ ಧಾರವಾಡಕರ್, ಸಿ. ಎಮ್. ಓ ಇಂಡಿ

> ಸರಕಾರಿ ಆಸ್ಪತ್ರೆ ಒಳಗಡ್ಡೆ ಇರುವ ಉದ್ಯಾನವನ ಪುರಸಭೆ ಹೆಸರಲ್ಲಿ ಇರುವುದಿಲ್ಲ ಅದು ಪುರಸಭೆ ಅಧಿನಕೆ ಬರುವುದಿಲ್ಲ ಅದರಲ್ಲಿ ಪುರಸಭೆಯವರು ಉದ್ಯಾನವನ ನಿರ್ಮಿಸಲು ಬರುವುದಿಲ್ಲ.ಸರಕಾರಿ ಆಸ್ಪತ್ರೆಯವರೆ ಉದ್ಯಾನವನ ನಿರ್ಮಿಸಿಕೊಳಬೇಕು ಅದು ಸರಕಾರಿ ಆಸ್ಪತ್ರೆ ಜಾಗ ಆಗಿರುವುದರಿಂದ ಅಲ್ಲಿ ಸರಕಾರಿ ಆಸ್ಪತ್ರೆ ಇಂದ ಉದ್ಯಾನವನ ನಿರ್ಮಿಸಿದಲ್ಲಿ ಪುರಸಭೆ ಇಂದ ಕುಡಲು ಕುರ್ಚಿ ವೆವಸ್ಥೆ ಮಾಡಿಕೊಡಬಹುದು
> – ಮಾಂತೇಶ ಹಂಗರಿಗಿ, ಪುರಸಭೆ ಮುಖ್ಯಧಿಕಾರಿ

# ಸತತ ಮೂರನೇ ಅವಧಿಗೆ ಮರು ಆಯ್ಕೆಯಾದ ಪ್ರಧಾನಿ ನರೇಂದ್ರ ಮೋದಿ

## ಜೋ ಬೈಡನ್–ರಿಷಿ ಸುನಕ್: ನರೇಂದ್ರ ಮೋದಿಗೆ ಜಾಗತಿಕ ನಾಯಕರಿಂದ ಅಭಿನಂದನೆಗಳ ಮಹಾಪೂರ

**ವಾಷಿಂಗ್ಟನ್:** ಸತತ ಮೂರನೇ ಅವಧಿಗೆ ಅಧಿಕಾರಕ್ಕೆ ಏರುವ ಮೂಲಕ ಮಾಜಿ ಪ್ರಧಾನಿ ಜವಹರಲಾಲ್ ನೆಹರು ಅವರ ಸಾಲಿಗೆ ಸೇರಿದ ನರೇಂದ್ರ ಮೋದಿ ಅವರಿಗೆ ದೇಶ ವಿದೇಶಗಳಿಂದ ಅಭಿನಂದನೆಗಳ ಮಹಾಪೂರವೇ ಹರಿದುಬರುತ್ತಿದೆ. ಅಮೆರಿಕ ಅಧ್ಯಕ್ಷ ಜೋ ಬೈಡನ್, ಬ್ರಿಟನ್ ಪ್ರಧಾನಿ ರಿಷಿ ಸುನಕ್, ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯಲ್‌ಮ್ಯಾಕ್ರನ್ ಸೇರಿದಂತೆ ವಿವಿಧ ದೇಶಗಳ ಗಣ್ಯರು ನರೇಂದ್ರ ಮೋದಿ, ಎನ್‌ಡಿಎ ಮೈತ್ರಿಕೂಟವನ್ನು ಅಭಿನಂದಿಸಿದ್ದಾರೆ.



ಈ ಐತಿಹಾಸಿಕ ಚುನಾವಣೆಯಲ್ಲಿ ಜಯಗಳಿಸಿದ ಪ್ರಧಾನಿ ನರೇಂದ್ರ ಮೋದಿ ಮತ್ತು ನ್ಯಾಷನಲ್ ಡೆಮಾಕ್ರಟಿಕ್ ಅಲಯನ್ಸ್‌ಗೆ ಹಾಗೂ ಸುಮಾರು 650 ಮಿಲಿಯನ್ ಮತದಾರರಿಗೆ ಅಭಿನಂದನೆಗಳು. ನಾವು ಭವಿಷ್ಯದ ಅನಿಯಮಿತ ಸಂಭವನೀಯತೆಗಳನ್ನು ತೆರೆದಿರುವುದರಿಂದ ನಮ್ಮ ದೇಶಗಳ ನಡುವಿನ ಗೆಳೆತನವು ಬೆಳೆಯುತ್ತಲೇ ಇದೆ ಎಂದು ಅಮೆರಿಕ ಅಧ್ಯಕ್ಷ ಜೋ ಬೈಡನ್ ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಜತೆ ಮಾತನಾಡಿದ್ದು, ಚುನಾವಣಾ ಗೆಲುವಿಗಾಗಿ ಅಭಿನಂದಿಸಿರುವುದಾಗಿ ಬ್ರಿಟನ್ ಪ್ರಧಾನಿ ರಿಷಿ ಸುನಕ್ ತಿಳಿಸಿದ್ದಾರೆ. ಯುಕೆ ಮತ್ತು ಭಾರತವು ಅತ್ಯಂತ ನಿಕಟ ಸ್ನೇಹ ಹಂಚಿಕೊಂಡಿವೆ. ಜತೆಯಾಗಿ ಈ ಗೆಳೆತನ ಮತ್ತಷ್ಟು ವರ್ಧಿಸಲಿದೆ ಎಂದಿದ್ದಾರೆ.

ಭಾರತವು ಜಗತ್ತಿನ ಅತಿ ದೊಡ್ಡ ಚುನಾವಣೆಯನ್ನು ಪೂರ್ಣಗೊಳಿಸಿದೆ. ನನ್ನ ಸ್ನೇಹಿತ ನರೇಂದ್ರ ಮೋದಿ ಅವರಿಗೆ ಅಭಿನಂದನೆಗಳು. ಭಾರತ, ಫ್ರಾನ್ಸ್‌ಅನ್ನು ಒಗ್ಗೂಡಿಸುವ ಕಾರ್ಯತಂತ್ರ ಪಾಲುದಾರಿಕೆಯನ್ನು ನಾವು ಜತೆಗೂಡಿ ಬಲಪಡಿಸುವುದನ್ನು ಮುಂದುವರಿಸಲಿದ್ದೇವೆ ಎಂದು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರಾನ್ ಹೇಳಿದ್ದಾರೆ.

ಹೊಸ ಚುನಾವಣಾ ಗೆಲುವಿಗಾಗಿ ನರೇಂದ್ರ ಮೋದಿ ಅವರಿಗೆ ಅಭಿನಂದನೆಗಳು ಮತ್ತು ಒಳ್ಳೆಯ

**ನಾಯಕರ ಅಭಿನಂದನೆ**

**ಭೂತಾನ್, ನೇಪಾಳ, ಶ್ರೀಲಂಕಾ, ಮಾಲ್ಡೀವ್ಸ್, ಜಮೈಕಾ, ಬಾರ್ಬಡೋಸ್, ಸಿಂಗಪುರ, ಮಲೇಷ್ಯಾ, ಇಂಡೋನೇಷ್ಯಾ, ಸ್ಪೇನ್, ನೈಜೀರಿಯಾ, ಸರ್ಬಿಯಾ, ಜೆಕ್ ರಿಪಬ್ಲಿಕ್, ಇರಾನ್, ಕೀನ್ಯಾ, ತೈವಾನ್, ರಷ್ಯಾ, ನೆದರ್‌ಲ್ಯಾಂಡ್ಸ್, ನ್ಯೂಜಿಲ್ಯಾಂಡ್, ದಕ್ಷಿಣ ಕೊರಿಯಾ, ತಾಂಜಾನಿಯಾ, ಯುಎಇ, ನಾರ್ವೆ, ಸ್ವೀಡನ್ ಸೇರಿದಂತೆ ನೂರಾರು ದೇಶಗಳ ಪ್ರಧಾನಿಗಳು, ಅಧ್ಯಕ್ಷರು, ಇತರೆ ನಾಯಕರು ಪ್ರಧಾನಿ ಮೋದಿ ಅವರನ್ನು ಅಭಿನಂದಿಸಿದ್ದಾರೆ.**

ಕೆಲಸಗಳಿಗಾಗಿ ನನ್ನ ಹಾರೈಕೆಗಳು. ಇಟಲಿ ಹಾಗೂ ಭಾರತವನ್ನು ಒಗ್ಗೂಡಿಸುವ ಸ್ನೇಹವನ್ನು ಬಲಪಡಿಸುವ ಕೆಲಸದಲ್ಲಿ ನಾವು ಖಂಡಿತವಾಗಿಯೂ ಜತೆಯಾಗಿ ಕೆಲಸ ಮಾಡಲಿದ್ದೇವೆ. ನಮ್ಮ ಎದುರಿಗೆ ಇರುವ ವಿವಿಧ ಸಮಸ್ಯೆಗಳ ವಿಚಾರದಲ್ಲಿ, ನಮ್ಮ ದೇಶಗಳು ಮತ್ತು ನಮ್ಮ ಜನರ ಯೋಗ ಕ್ಷೇಮಕ್ಕಾಗಿ ಜತೆ

**ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಎನ್‌ಡಿಎ ಸತತ ಮೂರನೇ ಬಾರಿಗೆ ಅಧಿಕಾರಕ್ಕೆ ಬಂದಿದೆ. ಇದರೊಂದಿಗೆ ಅವರು ಹ್ಯಾಟ್ರಿಕ್ ಸಾಧನೆ ಮಾಡಿದ್ದಾರೆ. ಮತ್ತೆ ಗದ್ದುಗೆ ಏರುತ್ತಿರುವ ನರೇಂದ್ರ ಮೋದಿ ಅವರಿಗೆ ಜಗತ್ತಿನಾದ್ಯಂತ ದೇಶಗಳಿಂದ ಅಭಿನಂದನೆಗಳ ಮಹಾಪೂರವೇ ಹರಿದುಬರುತ್ತಿದೆ. ಜೋ ಬೈಡನ್, ರಿಷಿ ಸುನಕ್, ಎಮ್ಯಾನುಯಲ್ ಮ್ಯಾಕ್ರನ್ ಮುಂತಾದ ನಾಯಕರು ಏನು ಹೇಳಿದ್ದಾರೆ?**

ಯಾಗಿ ಸಹಕಾರ ನೀಡುತ್ತೇವೆ ಎಂದು ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಅವರು ಟ್ವೀಟ್ ಮಾಡಿದ್ದಾರೆ. ಸತತ ಮೂರನೇ ಅವಧಿಗೆ ಮರು ಆಯ್ಕೆಯಾದ ಪ್ರಧಾನಿ ನರೇಂದ್ರ ಮೋದಿ ಅವರಿಗೆ ನನ್ನ ಹೃತ್ಪೂರ್ವಕ ಅಭಿನಂದನೆಗಳು. ಭಾರತ ಹಾಗೂ ಇಸ್ರೇಲ್ ನಡುವಿನ ಗೆಳೆತನವು ಹೊಸ ಉನ್ನತಿಯತ್ತ ಬೆಳೆಯುವುದು ಮುಂದುವರಿಯಲಿ. ಬಧಾಯಿ ಹೋ! ಎಂದು ಇಸ್ರೇಲಿ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ.

ಭಾರತದ ಸಂಸದೀಯ ಚುನಾವಣೆಯಲ್ಲಿ ಸತತ ಮೂರನೇ ಗೆಲುವು ಸಾಧಿಸಿದ ಪ್ರಧಾನಿ ನರೇಂದ್ರ ಮೋದಿ, ಬಿಜೆಪಿ ಮತ್ತು ಬಿಜೆಪಿ ನೇತೃತ್ವದ ಎನ್‌ಡಿಎಗೆ ಅಭಿನಂದನೆಗಳು. ಭಾರತದ ಜನತೆಗೆ ಶಾಂತಿ ಹಾಗೂ ಸಮೃದ್ಧಿಯನ್ನು ನಾನು ಹಾರೈಸುತ್ತೇನೆ.

ನಮ್ಮ ದೇಶಗಳ ನಡುವಿನ ಸಹಕಾರ ಮುಂದುವರಿಯಲಿದೆ ಎಂದು ಆಶಿಸುತ್ತೇನೆ. ಭಾರತ ಮತ್ತು ಉಕ್ರೇನ್ ಸಮಾನ ಮೌಲ್ಯಗಳು ಹಾಗೂ ಇತಿಹಾಸವನ್ನು ಹಂಚಿಕೊಂಡಿವೆ. ನಮ್ಮ ಪಾಲುದಾರಿಕೆಯು ವರ್ಧಿಸುವ, ಪ್ರಗತಿ ತರುವ ಹಾಗೂ ನಮ್ಮ ದೇಶಗಳ ಪರಸ್ಪರ ಹೊಂದಾಣಿಕೆಗೆ ನೆರವಾಗಲಿದೆ ಎಂದು ಆಶಿಸುತ್ತೇನೆ ಎಂದು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಜೆಲೆನ್‌ಸ್ಕಿ ತಿಳಿಸಿದ್ದಾರೆ. ಚುನಾವಣಾ ಗೆಲುವಿಗಾಗಿ ಭಾರತದ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅಭಿನಂದನೆಗಳು. ಮಾನವ ಹಕ್ಕುಗಳು, ವೈವಿಧ್ಯತೆ ಹಾಗೂ ಕಾನೂನಿನ ನಿಯಮಗಳ ಸಹಕಾರಕ್ಕಾಗಿ ನಮ್ಮ ದೇಶಗಳ ಜನರ ಸಂಬಂಧ ವೃದ್ಧಿಗಾಗಿ ಅವರ ಸರ್ಕಾರದ ಜತೆ ಕೆಲಸ ಮಾಡಲು ಕೆನಡಾ ಸಿದ್ಧವಿದೆ ಎಂದು ಭಾರತದ ಜತೆ ಮನಸ್ತಾಪ ಹೊಂದಿರುವ ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೊ ಅವರ ಕಚೇರಿ ಟ್ವೀಟ್ ಮಾಡಿದೆ.

# ಮೋದಿ ಭೇಟಿಗೆ ಬರಲಿದ್ದಾರೆ ಜೇಕ್ ಸುಲ್ಲಿವಾನ್

**ವಾಷಿಂಗ್ಟನ್:** ಉನ್ನತ ನಾಯಕರು ದ್ವಿಪಕ್ಷೀಯ ಪಾಲುದಾರಿಕೆಯನ್ನು ಗಾಢವಾಗಿಸಿಕೊಳ್ಳುವ ಉದ್ದೇಶದಿಂದ ಅಮೆರಿಕ ಅಧ್ಯಕ್ಷ ಜೋ ಬಿಡನ್ ಅವರ ರಾಷ್ಟ್ರೀಯ ಭದ್ರತಾ ಸಲಹೆಗಾರ ಜೇಕ್ ಸುಲ್ಲಿವಾನ್ ಅವರು ಪ್ರಧಾನಿ ನರೇಂದ್ರ ಮೋದಿ ನೇತತ್ವದ ಹೊಸ ಸರ್ಕಾರದೊಂದಿಗೆ ವಿಶ್ವಾಸಾರ್ಹ, ಕಾರ್ಯತಂತ್ರದ ತಂತ್ರಜ್ಞಾನ ಪಾಲುದಾರಿಕೆ ಸೇರಿದಂತೆ ಹಂಚಿಕೆಯ ಆದ್ಯತೆಗಳ ಕುರಿತು ಮಾತುಕತೆ ನಡೆಸಲು ಭಾರತಕ್ಕೆ ಭೇಟಿ ನೀಡಲಿದ್ದಾರೆ ಎಂದು ಶ್ವೇತಭವನ ತಿಳಿಸಿದೆ. ಐತಿಹಾಸಿಕ ಮೂರನೇ ಅವಧಿಗೆ ಪುನರಾಯ್ಕೆಯಾಗಿರುವ ಅವರನ್ನು ಅಭಿನಂದಿಸಲು ಅಧ್ಯಕ್ಷ ಬಿಡೆನ್ ಅವರು ಬುಧವಾರ ಪ್ರಧಾನಿ ಮೋದಿ ಅವರಿಗೆ ಮಾಡಿದ ದೂರವಾಣಿ ಕರೆಯಲ್ಲಿ ಸುಲ್ಲಿವಾನ್ ಅವರ ಭೇಟಿಯ ಬಗ್ಗೆ ಚರ್ಚಿಸಲಾಗಿದೆ. ಸುಮಾರು



650 ಮಿಲಿಯನ್ ಜನರು ಮತದಾನ ಮಾಡಲು ಮತಗಟ್ಟೆಗೆ ಹೋಗುವುದರೊಂದಿಗೆ, ಚುನಾವಣೆಯಲ್ಲಿ ಭಾಗವಹಿಸಿದ್ದಕ್ಕಾಗಿ ಭಾರತದ ಜನತೆಯನ್ನು ಬಿಡೆನ್ ಇದೆ ಸಂದರ್ಭದಲ್ಲಿ ಶ್ಲಾಘಿಸಿದರು ಎನ್ನಲಾಗಿದೆ.

ಉಭಯ ನಾಯಕರು ಯುಎಸ್–ಭಾರತ ಸಮಗ್ರ, ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಯನ್ನು ಆಳಗೊಳಿಸಲು, ಮುಕ್ತ, ಸಮದ್ಧ ಇಂಡೋ–ಪೆಸಿಫಿಕ್ ಪ್ರದೇಶದ ತಮ ಹಂಚಿಕೆಯ ದಷ್ಟಿಯನ್ನು ಮುನ್ನಡೆಸಲು ತಮ ಬದ್ಧತೆಯನ್ನು ಒತ್ತಿ ಹೇಳಿದರು ಎನ್ನಲಾಗಿದೆ.

ವಿಶ್ವಾಸಾರ್ಹ, ಕಾರ್ಯತಂತ್ರದ ತಂತ್ರಜ್ಞಾನ ಪಾಲುದಾರಿಕೆ ಸೇರಿದಂತೆ ಹಂಚಿಕೆಯ ಅಮೆರಿಕ–ಭಾರತದ ಆದ್ಯತೆಗಳಲ್ಲಿ ಹೊಸ ಸರ್ಕಾರವನ್ನು ತೊಡಗಿಸಿಕೊಳ್ಳಲು ರಾಷ್ಟ್ರೀಯ ಭದ್ರತಾ ಸಲಹೆಗಾರ ಜೇಕ್ ಸುಲ್ಲಿವಾನ್ ಅವರ ಮುಂಬರುವ ಹೊಸ ದೆಹಲಿ ಪ್ರಯಾಣದ ಬಗ್ಗೆಯೂ ಉಭಯ ನಾಯಕರು ಚರ್ಚಿಸಿದರು ಎಂದು ಶ್ವೇತಭವನ ತಿಳಿಸಿದೆ.

**ಭಾರತ–ಯುಎಸ್ ಸಮಗ್ರ, ಜಾಗತಿಕ ಸಹಭಾಗಿತ್ವವು ಮುಂಬರುವ ವರ್ಷಗಳಲ್ಲಿ ಅನೇಕ ಹೊಸ ಹೆಗ್ಗುರುತುಗಳಿಗೆ ಸಾಕ್ಷಿಯಾಗಲಿದೆ ಎಂದು ತಿಳಿಸಿದರು. ನಮ ಪಾಲುದಾರಿಕೆಯು ಮಾನವೀಯತೆಯ ಪ್ರಯೋಜನಕ್ಕಾಗಿ ಜಾಗತಿಕ ಒಳಿತಿಗಾಗಿ ಒಂದು ಶಕ್ತಿಯಾಗಿ ಮುಂದುವರಿಯುತ್ತದೆ ಎಂದು ಮೋದಿ ಎಕ್ಸ್‌ನಲ್ಲಿ ಬರೆದಿದ್ದಾರೆ.**

ಬಿಡೆನ್ ಅವರ ಅಭಿನಂದನಾ ಸಂದೇಶಕ್ಕೆ ಪ್ರತಿಕ್ರಿಯಿಸಿದ ಪ್ರಧಾನಿ ಮೋದಿ, ನನ್ನ ಸ್ನೇಹಿತರಿಂದ ಕರೆ ಸ್ವೀಕರಿಸಲು ನನಗೆ ಸಂತೋಷವಾಗಿದೆ. ಅವರ ಅಭಿನಂದನೆಯ ಮಾತುಗಳು, ಭಾರತೀಯ ಪ್ರಜಾಪ್ರಭುತ್ವದ ಬಗ್ಗೆ ಅವರ ಮೆಚ್ಚುಗೆಯನ್ನು ಆಳವಾಗಿ ಗೌರವಿಸುತ್ತೇನೆ ಎಂದು ಪ್ರತಿಕ್ರಿಯಿಸಿದ್ದಾರೆ.

# ರಾಮನ ಪಕ್ಕದ ಸೋಲಿಗೆ 'ಲಕ್ಷ್ಮಣ'ನ ಅಸಮಾಧಾನ


**ನವದೆಹಲಿ:** ರಮಾನಂದ್ ಸಾಗರ್ ಅವರ ರಾಮಾಯಣ ಚಿತ್ರದಲ್ಲಿ ಲಕ್ಷ್ಮಣನ ಪಾತ್ರ ನಿರ್ವಹಿಸಿದ ನಟ ಸುನಿಲ್ ಲಾಹಿರಿ ಅವರು ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಬಹುಮತ ಗಳಿಸಲು ವಿಫಲವಾಗಿರುವುದು ನಿರಾಸೆಯಾಗಿದೆ ಎಂದಿದ್ದಾರೆ. ಚುನಾವಣಾ ಫಲಿತಾಂಶಗಳನ್ನು ನೋಡಿ ನನಗೆ ತುಂಬಾ ನಿರಾಶೆಯಾಗಿದೆ, ಮೊದಲನೆಯದಾಗಿ, ಮತದಾನವು ತುಂಬಾ ಕಡಿಮೆಯಾಗಿದೆ ಮತ್ತು ನಂತರ ಈ ಫಲಿತಾಂಶವಾಗಿದೆ, ನಾನು ನಿರಂತರವಾಗಿ ಜನರಿಗೆ ಮತ ನೀಡುವಂತೆ ಒತ್ತಾಯಿಸಿದ್ದೇನೆ ಆದರೆ ಯಾರೂ ಗಮನ ಹರಿಸಲಿಲ್ಲ.

ಈಗ, ಸಮಿಶ್ರ ಸರ್ಕಾರ ರಚನೆಯಾಗುತ್ತಿದೆ ಇಂತಹ ಸರ್ಕಾರ ಐದು ವರ್ಷ ಮುಂದು ವರೆಯುವುದೇ ಎಂದು ಪ್ರಶ್ನಿಸಿದ್ದಾರೆ. ವನವಾಸದಿಂದ ಹಿಂದಿರುಗಿದ ನಂತರ ಅಯೋಧ್ಯೆಯ ನಿವಾಸಿಗಳು ಸೀತೆಯ ಪುಣ್ಯವನ್ನು ಪ್ರಶ್ನಿಸಿದ್ದನ್ನು ನಾವು ಮರೆತಿದ್ದೇವೆ, ಅವರ ಮುಂದೆ ದೇವರೇ ಕಾಣಿಸಿಕೊಂಡರೂ, ಅವರು ಅವನನ್ನು ತಿರಸ್ಕರಿಸುತ್ತಾರೆ. ಅಯೋಧ್ಯೆ ಯಾವಾಗಲೂ ತನ್ನ ನಿಜವಾದ ರಾಜನಿಗೆ ದ್ರೋಹ ಬಗೆದಿದೆ ಎಂದು ಅವರು ವಿಡಿಯೋ ಪೋಸ್ಟ್ ಮಾಡಿದ್ದಾರೆ. ಮೊದಲನೆಯದಾಗಿ, ಮಹಿಳಾ ಸಬಲೀಕರಣದ ಸಂಕೇತವಾಗಿರುವ ಕಂಗನಾ ರನೌತ್ ಅವರು ಮಂಡಿ ಸ್ಥಾನವನ್ನು ಗೆದ್ದಿದ್ದಾರೆ ಮತ್ತು ಎರಡನೆಯದಾಗಿ, ಮೀರತ್‌ನಿಂದ ನನ್ನ ಹಿರಿಯ ಸಹೋದರ ಅರುಣ್ ಗೋವಿಲ್ ಗೆದ್ದಿದ್ದಾರೆ, ನಾನು ಇಬ್ಬರನ್ನೂ ಅಭಿನಂದಿಸುತ್ತೇನೆ, ಎಂದು ಅವರು ಹೇಳಿದ್ದಾರೆ.

**ನಾನು ಅಯೋಧ್ಯೆ ನಿವಾಸಿಗಳ ಶ್ರೇಷ್ಠತೆಗೆ ನಮಸ್ಕರಿಸುತ್ತೇನೆ. ನೀವು ಮಾತೆ ಸೀತೆಯನ್ನು ಸಹ ಬಿಡಲಿಲ್ಲ, ಹಾಗಾದರೆ ರಾಮನನ್ನು ಗುಡಾರದಿಂದ ಹೊರಗೆಳೆದು ಭವ್ಯವಾದ ದೇವಾಲಯದಲ್ಲಿ ಸಿಂಹಾಸನಾರೋಹಣ ಮಾಡಿದವರಿಗೆ ನೀವು ಹೀಗೆ ದ್ರೋಹ ಮಾಡಬಾರದು? ಎಂದು ಮತ್ತೊಬ್ಬರು ರೀ ಪೋಸ್ಟ್ ಮಾಡಿದ್ದಾರೆ. ಆದರೆ, ತಮ ನೆಚ್ಚಿನ ಇಬ್ಬರು ಅಭ್ಯರ್ಥಿಗಳು ತಮ ಕ್ಷೇತ್ರಗಳಲ್ಲಿ ಬಹುಮತ ಪಡೆದಿರುವುದು ಸಂತಸ ತಂದಿದೆ**

# ಯುಪಿ ಮತದಾರರನ್ನು ಹಾಡಿ ಹೊಗಳಿದ ಪ್ರಿಯಾಂಕಾ

**ನವದೆಹಲಿ:** ಉತ್ತರ ಪ್ರದೇಶದ ಜನತೆಗೆ ಅಭಿನಂದನೆ ಸಲ್ಲಿಸಿರುವ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರು ಇಡೀ ದೇಶಕ್ಕೆ ಸಂವಿಧಾನವನ್ನು ಉಳಿಸುವ ಘನ ಸಂದೇಶವನ್ನು ನೀಡಿದ್ದಾರೆ ಮತ್ತು ಸಾರ್ವಜನಿಕ ಸಮಸ್ಯೆಗಳು ಮುಖ್ಯ ಎಂಬ ಹಳೆಯ ಆದರ್ಶವನ್ನು ಮರುಸ್ಥಾಪಿಸಿದ್ದಾರೆ ಎಂದು ಹೇಳಿದ್ದಾರೆ.



ಎಕ್ಸ್‌ನಲ್ಲಿ ಹಿಂದಿಯಲ್ಲಿ ಪೋಸ್ಟ್ ಮಾಡಿದ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ, ಯುಪಿ ಕಾಂಗ್ರೆಸ್‌ನ ನನ್ನ ಎಲ್ಲಾ ಸಹೋದ್ಯೋಗಿಗಳಿಗೆ ನನ್ನ ನಮಸ್ಕಾರಗಳು. ನೀವು ಬಿಸಿಲು, ಧೂಳಿನಲ್ಲಿ ಕಷ್ಟಪಟ್ಟು ಕೆಲಸ ಮಾಡುವುದನ್ನು ನಾನು ನೋಡಿದೆ, ನೀವು ತಲೆಬಾಗಲಿಲ್ಲ ನೀವು ಕಷ್ಟದ ಸಮಯದಲ್ಲಿ ಹೋರಾಡುವ ಧೈರ್ಯವನ್ನು ತೋರಿಸಿದ್ದೀರಿ ಎಂದು ಶ್ಲಾಘಿಸಿದ್ದಾರೆ.

ನಿಮ್ಮ ಮೇಲೆ ದೌರ್ಜನ್ಯಗಳು ನಡೆದಿವೆ, ನಿಮ್ಮ ವಿರುದ್ಧ ನಕಲಿ ಪ್ರಕರಣಗಳನ್ನು ದಾಖಲಿಸಲಾಗಿದೆ, ಜೈಲಿಗೆ ಹಾಕಲಾಗಿದೆ, ಪದೇ ಪದೇ ಗೃಹಬಂಧನದಲ್ಲಿ ಇರಿಸಲಾಗಿದೆ ಆದರೆ ನೀವು ಹೆದರಲಿಲ್ಲ, ಅನೇಕ ನಾಯಕರು ಭಯದಿಂದ ಹೊರಟುಹೋದರು, ನೀವು ದಢವಾಗಿ ನಿಂತಿದ್ದೀರಿ ಎಂದು ಅವರು ಹೇಳಿದರು.

ಈ ದೇಶದ ಆಳ ಮತ್ತು ಸತ್ಯವನ್ನು ಅರ್ಥಮಾಡಿಕೊಂಡು ಇಡೀ ಭಾರತಕ್ಕೆ ಸಂವಿಧಾನವನ್ನು ಉಳಿಸುವ ಘನ ಸಂದೇಶವನ್ನು ನೀಡಿದ ಉತ್ತರ ಪ್ರದೇಶದ ಜಾಗರೂಕ ಜನರ ಬಗ್ಗೆ ನನಗೆ ಹೆಮ್ಮೆಯಿದೆ ಎಂದು ಗಾಂಧಿ ಹೇಳಿದರು.

**ನೀವು ಇಂದಿನ ರಾಜಕೀಯದಲ್ಲಿ ಹಳೆಯ ಆದರ್ಶವನ್ನು ಮರುಸ್ಥಾಪಿಸಿದ್ದೀರಿ? ಜನರ ಸಮಸ್ಯೆಗಳು ಮುಖ್ಯ, ಅವುಗಳನ್ನು ನಿರ್ಲಕ್ಷಿಸುವವರಿಗೆ ತಕ್ಕಪಾಠ ಕಲಿಸಿದ್ದಿರಿ ಎಂದಿದ್ದಾರೆ.**

**ಚುನಾವಣೆಯು ಜನರದ್ದು, ಜನರು ಅದರ ವಿರುದ್ಧ ಹೋರಾಡುತ್ತಾರೆ ಮತ್ತು ಜನರು ಗೆಲ್ಲುತ್ತಾರೆ**

**– ಪ್ರಿಯಾಂಕಾ ಗಾಂಧಿ**

# ರಾಷ್ಟ್ರ ರಾಜಕಾರಣಕ್ಕೆ ಹೊಸ ದಿಕ್ಕು ನೀಡಿದ ಇಂಡಿ ಸಾಧನೆ

**ಛಿಂದ್ವಾರಾ:** ಲೋಕಸಭೆ ಚುನಾವಣೆಯಲ್ಲಿ ಇಂಡಿ ಒಕ್ಕೂಟ ಗಣನೀಯ ಸಂಖ್ಯೆಯ ಸ್ಥಾನಗಳನ್ನು ಗೆದ್ದುಕೊಂಡಿದ್ದು, ಪ್ರತಿಪಕ್ಷಗಳ ಮೈತ್ರಿಕೂಟದ ಈ ಸಾಧನೆ ಮುಂದಿನ ದಿನಗಳಲ್ಲಿ ರಾಷ್ಟ್ರ ರಾಜಕಾರಣಕ್ಕೆ ಹೊಸ ದಿಕ್ಕನ್ನು ನೀಡಲಿದೆ ಎಂದು ಹಿರಿಯ ಕಾಂಗ್ರೆಸ್ ನಾಯಕ ಕಮಲ್ ನಾಥ್ ಹೇಳಿದ್ದಾರೆ.

2019ರಲ್ಲಿ ಕಾಂಗ್ರೆಸ್ ಗೆದ್ದ ಏಕೈಕ ಕ್ಷೇತ್ರವಾದ ಚಿಂದ್ವಾರದಿಂದ ತಮ ಮಗ ಮತ್ತು ಹಾಲಿ ಸಂಸದ ನಕುಲ್ ನಾಥ್ ಅವರ ಸೋಲಿನ ಬಗ್ಗೆ ಕೇಳಿದಾಗ, ಇದು ಕೇವಲ ಒಂದು ಸ್ಥಾನದ ಪ್ರಶ್ನೆಯಲ್ಲ, ಆದರೆ ದೊಡ್ಡ ಸೋಲಿನ ಪ್ರಶ್ನೆಯಾಗಿದೆ ಎಂದು ಮಾರ್ಮಿಕವಾಗಿ ಉತ್ತರಿಸಿದ್ದಾರೆ.

ಛಿಂದ್ವಾರಾದಲ್ಲಿ ಪಕ್ಷದ ಆಘಾತಕಾರಿ ಸೋಲಿನ ಹಿಂದಿನ ಕಾರಣಗಳನ್ನು ಕಂಡುಹಿಡಿಯಲು ಸಮಿತಿ ರಚಿಸಿರುವುದಾಗಿ ತಿಳಿಸಿದರು. ಮಧ್ಯಪ್ರದೇಶದ ಲೋಕಸಭೆ ಚುನಾವಣೆಯಲ್ಲಿ ಆಡಳಿತಾರೂಢ ಬಿಜೆಪಿ ರಾಜ್ಯದ ಎಲ್ಲಾ 29 ಸ್ಥಾನಗಳನ್ನು ಗೆದ್ದುಕೊಂಡಿದೆ.



ಬಿಜೆಪಿಯು 400 ಪಾರ್ (400 ಕ್ಕೂ ಹೆಚ್ಚು ಸ್ಥಾನಗಳು) ಎಂಬ ಘೋಷಣೆಯನ್ನು ನೀಡಿತು, ಆದರೆ ಕೇಸರಿ ಪಕ್ಷವು ಕೇವಲ 240 ಕ್ಷೇತ್ರಗಳಲ್ಲಿ ಗೆದ್ದಿದೆ ಎಂದು ಕಮಲ್ ನಾಥ್ ಹೇಳಿದ್ದಾರೆ. ನಮ ಮೈತ್ರಿಕೂಟದ ಸಾಧನೆ ಉತ್ತಮವಾಗಿತ್ತು. ಮೋದಿಜಿ (ಪ್ರಧಾನಿ ನರೇಂದ್ರ ಮೋದಿ) 400 ಪಾರ್ ಎಂದು ಹೇಳುತ್ತಿದ್ದರು, ಆದರೆ (ಬಿಜೆಪಿ) ಕೇವಲ 240 ಸ್ಥಾನಗಳನ್ನು ಗೆದ್ದಿದೆ.

ಇದಕ್ಕೆ ವಿರುದ್ಧವಾಗಿ, ನಾವು (ಇಂಡಿ ಒಕ್ಕೂಟ) ಉತ್ತಮ ಸಂಖ್ಯೆಯ ಸ್ಥಾನಗಳನ್ನು (234) ಪಡೆದಿದ್ದೇವೆ ಮತ್ತು ಇದು ಮುಂದಿನ ದಿನಗಳಲ್ಲಿ ರಾಜಕೀಯಕ್ಕೆ ಹೊಸ ದಿಕ್ಕನ್ನು ನೀಡಲಿದೆ ಎಂದು ಕಾಂಗ್ರೆಸ್ ಹಿರಿಯ ನಾಯಕ ತಮ ತವರು ಜಿಲ್ಲೆ ಛಿಂದ್‌ವಾರದ ಹೋಟೆಲ್‌ನಲ್ಲಿ ಪಕ್ಷದ ಕಾರ್ಯಕರ್ತರನ್ನು ಭೇಟಿ ಮಾಡಿದ ನಂತರ ಸುದ್ದಿಗಾರರಿಗೆ ತಿಳಿಸಿದರು. ಲೋಕಸಭಾ ಚುನಾವಣಾ ಫಲಿತಾಂಶದ ನಂತರ ಕಾಂಗ್ರೆಸ್ ನಾಯಕತ್ವವು ತಮನ್ನು ನವದೆಹಲಿಗೆ ಕರೆಸುತ್ತಿದೆ ಎಂದು ಕಮಲ್ ನಾಥ್ ಹೇಳಿದರು, ಆದರೆ ಅವರು ಈ ವರ್ಷಗಳಲ್ಲಿ ತಮ ಬೆಂಬಲಕ್ಕೆ ನಿಂತ ಜನರನ್ನು ಭೇಟಿ ಮಾಡಲು ಮೊದಲು ಚಿಂದ್ವಾರಕ್ಕೆ ಹೋಗುತ್ತೇನೆ ಮತ್ತು ನಂತರ ಮಾತ್ರ ರಾಷ್ಟ್ರ ರಾಜಧಾನಿಗೆ ಪ್ರಯಾಣಿಸುತ್ತೇನೆ ಎಂದು ಹೇಳಿದರು. ಈ ಸೋಲಿನ ಹಿಂದಿನ ಕಾರಣಗಳನ್ನು ತಿಳಿದುಕೊಂಡು ಪಕ್ಷದ ಕಾರ್ಯಕರ್ತರಿಗೆ ಈ ಬಗ್ಗೆ ತಿಳಿಸುವಂತೆ ಅವರು ಕೇಳಿಕೊಂಡರು.

**ಕೇಂದ್ರದಲ್ಲಿ ಇಂಡಿ ಬಣ ಸರ್ಕಾರ ರಚಿಸುವ ಸಾಧ್ಯತೆಗಳ ಕುರಿತು ಕೇಳಿದ ಪ್ರಶ್ನೆಗೆ, ಪ್ರಸ್ತುತ ಅವರ ಮೈತ್ರಿಕೂಟ ಅಧಿಕಾರದಲ್ಲಿದೆ, ಆದರೆ ಪರಿಸ್ಥಿತಿ ಬದಲಾದರೆ ಅಂತಹ ಅವಕಾಶವನ್ನು ಅನ್ವೇಷಿಸಬಹುದು ಎಂದರು.**

# 85 ವರ್ಷಗಳ ಬಳಿಕ ಬಡ್ತಿ ಭಾಗ್ಯ ಪಡೆದ ಸಿಬ್ಬಂದಿ

**ನವದೆಹಲಿ:** ಸಿಆರ್‌ಪಿಎಫ್‌ನ ಅತ್ಯಗತ್ಯ ಬೆನ್ನೆಲುಬಾಗಿರುವ ಕಾನ್‌ಸ್ಟಾಬ್ಯುಲರಿಯ ಅತ್ಯಂತ ಕೆಳ ಹಂತದ ಒಟ್ಟು 2,600 ಅಡುಗೆಯವರು ಮತ್ತು ನೀರು ವಾಹಕಗಳಿಗೆ ದೇಶದ ಅತಿದೊಡ್ಡ ಅರೆಸೇನಾ ಪಡೆಯ 85 ವರ್ಷಗಳ ಇತಿಹಾಸದಲ್ಲಿ ಮೊದಲ ಬಾರಿಗೆ ಬಡ್ತಿ ನೀಡಲಾಗಿದೆ.



1939ರಲ್ಲಿ ಸ್ಥಾಪನೆಯಾದ ಸೆಂಟ್ರಲ್ ರಿಸರ್ವ್ ಪೋಲೀಸ್ ಫೋರ್ಸ್‌ನಲ್ಲಿ ಸುಮಾರು 3.25 ಲಕ್ಷ ಪುರುಷರು ಮತ್ತು ಮಹಿಳಾ ಯೋಧರಿದ್ದಾರೆ. ಇವರ ಊಟ ಮತ್ತಿತರ ಕಾರ್ಯ ನಿರ್ವಹಿಸುವ 12,250 ಸಿಬ್ಬಂದಿಯಿದ್ದಾರೆ. 1,700 ಅಡುಗೆಯವರು, 900 ವಾಟರ್ ಕ್ಯಾರಿಯರ್ ಸಿಬ್ಬಂದಿಯನ್ನು ಅವರ ಕಾನ್‌ಸ್ಟೇಬಲ್ ಹುದ್ದೆಯಿಂದ ಹೆಡ್ ಕಾನ್‌ಸ್ಟೇಬಲ್‌ನ ಮುಂದಿನ ಶ್ರೇಣಿಗೆ ಬಡ್ತಿ ನೀಡಲಾಗಿದೆ. ಸಿಆರ್‌ಪಿಎಫ್‌ನ 85 ವರ್ಷಗಳ ಇತಿಹಾಸದಲ್ಲಿ ಇದು ಮೊದಲ ಬಾರಿಗೆ ಸಂಭವಿಸಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ಪಿಟಿಐಗೆ ತಿಳಿಸಿದ್ದಾರೆ. ಬ್ರಿಟಿಷರ ಕಾಲದಲ್ಲಿ 1939ರಲ್ಲಿ ಅಧಿಕಾರಕ್ಕೆ ಬಂದ ನಂತರ ಈ ಸಿಬ್ಬಂದಿ ಬಲದ ಭಾಗವಾಗಿದ್ದಾರೆ. 2016ರಲ್ಲಿ ಕೇಂದ್ರ ಸರ್ಕಾರವು 7 ನೇ ವೇತನ ಆಯೋಗದ ಶಿಫಾರಸುಗಳನ್ನು ಜಾರಿಗೆ ತಂದಾಗ ಅವರಿಗೆ ಅಡುಗೆ ಮತ್ತು ನೀರು ವಾಹಕದ ನಿರ್ದಿಷ್ಟ ಕೇಡರ್ ಹೆಸರನ್ನು ನೀಡಲಾಯಿತು ಎಂದು ಅಧಿಕಾರಿ ಹೇಳಿದರು.

ಕೇಂದ್ರೀಯ ಸಶಸ್ತ್ರ ಪೊಲೀಸ್ ಪಡೆ ಅಧಿಕಾರಿಯೊಬ್ಬರು ಇದುವರೆಗೂ ಶ್ರೇಣಿಯ ಕೆಳ ಶ್ರೇಣಿಯಲ್ಲಿ ನೇಮಕಗೊಂಡಿರುವ ಈ ಸಿಬ್ಬಂದಿಗೆ ಎಂದಿಗೂ ಬಡ್ತಿ ನೀಡಲಾಗುವುದಿಲ್ಲ ಮತ್ತು ಸುಮಾರು 30–35 ವರ್ಷಗಳವರೆಗೆ ಸೇವೆ ಸಲ್ಲಿಸಿದ ನಂತರವೂ ಅವರು ನೇಮಕಗೊಂಡ ಅದೇ ಶ್ರೇಣಿಯಲ್ಲಿ ನಿವತ್ತರಾಗುವಂತೆ ಮಾಡಲಾಗುತ್ತಿತ್ತು ಎಂದಿದ್ದಾರೆ.

ಸಿಆರ್‌ಪಿಎಫ್ ಸಿದ್ಧಪಡಿಸಿದ, ನಂತರ ಕೇಂದ್ರ ಗಹ ಸಚಿವಾಲಯ ಅನುಮೋದಿಸಿದ ಪ್ರಸ್ತಾವನೆಯ ಪರಿಣಾಮವಾಗಿ ಈ ಕ್ರಮವು ಬಂದಿದ್ದು, ಈ ಸಿಬ್ಬಂದಿಗಳ ಆಕಾಂಕ್ಷೆಗಳನ್ನು ಕಾಳಜಿ ವಹಿಸಲಾಗಿದೆ ಮತ್ತು ಇತರ ಕೇಡರ್ ಸಿಬ್ಬಂದಿಗಳಂತೆ ಅವರನ್ನು ಬಡ್ತಿ ನೀಡಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

# ಕಂಗನಾ ರಣಾವತ್ ಗೆ ಪೇದೆಯಿಂದ ಕಪಾಳಮೋಕ್ಷ

**ಚಂಡೀಗಡ:** ಹಿಮಾಚಲದ ಮಂಡಿ ಲೋಕಸಭಾ ಕ್ಷೇತ್ರದ ಚುನಾವಣೆಯಲ್ಲಿ ಗೆದ್ದು ಸಂಸದೆಯಾಗಿರುವ ಚಿತ್ರನಟಿ ಕಂಗನಾ ರಣಾವತ್ ಅವರಿಗೆ ಕೇಂದ್ರ ಕೈಗಾರಿಕಾ ರಕ್ಷಣಾ ದಳದ ಸೆಕ್ಯುರಿಟಿ ಗಾರ್ಡ್ ಒಬ್ಬರು ಕಪಾಳಮೋಕ್ಷ ಮಾಡಿರುವ ಘಟನೆ ನಡೆದಿದೆ. ಕಂಗನಾ ಅವರು ಚಂಡೀಗಡದಿಂದ ದೆಹಲಿಗೆ ಯುಕೆ707 ಸಂಖ್ಯೆಯ ವಿಮಾನದಲ್ಲಿ ಪ್ರಯಾಣ ಬೆಳೆಸಿದ್ದರು. ವಿಮಾನ ನಿಲ್ದಾಣ ಪ್ರವೇಶಿಸಿದ ಅವರು, ಚೆಕ್ ಇನ್ ಪ್ರಕ್ರಿಯೆಗಳನ್ನೆಲ್ಲಾ ಮುಗಿಸಿ ಅಲ್ಲಿಂದ ಬೋರ್ಡಿಂಗ್ ಪಾಯಿಂಟ್‌ಗೆ ಹೋಗಿದ್ದರು.

ಅಲ್ಲಿ, ಸಿಐಎಸ್‌ಎಫ್ ಸೆಕ್ಯುರಿಟಿ ಸಿಬ್ಬಂದಿಯೊಬ್ಬ ಬಂದು ಅವರಿಗೆ ಏನೇನೋ ಪ್ರಶ್ನೆಗಳನ್ನು ಕೇಳಿದ್ದು, ಅದೇ ವಿಚಾರವಾಗಿ, ಕಂಗನಾ ಹಾಗೂ ಸೆಕ್ಯುರಿಟಿ ಸಿಬ್ಬಂದಿಯ ನಡುವೆ ಮಾತಿಗೆ ಮಾತು ಬೆಳೆಯಿತು. ಆ ಸಂದರ್ಭದಲ್ಲಿ ಸಿಟ್ಟಿಗೆದ್ದ ಅಧಿಕಾರಿ, ಕಂಗನಾರವರ ಕಪಾಳಕ್ಕೆ ಹೊಡೆದಿದ್ದಾರೆ ಎಂದು ಹೇಳಲಾಗಿದೆ. ಇದರಿಂದ ತೀವ್ರವಾಗಿ ನೊಂದಿರುವ ಕಂಗನಾ, ಅದೇ ವಿಮಾನದಲ್ಲಿ ಪ್ರಯಾಣ ಬೆಳೆಸಿದ್ದಾರೆ. ದೆಹಲಿಗೆ ಬಂದಿಳಿದ ಕೂಡಲೇ ಸಿಐಎಸ್‌ಎಫ್ ಕೇಂದ್ರ ಕಚೇರಿಗೆ ತೆರಳಿ ಅಲ್ಲಿ, ಸಿಐಎಸ್‌ಎಫ್ ನಿರ್ದೇಶಕರಾದ ನೈನಾ ಸಿಂಗ್ ಹಾಗೂ ಇನ್ನಿತರ ಹಿರಿಯ ಅಧಿಕಾರಿಗಳನ್ನು ಭೇಟಿಯಾಗಿ ನಡೆದ ಘಟನೆಗಳನ್ನು ವಿವರವಾಗಿ ಹೇಳಿದ್ದು, ಕೂಡಲೇ ತಮ್ಮ ಮೇಲೆ ಕೈ ಹಾಕಿದ ಅಧಿಕಾರಿಯ ವಿರುದ್ಧ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆಂದು ಮೂಲಗಳು ತಿಳಿಸಿವೆ. ಇತ್ತ, ಕಂಗನಾ ರಣಾವತ್ ನೀಡಿರುವ ದೂರಿನ ಮೇರೆಗೆ ತನಿಖೆ ನಡೆಸಿರುವ ಸಿಐಎಸ್‌ಎಫ್ ಅಧಿಕಾರಿಗಳು, ಆಕೆಗೆ ಕಪಾಳ ಮೋಕ್ಷ ಮಾಡಿದ ಭದ್ರತಾ ಸಿಬ್ಬಂದಿಯನ್ನು ಕುಲ್ವಿಂದರ್ ಕೌರ್ ಎಂದು ಗುರುತಿಸಲಾಗಿದೆ.

ಹೆಚ್ಚಿನ ವಿಚಾರಣೆಗಗಾಗಿ ಸಿಐಎಸ್‌ಎಫ್ ಸಿಬ್ಬಂದಿಯು ಆತನನ್ನು ವಶಕ್ಕೆ ಪಡೆದಿದ್ದಾರೆಂದು ಮೂಲಗಳು ಹೇಳಿವೆ.

# ಜೈಲಿನಿಂದ ಚುನಾವಣೆಗೆ ಸ್ಪರ್ಧಿಸಿ ಗೆದ್ದ ಇಬ್ಬರ ಕತೆ ಮುಂದೇನು?

## ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಜೈಲಿನಿಂದಲೇ ಸ್ಪರ್ಧಿಸಿ ಗೆದ್ದಿದ್ದಾರೆ ಇಬ್ಬರು ಅಭ್ಯರ್ಥಿಗಳು

**ಹೊಸದಿಲ್ಲಿ:** ಭಾರತತೀಯ ಮತದಾರರ ಮನಸ್ಸನ್ನು ಊಹಿಸುವುದೇ ಕಷ್ಟ. ಮನಸ್ಸು ಮಾಡಿದರ ಜೈಲಿನಲ್ಲಿ ಖೈದಿಯಾಗಿರುವವನ್ನೂ ಗೆಲ್ಲಿಸಬಲ್ಲರು. ಗದ್ದುಗೆಗೆ ಏರಿಸಬಲ್ಲರು. ಈ ಹಿಂದೆ ಅನೇಕ ಬಾರಿ ಇಂತಹ ಘಟನೆಗಳಿಗೆ ಭಾರತ ಸಾಕ್ಷಿಯಾಗಿದೆಯಾದರೂ ಈ ಬಾರಿ ಜೈಲಿನಿಂದಲೇ ಲೋಕ ಸಭಾ ಚುನಾವಣೆ ಎದುರಿಸಿ ಗೆದ್ದಿರುವ ಇಬ್ಬರು ಮುಖ್ಯವಾಗಿ ಗಮನ ಸೆಳೆಯುತ್ತಿದ್ದಾರೆ. ಅದೂ ಗಂಭೀರ ಕ್ರಿಮಿನಲ್ ಪ್ರಕರಣಗಳನ್ನು ಆರೋಪವನ್ನು ಎದುರಿಸುತ್ತಿರುವ ಇಬ್ಬರು!



**ಏನನ್ನುತ್ತದೆ ಪ್ರಜಾಪ್ರತಿನಿಧಿ ಕಾನೂನು?**

ಪಂಜಾಬ್‌ನ ಖಾದೂರ್ ಸಾಹೀಬ್ ಕ್ಷೇತ್ರದಿಂದ ಜಯಭೇರಿ ಬಾರಿಸಿರುವ ಅಮೃತ್ ಪಾಲ್ ಸಿಂಗ್ ತೀವ್ರಗಾಮಿ ಸಿಖ್ ಧರ್ಮ ಪ್ರಚಾರಕನಾಗಿದ್ದು ರಾಷ್ಟ್ರೀಯ ಭದ್ರತಾ ಕಾನೂನು ಪ್ರಕರಣದಡಿ 2023ರ ಏಪ್ರಿಲ್ ನಿಂದ ಅಸ್ಸಾಂನ ದಿಬ್ರಗರ್ ಜೈಲಿನಲ್ಲಿ ಕಂಬಿ ಎಣಿಸುತ್ತಿದ್ದಾರೆ. ಇನ್ನು ಜಮ್ಮು ಮತ್ತು ಕಾಶ್ಮೀರದ ಬಾರಾಮುಲ್ಲಾ ಕ್ಷೇತ್ರದಿಂದ ಗೆದ್ದಿರುವ ಶೇಖ್ ಅಬ್ದುಲ್ ರಶೀದ್ ಅಲಿಯಾಸ್ ಎಂಜಿನಿಯರ್ ರಶೀದ್ ಭಯೋತ್ಪಾದಕರಿಗೆ ಹಣಕಾಸು ವ್ಯವಸ್ಥೆ ಮಾಡಿದ ಆರೋಪದ ಮೇಲೆ ಜೈಲು 2019ರ ಆಗಸ್ಟ್ 9ರಿಂದ ತಿಹಾರ್ ಜೈಲಿನಲ್ಲಿ ಕಂಬಿ ಎಣಿಸುತ್ತಿದ್ದಾರೆ.

**ಪ್ರಮಾಣವಚನಕ್ಕೆ ಕ್ರಮಗಳೇನು?:** ಈಗ ವಿಷಯವೆಂದರೆ ಈ ಇಬ್ಬರಿಗೂ ಈಗ ಸಂಸದರಾಗಿ ಪ್ರಮಾಣ ವಚನ ಸ್ವೀಕರಿಸಲು ಅವಕಾಶ ನೀಡಲಾಗುತ್ತದೆಯೇ? ಹಾಗಿದ್ದರೆ ಅದರ ಕ್ರಮಗಳೇನು ಎಂದು ನೋಡೋಣ ಬನ್ನಿ. ಸಂವಿಧಾನ ತಜ್ಞರು ಹೇಳುವ ಪ್ರಕಾರ ಅದು ಅವರಿಗೆ ಸಂವಿಧಾನ ನೀಡಿದ ಹಕ್ಕಾಗಿರುವುದರಿಂದ ಚುನಾವಣೆಯಲ್ಲಿ ಗೆದ್ದಿರುವ ಎಂಜಿನಿಯರ್ ರಶೀದ್ ಮತ್ತು ಅಮೃತ್ ಪಾಲ್ ಸಿಂಗ್ ಪ್ರಮಾಣ ವಚನ ಸ್ವೀಕರಿಸಲು ಅವಕಾಶವನ್ನು ಕಲ್ಪಿಸಲೇ ಬೇಕಾಗುತ್ತದೆ. ಆದರೆ ಸದ್ಯ ಅವರು ಜೈಲಿನಲ್ಲಿರುವುದರಿಂದ ಅದಕ್ಕಾಗಿ ಸಂಬಂಧಪಟ್ಟ ಅಧಿಕಾರಿಗಳಿಂದ ಅನುಮತಿ ಪಡೆದೇ ಸಂಸತ್ ಭವನಕ್ಕೆ ಹಾಜರಾಗಬೇಕಾಗುತ್ತದೆ. ಹಾಗೆಂದು ಸ್ವತಂತ್ರವಾಗಿ ಸಂಚರಿಸವಂತಿಲ್ಲ. ಒಮ್ಮೆ ಪ್ರಮಾಣವಚನ ಸ್ವೀಕರಿಸಿದ ಬಳಿಕ ಮತ್ತೆ ಜೈಲಿಗೆ ಹಿಂದುರುಗಬೇಕಾಗುತ್ತದೆ.

ಇದು ಜೈಲಿನ ಆಡಳಿತದ ಸಂಬಂಧಿಸಿದ ವಿಚಾರವಾಯಿತು. ಆದರೆ ಸಂಸತ್ತಿಗೆ ಸಂಬಂಧಿಸಿದ ಕೆಲವೊಂದು ಔಪಚಾರಿಕತೆ ಎಂಬುದೂ ಒಂದು ಇರುತ್ತದಲ್ವಾ ಒಮ್ಮೆ ಪ್ರಮಾಣ ವಚನ ಸ್ವೀಕರಿಸಿದ ಬಳಿಕ ಸಂಸತ್ ಕಲಾಪಕ್ಕೆ ಹಾಜರಾಗಬೇಕಾಗುತ್ತದೆ. ಸಂವಿಧಾನದ 101 (4) ನೇ ವಿಧಿಯ ಅನ್ವಯ ಸ್ವೀಕರ್ ಅವರ ಪೂರ್ವಾನುಮತಿ ಇಲ್ಲದೆ ಸಂಸತ್ತಿನ ಕಲಾಪ ಗೈರುಹಾಜರಿ ಆಗುವಂತಿಲ್ಲ.

**ಸದನದ ಔಪಚಾರಿಕತೆಯೇನು?:** ಪ್ರಮಾಣ ವಚನ ಸ್ವೀಕರಿಸಿದ ಬಳಿಕ ಸದನಕ್ಕೆ ಹಾಜರಾಗಲು ಸಾಧ್ಯವಾಗದಿದ್ದಲ್ಲಿ ಸ್ಪೀಕರ್‌ಗೆ ಪತ್ರ ಬರೆದು ತಿಳಿಸಬೇಕಾಗುತ್ತದೆ. ನಂತರ ಸ್ಪೀಕರ್ ಅವರ ಮನವಿಗಳನ್ನು ಸದನ ಸಮಿತಿಗೆ ವರ್ಗಾಯಿಸುತ್ತಾರೆ.

ಈಗ ಸದನ ಸಮಿತಿಯು ಸದಸ್ಯರಿಗೆ ಅವಕಾಶ ನೀಡಬೇಕೆ ಎಂದು ಸಮಿತಿ ಶಿಫಾರಸು ಮಾಡುತ್ತದೆ. ನಂತರ ಶಿಫಾರಸನ್ನು ಸ್ಪೀಕರ್ ಮೂಲಕ ಸದನದಲ್ಲಿ ಮತಕ್ಕೆ ಹಾಕಲಾಗುತ್ತದೆ.

ಇಂಜಿನಿಯರ್ ರಶೀದ್ ಅಥವಾ ಅಮೃತ್ ಪಾಲ್ ಸಿಂಗ್ ಅವರನ್ನು ತಪ್ಪಿತಸ್ಥರೆಂದು ಘೋಷಣೆಯಾಗಿ ಕನಿಷ್ಠ ಎರಡು ವರ್ಷಗಳ ಕಾಲ ಜೈಲು ಶಿಕ್ಷೆ ಅನುಭವಿಸಬೇಕಾಗಿ ಬಂದಲ್ಲಿ 2013 ರ ಸುಪ್ರೀಂ ಕೋರ್ಟ್ ತೀರ್ಪಿನ ಪ್ರಕಾರ ಅವರು ತಕ್ಷಣವೇ ಲೋಕಸಭೆಯಲ್ಲಿ ತಮ್ಮ ಸ್ಥಾನಗಳನ್ನು ಕಳೆದುಕೊಳ್ಳುತ್ತಾರೆ. ಅಂತಹ ಪ್ರಕರಣಗಳಲ್ಲಿ ಸಂಸದರು, ಶಾಸಕರನ್ನು ಅನರ್ಹಗೊಳಿಸಲಾಗುತ್ತದೆ. ಆದರೆ ಈಗಾಗಲೇ ಶಿಕ್ಷೆಗೊಳಗಾದ ಸಂಸದರು, ಶಾಸಕರು ತಮ್ಮ ಅಪರಾಧಗಳ ವಿರುದ್ಧ ಮೇಲ್ಮನವಿ ಸಲ್ಲಿಸಲು 3 ತಿಂಗಳ ಅವಕಾಶವನ್ನು ನೀಡಲಾಗುತ್ತದೆ.

**ಸಂಸದರಾಗಿ ಪ್ರಮಾಣವಚನ ಸ್ವೀಕರಿಸಲು ಅವಕಾಶ ಇದೆಯೇ**

**ಭಾರತದಲ್ಲಿ ಜೈಲಿನಲ್ಲಿ ಕಂಬಿ ಎಣಿಸುತ್ತಿರುವ ಮಹಾಶಯರು ಚುನಾಣೆಗೆ ನಿಲ್ಲುವುದು ದೊಡ್ಡ ಸಂಗತಿಯಲ್ಲ, ಅದೇ ರೀತಿಯಲ್ಲಿ ಸ್ಪರ್ಧಿಸಿ ಗೆಲ್ಲುವುದೂ ಅಚ್ಚರಿಯ ಸಂಗತಯಲ್ಲ. ಈ ಹಿಂದೆ ಬೇಕಾದಷ್ಟು ಮಂದಿ ಜೈಲಿನೊಳಗಿದ್ದೇ ಜಯಭೇರಿ ಬಾರಿಸಿದ್ದಾರೆ. ಈ ಬಾರಿ ಅಂತಹ ಎರಡು ಉದಾಹರಣೆಗಳಿಗೆ ಪಂಜಾಬ್, ಜಮ್ಮು ಕಾಶ್ಮೀರಗಳು ಸಾಕ್ಷಿಯಾಗಿವೆ. ಆದರೆ ಗೆದ್ದ ಬಳಿಕ ಅನುಸರಿಸಬೇಕಾದ ಕ್ರಮಗಳೇನು?**

- **ಪಂಜಾಬ್ ನ ಅಮೃತ್ ಪಾಲ್ ಸಿಂಗ್ ಮತ್ತು ಕಾಶ್ಮೀರದ ಎಂಜಿನಿಯರ್ ರಶೀದ್ ಗೆದ್ದ ಇಬ್ಬರು ಜೈಲುವಾಸಿಗಳು**
- **ಈ ಇಬ್ಬರಿಗೆ ಸಂಸದರಾಗಿ ಪ್ರಮಾಣವಚನ ಸ್ವೀಕರಿಸಲು ಭಾರತದ ಸಂವಿಧಾನ ಅವಕಾಶ ನೀಡುತ್ತದೆ**
- **ಆದರೆ ಬಳಿಕ ಪ್ರಜಾಪ್ರತಿನಿಧಿ ಕಾನೂನಿನ ಪ್ರಕಾರ 2 ತಿಂಗಳಿಗಿಂತ ಹೆಚ್ಚು ಕಾಲ ಜೈಲಿನಲ್ಲಿದ್ದರೆ ಸಂಸತ್ ಸದಸ್ಯತ್ವ ರದ್ದು**

## ಮಿನಿ ನ್ಯೂಸ್

### ಅಸ್ಸಾಂನಲ್ಲಿ ಎಂಟು ಕೋಟಿ ಮೌಲ್ಯದ ಯಾಬಾ ಮಾತ್ರೆ ಸೀಜ್

**ಗುವಾಹಟಿ:** ಪೊಲೀಸರು 8 ಕೋಟಿ ರೂಪಾಯಿ ಮೌಲ್ಯದ ಯಾಬಾ ಮಾತ್ರೆಗಳನ್ನು ವಶಪಡಿಸಿಕೊಂಡಿದ್ದಾರೆ ಮತ್ತು ಅಸ್ಸಾಂನ ಕರ್ಬಿ ಅಂಗ್ಲಾಂಗ್ ಜಿಲ್ಲೆಯ ಇಬ್ಬರನ್ನು ಬಂಧಿಸಿದ್ದಾರೆ ಎಂದು ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ತಿಳಿಸಿದ್ದಾರೆ. ಮಾದಕ ದ್ರವ್ಯ ವಿರೋಧಿ ಡ್ರೈವ್ ನಡೆಸುತ್ತಿದ್ದಾಗ ದಿಲ್ಲೈ ಪಾಯಿಂಟ್‌ನಲ್ಲಿ ವಾಹನವನ್ನು ತಡೆಹಿಡಿದು ಪರಿಶೀಲನೆ ನಡೆಸಿದಾಗ 8 ಕೋಟಿ ಮೌಲ್ಯದ 40,000 ಯಾಬಾ ಟ್ಯಾಬ್ಲೆಟ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಎಕ್ಸ್‌ನಲ್ಲಿನ ಪೋಸ್ಟ್‌ನಲ್ಲಿ ಶರ್ಮಾ ತಿಳಿಸಿದ್ದಾರೆ.

ಕಾರ್ಯಾಚರಣೆಯಲ್ಲಿ, ಮಾದಕವಸ್ತು ಸಾಗಣೆಗೆ ಸಂಬಂಧಿಸಿದಂತೆ ಇಬ್ಬರನ್ನು ಬಂಧಿಸಲಾಗಿದೆ ಎಂದು ಅವರು ಹೇಳಿದರು. ಯಾಬಾ ವ್ಯಸನಕಾರಿ ಉತ್ತೇಜಕ ಮೆಥಾಂಫೆಟಮೈನ್ ಮತ್ತು ಕೆಫೀನ್ ಅನ್ನು ಒಳಗೊಂಡಿದೆ. ರಾಜ್ಯವನ್ನು ಮಾದಕ ದ್ರವ್ಯ ಮುಕ್ತಗೊಳಿಸುವ ನಿಟ್ಟಿನಲ್ಲಿ ಅಸ್ಸಾಂ ಪೊಲೀಸರ ಪ್ರಯತ್ನವನ್ನು ಸಿಎಂ ಶ್ಲಾಘಿಸಿದರು.

### ಸಿಲಿಂಡರ್ ಸ್ಫೋಟ 10 ಮಂದಿಗೆ ಗಾಯ

**ಮುಂಬೈ:** ಸಿಲಿಂಡರ್ ಸ್ಫೋಟಗೊಂಡ ಪರಿಣಾಮ ಹತ್ತು ಮಂದಿ ಗಂಭೀರವಾಗಿ ಗಾಯಗೊಂಡ ಘಟನೆ ಮುಂಬೈನಚೆಂಬೂರಿನಲ್ಲಿ ನಡೆದಿದೆ.ಘಟನೆ 8.30ರ ಸುಮಾರಿಗೆ ಚೆಂಬೂರಿನ ಗಿಡ್ವಾಣಿ ರಸ್ತೆಯಲ್ಲಿರುವ ಕಟ್ಟಡದಲ್ಲ ನಡೆದಿದೆ. ನೆಲಮಹಡಿಯಲ್ಲಿ ಮರದ ಪೀಠೋಪಕರಣಗಳನ್ನು ಇಡಲಾಗಿತ್ತು. ಗಾಯಾಳುಗಳನ್ನು ನಗರದ ಗೋವಂಡಿ ಶತಾಬ್ದಿ ಆಸ್ಪತ್ರೆಗೆ ರವಾನಿಸಲಾಗಿದೆ. ಇನ್ನು ಗಾಜಿಯಾಬಾದ್‌ನ ಮನೆಯೊಂದರಲ್ಲಿ ಎಸಿ ಸ್ಫೋಟಗೊಂಡ ಘಟನೆ ನಡೆದಿದೆ. ಬಿಸಿ ಯಾದ ತಾಪಮಾನದಿಂದಾಗಿ ಎಸಿ ಸ್ಫೋಟಗೊಂಡಿದೆ ಎಂದು ತಿಳಿದು ಬಂದಿದೆ.

ಸ್ಥಳೀಯ ಅಗ್ನಿಶಾಮಕ ದಳಕ್ಕೆ ಮಾಹಿತಿ ನೀಡಿದರೂ ಮನೆಯವರು, ನೆರೆಹೊರೆಯವರು ಬೆಂಕಿ ನಂದಿಸಲು ಹರಸಾಹಸ ಪಟ್ಟರೂ ಪ್ರಯೋಜನವಾಗಲಿಲ್ಲ. ಸಮೀಪದ ಅಗ್ನಿಶಾಮಕ ದಳದಿಂದ ಕನಿಷ್ಠ ಎರಡು ಅಗ್ನಿ ಶಾಮಕ ಟೆಂಡರ್‌ಗಳು ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸುವ ಕಾರ್ಯಾಚರಣೆಯನ್ನು ಪ್ರಾರಂಭಿಸಿದರು, ಬಳಿಕ ಹರಸಾಹಸ ಪಟ್ಟು ಬೆಂಕಿ ನಂದಿಸಲಾಗಿದೆ.

### ಮೋದಿ ಪ್ರಮಾಣ ವಚನ ಸಮಾರಂಭ ಶೇಖ್ ಹಸೀನಾ ಭಾಗಿ ಸಾಧ್ಯತೆ

**ಢಾಕಾ:** ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಕೂಟ 293 ಸ್ಥಾನಗಳನ್ನು ಗೆಲ್ಲುವ ಮೂಲಕ ಸರ್ಕಾರ ರಚನೆಗೆ ಮುಂದಾಗಿದೆ. ಸತತ ಮೂರನೇ ಅವಧಿಗೆ ಭಾರತದ ಪ್ರಧಾನಿಯಾಗಿ ನರೇಂದ್ರ ಮೋದಿ ಪ್ರಮಾಣ ವಚನ ಸ್ವೀಕರಿಸಲಿದ್ದು, ಸಮಾರಂಭದಲ್ಲಿ ಬಾಂಗ್ಲಾದೇಶದ ಪ್ರಧಾನಿ ಶೇಖ್ ಹಸೀನಾ ಅವರು ಭಾಗಿಯಾಗುವ ನಿರೀಕ್ಷೆಯಿದೆ ಎಂದು ಅವರ ಆಪ್ತರು ಗುರುವಾರ ತಿಳಿಸಿದ್ದಾರೆ. ಹಸೀನಾ ಬುಧವಾರ ಮೋದಿ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದ್ದರು. ಈ ವೇಳೆ ಮೋದಿ ಅವರು ತಮ್ಮ ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ಪಾಲ್ಗೊಳ್ಳಲು ಆಹ್ವಾನಿಸಿದ್ದಾರೆ ಎಂದು ರಾಜತಾಂತ್ರಿಕ ಮೂಲಗಳು ತಿಳಿಸಿವೆ.

ಪ್ರಧಾನಿ ಮೋದಿಯವರ ಪ್ರಮಾಣ ವಚನ ಸಮಾರಂಭದಲ್ಲಿ ಪಾಲ್ಗೊಳ್ಳಲು ಪ್ರಧಾನಿ ಹಸೀನಾ ಅವರು ಇಂದು ಸಂಜೆ 4ಕ್ಕೆ ಢಾಕಾದಿಂದ ನವದೆಹಲಿಗೆ ಆಗಮಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಜೂನ್ 9ರಂದು ಸತತ ಮೂರನೇ ಅವಧಿಗೆ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಳ್ಳಲು ಮೋದಿ ಸಜ್ಜಾಗಿದ್ದಾರೆ. ಪ್ರಮಾಣವಚನ ಸಮಾರಂಭದಲ್ಲಿ ಶ್ರೀಲಂಕಾ, ಭೂತಾನ್, ನೇಪಾಳ ಮತ್ತು ಮಾರಿಷಸ್‌ನ ಉನ್ನತ ನಾಯಕರು ಪಾಲ್ಗೊಳ್ಳುವ ಸಾಧ್ಯತೆಯಿದೆ.

### ಶಾಲೆಯಲ್ಲಿ ಅಡಗಿದ್ದ ಹಮಾಸ್‌ನ 27 ಉಗ್ರರ ಹತ್ಯೆ : ಇಸ್ರೇಲ್


**ಗಾಜಾ:** ಇಲ್ಲಿನ ಶಾಲೆಯನ್ನು ಗುರಿಯಾಗಿಸಿ ಇಸ್ರೇಲ್ ನಡೆಸಿದ ವಾಯುದಾಳಿಯಲ್ಲಿ 27 ಮಂದಿ ಮೃತಪಟ್ಟಿದ್ದಾರೆ. 'ಮೃತರೆಲ್ಲ ಹಮಾಸ್ ಉಗ್ರರು' ಎಂದು ಇಸ್ರೇಲ್ ಹೇಳಿರುವುದಾಗಿ ರಾಯಿಟರ್ಸ್ ವರದಿ ಮಾಡಿದೆ. ಆದರೆ, ಪ್ರಸ್ತುತ ನಡೆಯುತ್ತಿರುವ ಯುದ್ಧದಿಂದಾಗಿ ನೆಲೆ ಕಳೆದುಕೊಂಡಿರುವವರಿಗೆ ಶಾಲಾ ಆವರಣದಲ್ಲಿ ಆಶ್ರಯ ನೀಡಲಾಗಿತ್ತು ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಗಾಜಾದ ಕೇಂದ್ರ ಭಾಗದಲ್ಲಿರುವ ನುಸೀರತ್‌ನಲ್ಲಿ ಇರುವ ವಿಶ್ವಸಂಸ್ಥೆಯ ಶಾಲೆಯಲ್ಲಿ ಹಮಾಸ್ ಉಗ್ರರು ಅಡಗಿದ್ದರು.

8 ತಿಂಗಳ ಹಿಂದೆ (2023ರ ಅಕ್ಟೋಬರ್ 7ರಂದು) ಇಸ್ರೇಲ್ ಮೇಲೆ ನಡೆಸಲಾದ ದಾಳಿಯ ಭಾಗವಾಗಿರುವ ಹಮಾಸ್ ಬಂಡುಕೋರರು ಶಾಲಾ ಆವರಣದ ಉಗ್ರರ ನೆಲೆಯಲ್ಲಿ ಇದ್ದರು ಎಂದು ಇಸ್ರೇಲ್ ಪ್ರತಿಪಾದಿಸಿದೆ. ನಾಗರಿಕರ ಸಾವು– ನೋವು ಆಗದಂತೆ ವಾಯುದಾಳಿಗೂ ಮುನ್ನ ಎಚ್ಚರದ ಕ್ರಮ ಕೈಗೊಳ್ಳಲಾಗಿದೆ ಎಂದೂ ಹೇಳಿದೆ.

ಹಮಾಸ್ ಸರ್ಕಾರಿ ಮಾಧ್ಯಮ ಕೇಂದ್ರದ ನಿರ್ದೇಶಕ ಇಸ್ಮಾಯಿಲ್ ಅಲ್–ಥಾವಬ್ತಾ ಅವರು, ಇಸ್ರೇಲ್ ಹೇಳಿಕೆಯನ್ನು ಅಲ್ಲಗಳೆದಿದ್ದಾರೆ. 'ಸ್ಥಳಾಂತರಗೊಂಡಿದ್ದ ನಾಗರಿಕೆ ಮೇಲೆ ನಡೆಸಿದ ಕ್ರೂರ ದಾಳಿಯನ್ನು ಸಮರ್ಥಿಸಿಕೊಳ್ಳಲು ಕಪೋಲಕಲ್ಪಿತ ಕಥೆ ಕಟ್ಟಲಾಗುತ್ತಿದೆ' ಎಂದು ಆರೋಪಿಸಿದ್ದಾರೆ. ಕದನ ವಿರಾಮಕ್ಕೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಒತ್ತಡಗಳು ಹೆಚ್ಚಾಗುತ್ತಿದೆ. ಇದರ ಹೊರತಾಗಿಯೂ, ಹಮಾಸ್ ನಿರ್ಮೂಲನೆಯಾಗುವವರೆಗೆ ಯುದ್ಧ ನಿಲ್ಲಿಸುವುದಿಲ್ಲ ಎಂದು ಇಸ್ರೇಲ್ ಇತ್ತೀಚೆಗೆ ಹೇಳಿತ್ತು. ಇದರ ಬೆನ್ನಲ್ಲೇ ವಾಯುದಾಳಿ ನಡೆಸಲಾಗಿದೆ.

### ವಿಧಾನಸಭಾ ಚುನಾವಣೆ; ನಿತೀಶ್ ನಾಯಕತ್ವದಲ್ಲೇ ಎನ್‌ಡಿಎ ಸ್ಪರ್ಧೆ

**ಪಟ್ನಾ:** ಬಿಹಾರದಲ್ಲಿ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎ ಪಕ್ಷವು ನಿತೀಶ್ ಕುಮಾರ್ ಅವರ ನಾಯಕತ್ವದಲ್ಲಿ ಸ್ಪರ್ಧಿಸಲಿದೆ ಎಂದು ಬಿಜೆಪಿಯ ಬಿಹಾರ ಘಟಕದ ಅಧ್ಯಕ್ಷ ಸಾಮ್ರಾಟ್ ಚೌಧರಿ ಗುರುವಾರ ಘೋಷಿಸಿದ್ದಾರೆ. ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ನಿತೀಶ್ ಕುಮರ್ ನೇತೃತ್ವದ ಜೆಡಿ(ಯು) ಪಕ್ಷವು ಬಿಜೆಪಿ, ಲೋಕ ಜನಶಕ್ತಿ ಪಕ್ಷ, ಹಿಂದೂಸ್ಥಾನಿ ಅವಾಮ್ ಮೋರ್ಚಾದೊಂದಿಗೆ ಮೈತ್ರಿ ಮಾಡಿಕೊಂಡು 16 ಕ್ಷೇತ್ರಗಳಲ್ಲಿ ಸ್ಪರ್ಧಿಸಿ 12ರಲ್ಲಿ ಗೆಲವು ಕಂಡಿದೆ. ಲೋಕಸಭೆಯಲ್ಲಿ ಬಿಜೆಪಿ ಸ್ವಂತ ಬಲದಿಂದ ಬಹುಮತ ಸಾಧಿಸಲು ವಿಫಲವಾಗಿರುವ ಹಿನ್ನೆಲೆಯಲ್ಲಿ ಕೇಂದ್ರದಲ್ಲಿ ಎನ್‌ಡಿಎ ಸರ್ಕಾರ ರಚನೆಗೆ ನಿತೀಶ್ ಕುಮಾರ್ ಬೆಂಬಲ ಅಗತ್ಯವಾಗಿತ್ತು. ಈ ರಾಜಕೀಯ ಬೆಳವಣಿಗೆಯ ನಡುವೆ, '2025ರ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎ ಪಕ್ಷವು ನಿತೀಶ್ ಕುಮಾರ್ ನೇತೃತ್ವದಲ್ಲಿ ಸ್ಪರ್ಧಿಸಲಿದೆ. ಅದಕ್ಕಾಗಿ ತಯಾರಿಯನ್ನು ಆರಂಭಿಸಲಾಗಿದೆ' ಎಂದು ಸಾಮ್ರಾಟ್ ಚೌಧರಿ ಹೇಳಿಕೆಯಲ್ಲಿ ತಿಳಿಸಿದ್ದಾರೆ.



# ಐರ್ಲೆಂಡ್ ವಿರುದ್ಧ ಕೊಹ್ಲಿ ಒಂದಂಕಿಗೆ ಸುಸ್ತು


ಟಿ20 ವಿಶ್ವಕಪ್‌ನಲ್ಲಿ ಭಾರತ ತಂಡವು ಐರ್ಲೆಂಡ್ ತಂಡವನ್ನು ಎಂಟು ವಿಕೆಟ್‌ಗಳಿಂದ ಸೋಲಿಸುವ ಮೂಲಕ ವಿಶ್ವಕಪ್‌ನಲ್ಲಿ ಉತ್ತಮ ಆರಂಭ ಮಾಡಿದೆ.

ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಐರ್ಲೆಂಡ್ ಕೇವಲ 96 ರನ್‌ಗಳಿಗೆ ಆಲೌಟ್ ಆಯಿತು ಗುರಿ ಬೆನ್ನಟ್ಟಿದ ಭಾರತ ತಂಡ ನಾಯಕ ರೋಹಿತ್ ಶರ್ಮಾ ಅವರ ಅರ್ಧಶತಕದ ಆಧಾರದ ಮೇಲೆ ಸುಲಭ ಜಯ ದಾಖಲಿಸಿತು.



ಆದರೆ ಈ ಪಂದ್ಯದಲ್ಲಿ ಟೀಂ ಇಂಡಿಯಾಗೆ ಉತ್ತಮ ಆರಂಭ ಒದಗಿಸುವಲ್ಲಿ ನೂತನ ಆರಂಭಿಕ ಜೋಡಿ ವಿಫಲವಾಗಿತ್ತು. ಪಂದ್ಯದಲ್ಲಿ ನಾಯಕ ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿ ಟೀಂ ಇಂಡಿಯಾ ಇನ್ನಿಂಗ್ಸ್ ಆರಂಭಿಸಿದ್ದರು. ಇದರಲ್ಲಿ ರೋಹಿತ್ ಶರ್ಮಾ ಅಮೋಘ ಬ್ಯಾಟಿಂಗ್ ಪ್ರದರ್ಶಿಸಿದರೆ, ವಿರಾಟ್ ಕೊಹ್ಲಿ ಒಂದಂಕಿಗೆ ಸುಸ್ತಾಗಿದ್ದರು.

ಈ ಆಟಗಾರರು ಮುಂದಿನ ಪಂದ್ಯದಲ್ಲಿ ಉತ್ತಮ ರನ್ ಗಳಿಸಲು ಬಯಸುತ್ತಾರೆ. ಕೊಹ್ಲಿ ಐರ್ಲೆಂಡ್ ವಿರುದ್ಧ ರನ್ ಗಳಿಸಲು ಸಾಧ್ಯವಾಗಲಿಲ್ಲ. ಆದರೆ ಈಗ ಅವರಿಗೆ ಉತ್ತಮ ರನ್‌ಗಳಿಸಲು ಪಾಕಿಸ್ತಾನಕ್ಕಿಂತ ಉತ್ತಮ ಅವಕಾಶ ಸಿಗುವುದಿಲ್ಲ ಎಂದಿದ್ದಾರೆ.



> ವಿರಾಟ್ ಕೊಹ್ಲಿ ಐರ್ಲೆಂಡ್ ವಿರುದ್ಧ 5 ಎಸೆತಗಳಲ್ಲಿ ಕೇವಲ ಒಂದು ರನ್ ಗಳಿಸಿ ಔಟಾದರು. ನಂತರ ಸ್ಟಾರ್ ಸ್ಪೋರ್ಟ್ಸ್‌ನಲ್ಲಿ ಮಾತನಾಡಿದ ಸುನಿಲ್ ಗವಾಸ್ಕರ್, ವಿರಾಟ್ ಕೊಹ್ಲಿ, ಸ್ಟೀವ್ ಸ್ಮಿತ್ ಮತ್ತು ಬಾಬರ್ ಆಝಂ ಅವರಂತಹ ಸ್ಟಾರ್ ಆಟಗಾರರು ಒಂದು ಪಂದ್ಯದಲ್ಲಿ ವಿಫಲವಾದ ನಂತರ ಮುಂದಿನ ಪಂದ್ಯದಲ್ಲಿ ಅದನ್ನು ಸರಿದೂಗಿಸಲು ಯೋಚಿಸುತ್ತಾರೆ ಎಂದು ನಾನು ನಂಬುತ್ತೇನೆ.

**ಅಚ್ಚರಿ ಮೂಡಿಸಿದ ಗವಾಸ್ಕರ್ ರಿಯಾಕ್ಷನ್..!**

ಕೊಹ್ಲಿ ಬಗ್ಗೆ ಗವಾಸ್ಕರ್ ಈ ರೀತಿ ಹೇಳಿರುವುದು ಅಚ್ಚರಿ ತರಿಸಿದೆ. ಏಕೆಂದರೆ ಈ ಹಿಂದೆ ನಡೆದ ಐಪಿಎಲ್‌ನಲ್ಲಿ ವಿರಾಟ್ ಕೊಹ್ಲಿ ಅದ್ಭುತವಾಗಿ ಬ್ಯಾಟ್ ಬೀಸಿ ರನ್‌ಗಳ ಶಿಖರ್ ಕಟ್ಟಿದ್ದರ ಹೊರತಾಗಿಯೂ ಸುನಿಲ್ ಗವಾಸ್ಕರ್, ಕೊಹ್ಲಿಯ ಸ್ಟ್ರೈಕ್ ರೇಟ್ ಅನ್ನು ಕೇಂದ್ರಿಕರಿಸಿ ಟೀಕಾ ಪ್ರಹಾರ ನಡೆಸಿದ್ದರು.ಆದರೀಗ ಕೊಹ್ಲಿ ಪರ ಗವಾಸ್ಕರ್ ಅವರ ಮೃಧು ಧೋರಣೆ ಎಲ್ಲರಲ್ಲೂ ಅಚ್ಚರಿ ಮೂಡಿಸಿದೆ

# ಭಾರತ ವಿರುದ್ಧದ ಪಂದ್ಯಕ್ಕೂ ಮುನ್ನ ಹೋಟೆಲ್ ಬದಲಿಸಿದ ಪಾಕ್ ತಂಡ

ಭಾರತ ಹಾಗೂ ಪಾಕಿಸ್ತಾನ ನಡುವಿನ ಹೈವೋಲ್ಟೇಜ್ ಕದನಕ್ಕೂ ಮುನ್ನ ಪಾಕ್ ತಂಡ ತನ್ನ ವಾಸ್ತವ್ಯವನ್ನು ಬೇರೆಗೆ ಶಿಫ್ಟ್ ಮಾಡಿದೆ. ವಾಸ್ತವವಾಗಿ, ನಮ್ಮ ತಂಡ ಹೋಟೆಲ್‌ನಿಂದ ಕ್ರೀಡಾಂಗಣಕ್ಕೆ ಹೋಗಲು 90 ನಿಮಿಷ ಬೇಕು ಎಂದು ಪಿಸಿಬಿ, ಐಸಿಸಿ ವಿರುದ್ಧ ದೂರಿತ್ತು.

ಟಿ20 ವಿಶ್ವಕಪ್‌ನಲ್ಲಿ ಐರ್ಲೆಂಡ್ ತಂಡವನ್ನು ಸೋಲಿಸುವ ಮೂಲಕ ಟೀಂ ಇಂಡಿಯಾ ಗೆಲುವಿನ ಆರಂಭ ಕಂಡಿದೆ. ಇದೀಗ ಟೀಂ ಇಂಡಿಯಾದ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನ ತನ್ನ ಆರಂಭಿಕ ಪಂದ್ಯವನ್ನು ಆಡಲು ಸಿದ್ಧವಾಗಿದೆ. ಪಾಕಿಸ್ತಾನ ತನ್ನ ಮೊದಲ ಪಂದ್ಯವನ್ನು ಆತಿಥೇಯ ಅಮೆರಿಕ ವಿರುದ್ಧ ಆಡಲಿದೆ.

ಆ ನಂತರ ಟೀಂ ಇಂಡಿಯಾ ಮತ್ತು ಪಾಕಿಸ್ತಾನ ನಡುವೆ ಜೂನ್ 9 ರಂದು ಹೈವೋಲ್ಟೇಜ್ ಮ್ಯಾಚ್ ನಡೆಯಲ್ಲಿದೆ. ಆದರೆ ಈ ಪಂದ್ಯಕ್ಕೂ ಮುನ್ನ ಐಸಿಸಿ ಮಹತ್ವದ ನಿರ್ಧಾರ ಕೈಗೊಂಡಿದೆ. ಇದರಿಂದ ಪಾಕಿಸ್ತಾನ ತಂಡಕ್ಕೆ ಹೆಚ್ಚಿನ ಲಾಭವಾಗಿದೆ.



ಅದೇನೆಂದರೆ.. ಈ ಉಭಯ ತಂಡಗಳ ಕದನಕ್ಕೂ ಮುನ್ನ ಪಾಕ್ ತಂಡ ತನ್ನ ವಾಸ್ತವ್ಯವನ್ನು ಬೇರೆಗೆ ಶಿಫ್ಟ್ ಮಾಡಿದೆ. ವಾಸ್ತವವಾಗಿ, ನಮ್ಮ ತಂಡ ಹೋಟೆಲ್‌ನಿಂದ ಕ್ರೀಡಾಂಗಣಕ್ಕೆ ಹೋಗಲು 90 ನಿಮಿಷ ಬೇಕು ಎಂದು ಪಿಸಿಬಿ, ಐಸಿಸಿ ವಿರುದ್ಧ ದೂರಿತ್ತು.

ಇದೀಗ ಪಾಕಿಸ್ತಾನ ಕ್ರಿಕೆಟ್ ಮಂಡಳಿಯ ದೂರಿನ ನಂತರ ಐಸಿಸಿ ನ್ಯೂಯಾರ್ಕ್‌ನಲ್ಲಿರುವ ಪಾಕಿಸ್ತಾನ ತಂಡದ ಹೋಟೆಲ್ ಅನ್ನು ಬದಲಾಯಿಸಿದೆ. ಅಧ್ಯಕ್ಷ ಮೊಹ್ಸಿನ್ ನಖ್ವಿ ಅವರ ಮಧ್ಯಸ್ಥಿಕೆಯ ನಂತರ, ಪಾಕಿಸ್ತಾನ ತಂಡವನ್ನು ಮೈದಾನದಿಂದ ಕೇವಲ ಐದು ನಿಮಿಷಗಳ ದೂರದಲ್ಲಿರುವ ಮತ್ತೊಂದು ಹೋಟೆಲ್‌ಗೆ ಸ್ಥಳಾಂತರಿಸಲಾಗಿದೆ ಎಂದು ಪಿಸಿಬಿ ಮೂಲಗಳು ತಿಳಿಸಿವೆ. ಪಾಕಿಸ್ತಾನವು ಭಾನುವಾರ ನ್ಯೂಯಾರ್ಕ್‌ನಲ್ಲಿ ಭಾರತವನ್ನು ಎದುರಿಸಬೇಕಾಗಿದೆ. ಆ ಬಳಿಕ ಜೂನ್ 11 ರಂದು ಕೆನಡಾವನ್ನು ಎದುರಿಸಲಿದೆ. ಆದರೆ ತಂಡದ ಹೋಟೆಲ್‌ಗೂ, ಕ್ರೀಡಾಂಗಣಕ್ಕೂ ಸಾಕಷ್ಟು ದೂರವಿದೆ. ಪ್ರಯಾಣವೇ ಆಟಗಾರರಿಗೆ ಪ್ರಯಾಸವಾಗುತ್ತಿದೆ ಎಂದು ಪಿಸಿಬಿ ದೂರಿತ್ತು. ಪಿಸಿಬಿಗೂ ಮುನ್ನ ಶ್ರೀಲಂಕಾ ಕ್ರಿಕೆಟ್ ತಂಡದ ಆಟಗಾರರು ಈ ಬಗ್ಗೆ ಅಸಮಾಧಾನ ಹೊರಹಾಕಿದ್ದರು. ದಕ್ಷಿಣ ಆಫ್ರಿಕಾ ವಿರುದ್ಧದ ಪಂದ್ಯದ ಬಳಿಕ ಮಾತನಾಡಿದ್ದ ಶ್ರೀಲಂಕಾ ಆಟಗಾರರು, ನಾವು ತಂಗಿರುವ ಹೋಟೆಲ್‌ಗೂ ಕ್ರೀಡಾಂಗಣಕ್ಕೂ ಸುಮಾರು 1 ಗಂಟೆ ಪ್ರಯಾಣ ಮಾಡಬೇಕಿದೆ. ಹೀಗಾಗಿ ಆಟಗಾರರು ಸಾಕಷ್ಟು ಸುಸ್ತಾಗುತ್ತಿದ್ದು, ಪಂದ್ಯದ ಮೇಲೆ ಗಮನ ಹರಿಸಲು ಸಾಧ್ಯವಾಗುತ್ತಿಲ್ಲ ಎಂದು ಆರೋಪ ಹೊರಿಸಿದ್ದರು.

# ಕೊಹ್ಲಿ ಕೊ ಬೌಲಿಂಗ್ ದೋ ನ್ಯೂಯಾರ್ಕ್ ಸ್ಟೇಡಿಯಂನಲ್ಲಿ ಮೊಳಗಿದ ಅಭಿಮಾನಿಗಳ ಕೂಗು



ಅಭಿಮಾನಿಗಳು ವಿರಾಟ್ ಅವರಿಗೆ ಬೌಲಿಂಗ್ ನೀಡುವಂತೆ ಆಗ್ರಹಿಸಲು ಒಂದು ಕಾರಣವಿದೆ. ಕಳೆದ ವರ್ಷ ನಡೆದಿದ್ದ ಏಕದಿನ ವಿಶ್ವಕಪ್ ಪಂದ್ಯದಲ್ಲಿ ಕೊಹ್ಲಿ ಬೌಲಿಂಗ್ ನಡೆಸಿ ವಿಕೆಟ್ ಕಿತ್ತು ಮಿಂಚಿದ್ದರು. ಚಿನ್ನಸ್ವಾಮಿ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ನೆದರ್ಲ್ಯಾಂಡ್ಸ್ ವಿರುದ್ಧದ ಪಂದ್ಯದಲ್ಲಿ ಕೊಹ್ಲಿ ನಾಯಕ ಸ್ಕಾಟ್ ಎಡ್ವರ್ಡ್ಸ್ ಅವರನ್ನು ಔಟ್ ಮಾಡಿದ್ದರು.

ಟೀಮ್ ಇಂಡಿಯಾದ ಘಾತಕ ಬೌಲಿಂಗ್ ದಾಳಿಗೆ ನೆಲಕಚ್ಚಿದ ಐರ್ಲೆಂಡ್‌ಕೇವಲ 96 ರನ್‌ಗೆ ಸರ್ವಪತನ ಕಂಡು ಹೀನಾಯ ಸೋಲು ಕಂಡಿತ್ತು.

ಇದೇ ಪಂದ್ಯದಲ್ಲಿ ಸ್ಟಾರ್ ಬ್ಯಾಟರ್ ವಿರಾಟ್ ಕೊಹ್ಲಿ ಅವರಿಗೆ ಬೌಲಿಂಗ್ ನೀಡುವಂತೆ ಪ್ರೇಕ್ಷಕರು ವಿಶೇಷವಾಗಿ ಮನವಿ ಮಾಡಿದ್ದರು. ಈ ವಿಡಿಯೊ ಸಾಮಾಜಿಕ ಜಾಲತಾಣದಲ್ಲಿ ಈಗ ವೈರಲ್‌ಆಗಿದೆ. ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ನಡೆಸಿದ ಐರ್ಲೆಂಡ್ ತಂಡದ ಬ್ಯಾಟರ್‌ಗಳು ಭಾರತೀಯ ಬೌಲರ್‌ಗಳ ಬಿಗಿ ದಾಳಿಗೆ ಸತತವಾಗಿ ವಿಕೆಟ್ ಕಳೆದುಕೊಳ್ಳುತ್ತಿದ್ದರು. ಇದನ್ನು ಗಮನಿಸಿದ ಭಾರತೀಯ ಅಭಿಮಾನಿಗಳು ಗ್ಯಾಲರಿಯಿಂದ ಜೋರಾಗಿ ಹಿಂದಿಯಲ್ಲಿ ''ಕೊಹ್ಲಿ ಕೊ ಬೌಲಿಂಗ್ ದೋ.ಕೊಹ್ಲಿ ಕೊ ಬೌಲಿಂಗ್ ದೋ'' ಎಂದು ಕೊಹ್ಲಿಗೆ ಬೌಲಿಂಗ್ ನೀಡುವಂತೆ ಆಗ್ರಹಿಸಿದ್ದಾರೆ. ಇದರ ವಿಡಿಯೊ ವೈರಲ್ ಆಗಿದೆ.

**ವಿಶ್ವಕಪ್ ಪಂದ್ಯದಲ್ಲಿ ಕೊಹ್ಲಿ ಬೌಲಿಂಗ್**

ಇದು 9 ವರ್ಷಗಳ ನಂತರ ಕೊಹ್ಲಿಗೆ ಲಭಿಸಿದ ವಿಕೆಟ್ ಆಗಿತ್ತು. ಐರ್ಲೆಂಡ್ ವಿರುದ್ಧದ ಪಂದ್ಯದಲ್ಲಿ ಆರಂಭಿನಾಗಿ ಕಣಕ್ಕಿಳಿದ ಕೊಹ್ಲಿ ಕೇವಲ 1 ರನ್ ಗಳಿಸಿ ವಿಫಲರಾದರು. ಇದಕ್ಕೂ ಮುನ್ನ ಐಪಿಎಲ್‌ನಲ್ಲಿ ಕೊಹ್ಲಿ ಪ್ರಚಂಡ ಬ್ಯಾಟಿಂಗ್ ನಡೆಸಿ ಟೂರ್ನಿಯಲ್ಲೇ ಅತ್ಯಧಿಕ ರನ್ ಗಳಿಸಿದ ಆಟಗಾರನಾಗಿ ಹೊರಹೊಮ್ಮಿದ್ದರು. ಭಾರತ ಮುಂದಿನ ಪಂದ್ಯವನ್ನು ಪಾಕಿಸ್ತಾನ ವಿರುದ್ಧ ಆಡಲಿದೆ. ಈ ಪಂದ್ಯದಲ್ಲಿ ಕೊಹ್ಲಿಯ ಮೇಲೆ ಹೆಚ್ಚಿನ ಭರವಸೆ ಇರಿಸಲಾಗಿದೆ. ಕೊಹ್ಲಿ ಪಾಕಿಸ್ತಾನ ವಿರುದ್ಧ ಇದುವರೆಗೂ ಉತ್ತಮ ಪ್ರದರ್ಶನ ತೋರಿದ್ದಾರೆ. 2022ರಲ್ಲಿ ನಡೆದಿದ್ದ ಟಿ20 ವಿಶ್ವಕಪ್‌ನಲ್ಲಿ ಕೊಹ್ಲಿ ಏಕಾಂಗಿಯಾಗಿ ಹೋರಾಡಿ ಪಾಕ್‌ಗೆ ಸೋಲುಣಿಸಿದ್ದರು.

**4 ವಿಕಟ್ ಪಡೆದ ಸಾಧನೆ**

**ವಿರಾಟ್ ಕೊಹ್ಲಿ ಕೂಡ ಬೌಲಿಂಗ್ ಅನುಭವವನ್ನು ಹೊಂದಿದ್ದಾರೆ. 2015ರ ವಿಶ್ವಕಪ್‌ನಲ್ಲಿ ಆಸೀಸ್ ವಿರುದ್ಧ ಮತ್ತು ಇದಕ್ಕೂ ಮುನ್ನ 2011ರಲ್ಲಿ ನಡೆದಿದ್ದ ವಿಶ್ವಕಪ್ ಫೈನಲ್ ಪಂದ್ಯದಲ್ಲಿ ಬೌಲಿಂಗ್ ನಡೆಸಿದ್ದರು. ಇಲ್ಲಿ ತಲಾ ಓವರ್ ಬೌಲಿಂಗ್ ನಡೆಸಿ ವಿಕೆಟ್ ಪಡೆಯದಿದ್ದರೂ ಉತ್ತಮ ರನ್ ಕಂಟ್ರೋಲ್ ಮಾಡಿದ್ದರು. ಏಕದಿನದಲ್ಲಿ ಕೊಹ್ಲಿ 5 ವಿಕೆಟ್, ಟಿ20 ಮತ್ತು ಐಪಿಎಲ್‌ನಲ್ಲಿಯೂ ತಲಾ 4 ವಿಕಟ್ ಪಡೆದ ಸಾಧನೆ ಮಾಡಿದ್ದಾರೆ. ಹೀಗಾಗಿ ಕೊಹ್ಲಿಗೆ ಬೌಲಿಂಗ್ ನೀಡುವಂತೆ ಅಭಿಮಾನಿಗಳು ಆಗ್ರಹಿಸಿದ್ದಾರೆ. ಕಳೆದ ವರ್ಷ ಏಕದಿನ ವಿಶ್ವಕಪ್‌ನಲ್ಲಿಯೂ ಅಭಿಮಾನಿಗಳು ಕೊಹ್ಲಿಗೆ ಬೌಲಿಂಗ್ ನೀಡುವಂತೆ ಆಗ್ರಹಿಸಿದ್ದರು.**

# ಡಾಲಿ ಧನಂಜಯ 'ಕೋಟಿ' ಟ್ರೈಲರ್ ಔಟ್



ಡಾಲಿ ಧನಂಜಯ ಅಭಿನಯದ 'ಕೋಟಿ' ಸಿನಿಮಾದ ಟ್ರೈಲರ್ ಬಿಡುಗಡೆಯಾಗಿದೆ. ಧನಂಜಯ ಅವರು ಕೋಟಿ ಎಂಬ ಒಬ್ಬ ಸಾಮಾನ್ಯ ಡ್ರೈವರ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಕೋಟಿಗೆ ಯಾರಿಗೂ ಮೋಸ ಮಾಡದೆ, ನೋವು ನೀಡದೆ ಒಂದು ಕೋಟಿ ರೂಪಾಯಿ ದುಡಿದು ತನ್ನ ಕುಟುಂಬವನ್ನು ಚೆನ್ನಾಗಿ ನೋಡಿಕೊಳ್ಳುವ ಬಯಕೆ. ಕೋಟಿಯ ಈ ಪಯಣದ ಕಥಾಹಂದರವನ್ನು ಹೊಂದಿರುವ ಈ ಸಿನಿಮಾ ಇದೇ ಜೂನ್ 14ಕ್ಕೆ ಬಿಡುಗಡೆಯಾಗಲಿದೆ. ಧನಂಜಯ ಅವರ ಸಾಮಾನ್ಯ ವ್ಯಕ್ತಿಯ ಗೆಟಪ್, ರಮೇಶ್ ಇಂದಿರಾ ಅವರ ನಟೋರಿಯಸ್ ವಿಲನ್ ಪಾತ್ರ, ತಾರಾ ಅವರ ತಾಯಿಯ ಪಾತ್ರ, ಕ್ವಾಲಿಟಿ ವಿಶುವಲ್ಸ್, ಮತ್ತೆ ಮತ್ತೆ ಕೇಳಬೇಕೆನಿಸುವ ಹಿನ್ನೆಲೆ ಸಂಗೀತ, ಹುಲಿವೇಷ ಇವೆಲ್ಲವು ಟ್ರೇಲರ್ ರಿಲೀಸ್ ಕಾರ್ಯಕ್ರಮದಲ್ಲಿ ನೆರೆದಿದ್ದವರ ಗಮನ ಸೆಳೆಯಿತು.

ನಾಯಕ ನಟ ಡಾಲಿ ಧನಂಜಯ ಇದೊಂದು ಮಿಡಲ್ ಕ್ಲಾಸ್ ಸಾಮಾನ್ಯ ವ್ಯಕ್ತಿಯ ಕತೆ. ಇದು ಎಲ್ಲರಿಗೂ ಕನೆಕ್ಟ್ ಆಗುವ ಫ್ಯಾಮಿಲಿ ಕಥೆ ಎಂದು ತಿಳಿಸಿದರು. ಟ್ರೈಲರ್ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ನಿರ್ದೇಶಕ ಪರಮ್, ಇದೊಂದು ಕಂಟೆಂಟ್ ಇರುವ ಕಮರ್ಷಿಯಲ್ ಸಿನಿಮಾ. ಒಂದೊಳ್ಳೆ ಕತೆ, ಒಳ್ಳೆಯ ಮನರಂಜನೆ ಗ್ಯಾರಂಟಿ ಎಂದರು.

ಅಪ್ಪಟ ಕನ್ನಡ ಮಣ್ಣಿನ ಕತೆಯಾದ ಕೋಟಿ ಈಗಾಗಲೇ ಟೀಸರ್ ಮತ್ತು ಹಾಡುಗಳ ಮುಖಾಂತರ ಸದ್ದು ಮಾಡುತ್ತಿದೆ. ವರ್ಷದ ಮೊದಲಾರ್ಧದಲ್ಲಿ ಯಾವುದೇ ದೊಡ್ಡ ಗೆಲುವು ಕಾಣದೆ ಕಂಗೆಟ್ಟಿರುವ ಕನ್ನಡ ಇಂಡಸ್ಟ್ರಿಗೆ 'ಕೋಟಿ' ಗೆಲ್ಲುವ ಭರವಸೆಯಾಗಿ ಕಂಡಿದೆ. ಕೋಟಿ ಚಿತ್ರದ ತಾರಾಗಣದಲ್ಲಿ ಡಾಲಿ ಧನಂಜಯ ಜೊತೆ ನಾಯಕಿಯಾಗಿ ಮೋಕ್ಷಾ ಕುಶಾಲ್ ಮತ್ತು ಖಳನಾಯಕನಾಗಿ ರಮೇಶ್ ಇಂದಿರಾ ನಟಿಸಿದ್ದಾರೆ. ಉಳಿದಂತೆ ಹಿರಿಯ ನಟರಾದ ರಂಗಾಯಣ ರಘು, ತಾರಾ, ಸರ್ದಾರ್ ಸತ್ಯ ಜೊತೆಗೆ ಪೃಥ್ವಿ ಶಾಮನೂರು, ತನುಜಾ ವೆಂಕಟೇಶ್, ಅಭಿಷೇಕ್ ಶ್ರೀಕಾಂತ್, ವಿಜಯ್ ಶೋಭರಾಜ್ ಪವೂರ್ ಮುಂತಾದವರು ಅಭಿನಯಿಸಿದ್ದಾರೆ.

ಚಿತ್ರದಲ್ಲಿ ಐದು ಹಾಡುಗಳಿದ್ದು ವಾಸುಕಿ ವೈಭವ್ ರಾಗ ಸಂಯೋಜಿಸಿದ್ದಾರೆ. ಈ ಹಾಡುಗಳಿಗೆ ಯೋಗರಾಜ್ ಭಟ್ ಮತ್ತು ವಾಸುಕಿ ವೈಭವ್ ಸಾಹಿತ್ಯ ರಚಿಸಿದ್ದಾರೆ. ಹಿನ್ನೆಲೆ ಸಂಗೀತದ ಜವಾಬ್ದಾರಿಯನ್ನು '777 ಚಾರ್ಲಿ' ಖ್ಯಾತಿಯ ನೊಬಿನ್ ಪೌಲ್ ಹೊತ್ತಿದ್ದಾರೆ.



# ಮಾಧವನ್ ಜೊತೆ ಕಾಣಿಸಿಕೊಂಡ ಮೇಘಾ ಶೆಟ್ಟಿ


ಸ್ಯಾಂಡಲ್‌ವುಡ್ ನಟಿ ಮೇಘಾ ಶೆಟ್ಟಿ ಸದ್ಯ 'ಗ್ರಾಮಾಯಣ' ಸೇರಿದಂತೆ ಹಲವು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಸೌತ್ ನಟ ಆರ್. ಮಾಧವನ್ ಜೊತೆ ಮೇಘಾ ಸೆಲ್ಫಿ ಕ್ಲಿಕ್ಕಿಸಿಕೊಂಡಿರುವ ಫೋಟೋ ಸೋಷಿಯಲ್ ಮೀಡಿಯಾದಲ್ಲಿ ಶೇರ್ ಮಾಡಿದ್ದಾರೆ. ಈ ಬೆನ್ನಲ್ಲೇ, ನಟಿ ತಮಿಳು ಸಿನಿಮಾ ಮಾಡ್ತಿದ್ದಾರಾ? ಎಂಬ ಚರ್ಚೆ ಶುರುವಾಗಿದೆ.



'ಜೊತೆ ಜೊತೆಯಲಿ' ಸೀರಿಯಲ್ ಮೂಲಕ ಗಮನ ಸೆಳೆದ ಮೇಘಾ ಶೆಟ್ಟಿ ಇದೀಗ ಮಾಧವನ್ ಜೊತೆ ಫೋಟೋ ಕ್ಲಿಕ್ಕಿಸಿ ಕೊಂಡು ಸಂಭ್ರಮಿಸಿದ್ದಾರೆ. ಅದ್ಭುತ ನಟನೊಂದಿಗೆ ಚರ್ಚೆ ಮಾಡುತ್ತಾ ಸಮಯ ಕಳೆದೆ. ಒಂದೊಳ್ಳೆಯ ಕಲಿಕೆಯ ಅನುಭವ ಎಂದು ನಟಿ ಬರೆದುಕೊಂಡಿದ್ದಾರೆ. ನಟಿಯ ಪೋಸ್ಟ್ ವೈರಲ್ ಆಗ್ತಿದ್ದಂತೆ ಬಗೆ ಬಗೆಯ ಕಾಮೆಂಟ್‌ಗಳು ಹರಿದು ಬರುತ್ತಿವೆ.

ಮಾಧವನ್ ಜೊತೆ ನಟಿ ತಮಿಳು ಸಿನಿಮಾ ಮಾಡ್ತಿದ್ದಾರಾ? ರಶ್ಮಿಕಾ ಮಂದಣ್ಣ ಶ್ರೀಲೀಲಾರಂತೆಯೇ ಮೇಘಾ ಶೆಟ್ಟಿ ಕೂಡ ಪರಭಾಷೆಗಳಲ್ಲಿ ಬ್ಯುಸಿಯಾಗ್ತಾರಾ? ಎಂಬ ಅಭಿಮಾನಿಗಳಲ್ಲಿ ಪ್ರಶ್ನೆ ಮೂಡಿದೆ. ನೆಟ್ಟಿಗರ ಚರ್ಚೆಗೂ ಗ್ರಾಸವಾಗಿದೆ. ಅಂದಹಾಗೆ, 'ಆಪರೇಷನ್ ಲಂಡನ್ ಕೆಫೆ' ಸಿನಿಮಾ ಹಲವು ಭಾಷೆಗಳಲ್ಲಿ ಮೂಡಿ ಬಂದಿದೆ. ಪ್ರಜ್ವಲ್ ದೇವರಾಜ್ ಜೊತೆ ಚೀತಾ, ವಿನಯ್ ರಾಜ್‌ಕುಮಾರ್ ಜೊತೆ ಗ್ರಾಮಾಯಣ ಸೇರಿದಂತೆ ಹಲವು ಚಿತ್ರಗಳು ಮೇಘಾ ಶೆಟ್ಟಿ ಕೈಯಲ್ಲಿವೆ.

# ಅರ್ಜುನ್ ಸರ್ಜಾ ಪುತ್ರಿ ಮದುವೆ



ಆಯಕ್ಷನ್ ಕಿಂಗ್ ಅರ್ಜುನ್ ಸರ್ಜಾ ಪುತ್ರಿ ಐಶ್ವರ್ಯಾ ಸರ್ಜಾ ಮದುವೆಗೆ ಭರ್ಜರಿ ತಯಾರಿ ನಡೆಯುತ್ತಿದೆ. ಇದೇ ಜೂನ್ 10ರಂದು ಚೆನ್ನೈ ಹನುಮಾನ್ ದೇವಸ್ಥಾನದಲ್ಲಿ ಐಶ್ವರ್ಯಾ ಮತ್ತು ಉಮಾಪತಿ ಮದುವೆ ಅದ್ದೂರಿಯಾಗಿ ಜರುಗಲಿದೆ. ಜೂನ್ 14ರಂದು ಆರತಕ್ಷತೆ ಕಾರ್ಯಕ್ರಮವನ್ನು ಆಯೋಜಿಸಿದ್ದಾರೆ.

ಐಶ್ವರ್ಯಾ ಮತ್ತು ತಮಿಳು ನಟ ಉಮಾಪತಿ ರಾಮಯ್ಯ ಹಲವು ವರ್ಷಗಳಿಂದ ಪ್ರೀತಿಸುತ್ತಿದ್ದರು. ಇಬ್ಬರ ಪ್ರೀತಿಗೆ ಎರಡು ಕುಟುಂಬದ ಸಮ್ಮತಿಯ ಮೇರೆಗೆ ಇತ್ತೀಚೆಗೆ ಅದ್ದೂರಿಯಾಗಿ ಎಂಗೇಂಜ್‌ಮೆಂಟ್ ನಡೆದಿತ್ತು. ಈಗ ಜೂನ್ 10ಕ್ಕೆ ದಾಂಪತ್ಯ ಜೀವನಕ್ಕೆ ಕಾಲಿಡಲು ನಟಿ ರೆಡಿಯಾಗಿದ್ದಾರೆ.

ಮಗಳ ಮದುವೆಗೆ ಕನ್ನಡದ ಹೆಸರಾಂತ ನಟ ಜಗ್ಗೇಶ್ ಸೇರಿದಂತೆ ಅನೇಕರಿಗೆ ಆಮಂತ್ರಣ ನೀಡಿದ್ದಾರೆ ಅರ್ಜುನ್ ಸರ್ಜಾ ದಂಪತಿ. ಸ್ಯಾಂಡಲ್‌ವುಡ್ ಮತ್ತು ಸೌತ್‌ನ ಅನೇಕ ನಟ, ನಟಿಯರಿಗೆ ಮತ್ತು ರಾಜಕೀಯ ಕ್ಷೇತ್ರದಲ್ಲಿರುವ ಗಣ್ಯರಿಗೆ ಮದುವೆ ಆಹ್ವಾನ ನೀಡಿದ್ದಾರೆ.

ಅಂದಹಾಗೆ, ಐಶ್ವರ್ಯಾ ಅವರು 2018ರಲ್ಲಿ 'ಪ್ರೇಮ ಬರಹ' ಚಿತ್ರದಲ್ಲಿ ಬಿಗ್ ಬಾಸ್ ಖ್ಯಾತಿಯ ಚಂದನ್ ಕುಮಾರ್‌ಗೆ ನಾಯಕಿಯಾಗಿದ್ದರು. ಮಗಳ ಚಿತ್ರಕ್ಕೆ ಅರ್ಜುನ್ ಸರ್ಜಾ ನಿರ್ದೇಶನ ಮಾಡಿದ್ದರು. ಈ ಚಿತ್ರ ಕನ್ನಡ ಮತ್ತು ತಮಿಳಿನಲ್ಲಿ ತೆರೆಕಂಡಿತ್ತು

ಸಿನಿ ವಾಹಿನಿ

# ಅದಿತಿ ಬದಲು ಆಶಿಕಾ ರಂಗನಾಥ್‌ಗೆ 'ಮಿಸ್ ಯೂ' ಎಂದ ಸಿದ್ಧಾರ್ಥ್

ತಮಿಳು ನಟ ಸಿದ್ಧಾರ್ಥ್ ಇದೀಗ ಭಾವಿ ಪತ್ನಿ ಅದಿತಿ ರಾವ್ ಹೈದರಿ ಬದಲು ಕನ್ನಡತಿ ಆಶಿಕಾ ರಂಗನಾಥ್‌ಗೆ 'ಮಿಸ್ ಯೂ' ಎಂದಿದ್ದಾರೆ. ರಿಯಲ್ ಲೈಫ್ ಬದಲು ರೀಲ್ ಲೈಫ್‌ನಲ್ಲಿ ಆಶಿಕಾಗೆ ಮಿಸ್ ಯೂ ಎಂದಿದ್ದಾರೆ. ಲವರ್ ಬಾಯ್ ಸಿದ್ಧಾರ್ಥ್ ಇದೀಗ ಆಶಿಕಾ ಜೊತೆ ಹೊಸ ಸಿನಿಮಾ ಮಾಡ್ತಿದ್ದಾರೆ. ಹಾಗಾಗಿ ನಟನ ಪಾತ್ರದ ಲುಕ್ ಅನ್ನು ಚಿತ್ರತಂಡ ಅನಾವರಣ ಮಾಡಿದೆ. ಟ್ರಾವೆಲ್ ಮೂಡ್‌ನಲ್ಲಿರುವ ಸಿದ್ಧಾರ್ಥ್ ಬ್ಯಾಗ್ ಹಿಡಿದು ಬರುತ್ತಿರುವ ಲುಕ್ ಅನ್ನು ಮಿಸ್ ಯೂ' ಚಿತ್ರತಂಡ ರಿವೀಲ್ ಮಾಡಿದೆ. ನಟನ ಫಸ್ಟ್ ಲುಕ್‌ಗೆ ಅಭಿಮಾನಿಗಳಿಂದ ಉತ್ತಮ ರೆಸ್ಪಾನ್ಸ್ ಸಿಕ್ಕಿದೆ. ಮಿಸ್ ಯೂ' ಸಿನಿಮಾದ ಮೂಲಕ ಮತ್ತೆ ಸಿದ್ಧಾರ್ಥ್ ಹೊಸ ಪ್ರೇಮ ಕಥೆಯನ್ನು ಹೇಳೋಕೆ ಹೊರಟಿದ್ದಾರೆ. ಕನ್ನಡದ ನಟಿ ಆಶಿಕಾ ಜೊತೆ ರೊಮ್ಯಾನ್ಸ್ ಮಾಡಲು ರೆಡಿಯಾಗಿದ್ದಾರೆ. ಮೊದಲ ಬಾರಿಗೆ ಜೊತೆಯಾಗಿ ನಟಿಸುತ್ತಿರುವ ಕಾರಣ, ಸಿನಿಮಾ ಬಗ್ಗೆ ಫ್ಯಾನ್ಸ್‌ಗೆ ಭಾರೀ ನಿರೀಕ್ಷೆಯಿದೆ. 7 ಮೈಲ್ಸ್ ಪರ ಸೆಕೆಂಡ್ ಪ್ರೊಡಕ್ಷನ್ ಬ್ಯಾನರ್ ಅಡಿಯಲ್ಲಿ ಸ್ಯಾಮ್ಯುಯೆಲ್ ಮ್ಯಾಥ್ಯೂ ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ಕರುಣಾಕರನ್, ಬಾಲಾ, ಸಾಸ್ತಿಕಾ ರಾಜೇಂದ್ರನ್ ಮುಂತಾದವರು ಪ್ರಮುಖ ಪಾತ್ರದಲ್ಲಿ ನಟಿಸಲಿದ್ದಾರೆ.



# ಹುಟ್ಟುಹಬ್ಬದಂದು ಗುಡ್ ನ್ಯೂಸ್ ಕೊಟ್ಟ ರಕ್ಷಿತ್ ಶೆಟ್ಟಿ

ಸ್ಯಾಂಡಲ್‌ವುಡ್ ನಟ ರಕ್ಷಿತ್ ಶೆಟ್ಟಿ ಜೂನ್ 6ರಂದು ಹುಟ್ಟುಹಬ್ಬ ಆಚರಿಸಿಕೊಳ್ತಿದ್ದಾರೆ. ಈ ದಿನ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. 41ನೇ ವರ್ಷಕ್ಕೆ ಕಾಲಿಟ್ಟಿರುವ 'ಸಿಂಪಲ್ ಸ್ಟಾರ್' ಇದೀಗ ತಮ್ಮ ಮುಂದಿನ ಪ್ರಾಜೆಕ್ಟ್ ಬಗ್ಗೆ ಬಿಗ್ ಅಪ್‌ಡೇಟ್ ಹಂಚಿಕೊಂಡಿದ್ದಾರೆ.

'ಏಕಂ' ಎಂಬ ವೆಬ್ ಸಿರೀಸ್ ಬಗ್ಗೆ ನಟ ಮಾಹಿತಿ ನೀಡಿದ್ದಾರೆ. ರಕ್ಷಿತ್ ಸೋಷಿಯಲ್ ಮೀಡಿಯಾದಲ್ಲಿ ಶೇರ್ ಮಾಡಿರುವ ವಿಡಿಯೋ ಕ್ಲಿಪ್‌ನಲ್ಲಿ, ಕೆಸರು ನೀರು ತುಂಬಿಕೊಂಡಿರುವ



ದಾರಿ ಮಧ್ಯೆ ಸಣ್ಣ ಒಂದು ಭಾಗದಲ್ಲಿ ಜನರು ಮೆಟ್ಟಿಕೊಂಡೇ ಓಡಾಡುತ್ತಿರುವ ದೃಶ್ಯವನ್ನು ಹಂಚಿಕೊಂಡಿದ್ದಾರೆ. ಏಕಂ ಬಗ್ಗೆ ಅಪ್‌ಡೇಟ್ ತರುತ್ತಿದ್ದೇವೆ. ಈ ಸ್ಥಳವನ್ನು ತುಂಬಾ ಹತ್ತಿರದಿಂದ ನೋಡಿ. ಮಚ್ ಲವ್ ಎಂದು ನಟ ಬರೆದುಕೊಂಡಿದ್ದಾರೆ. ಜೂನ್ 17ರಂದು ಅಧಿಕೃತ ಮಾಹಿತಿ ನೀಡುತ್ತೇವೆ ಎಂದಿದ್ದಾರೆ.

ರಕ್ಷಿತ್ ಶೆಟ್ಟಿ ತಮ್ಮ ನಿರ್ಮಾಣ ಸಂಸ್ಥೆಯಿಂದ ಒಟಿಟಿ ಫ್ಲಾಟ್ ಫಾರಂಗೆ 8 ಎಪಿಸೋಡ್‌ಗಳ 'ಏಕಂ' ವೆಬ್ ಸಿರೀಸ್ ನಿರ್ಮಾಣ ಮಾಡಿದ್ದಾರೆ. ಅವರೇ ನಿರ್ದೇಶನ ಕೂಡ ಮಾಡಿದ್ದಾರೆ ಎನ್ನಲಾಗಿದೆ. ಸದ್ಯದಲ್ಲೇ ಅಧಿಕೃತ ಮಾಹಿತಿ ಹೊರಬೀಳಲಿದೆ. 'ರಿಚರ್ಡ್ ಆಯಂಟನಿ' ಸಿನಿಮಾ ಸೇರಿದಂತೆ ರಕ್ಷಿತ್ ಹಲವು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ನಟನೆ, ನಿರ್ದೇಶನ ಮತ್ತು ನಿರ್ಮಾಣ ಅಂತ ನಟ ತೊಡಗಿಸಿಕೊಂಡಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966